ಸಂಪುಟ: 04 ಸಂಚಿಕೆ: 180 ಪುಟಗಳು: 08 ಗುರುವಾರ 12 ಸೆಪ್ಟೆಂಬರ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ನಮ್ಮ ಆಲೋಚನೆಗಳೇ ನಮ್ಮನ್ನು ರೂಪಿಸುತ್ತವೆ. ಆದ್ದರಿಂದ ಏನನ್ನು ಯೋಚಿಸುತ್ತೀರೋ ಅದರ ಬಗ್ಗೆ ಎಚ್ಚರದಿಂದಿರಿ.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಬಿಜೆಪಿ ಪ್ರಧಾನ ಕಚೇರಿಯಲ್ಲಿ ಭದ್ರತೆ ಇನ್ನಷ್ಟು ಬಿಗಿ ಭದ್ರತೆ

• ಉದಯವಾಹಿನಿ, ಬೆಂಗಳೂರು

ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ನಾಲ್ವರು ಆರೋಪಿಗಳ ವಿರುದ್ಧ ಎನ್‌ಐಎ ಸಲ್ಲಿಸಿರುವ ಚಾರ್ಜ್‌ಶೀಟ್‌ನಲ್ಲಿ ಅಯೋಧ್ಯೆಯಲ್ಲಿ ರಾಮಮಂದಿರ ಪ್ರಾಣ ಪ್ರತಿಷ್ಠಾಪನೆ ಸಮಾರಂಭದ ದಿನ ನಡೆದ ವಿಫಲ ಐಇಡಿ ದಾಳಿ ಯತ್ನ ಬಹಿರಂಗವಾದ ನಂತರ ಬಿಜೆಪಿ ರಾಜ್ಯ ಕಚೇರಿ ಮತ್ತು ಸುತ್ತಮುತ್ತ ಭದ್ರತೆಯನ್ನು ಇನ್ನಷ್ಟು ಬಿಗಿಗೊಳಿಸಲಾಗಿದೆ. ವಾಡಿಕೆಯಂತೆ, ಯಾವಾಗಲೂ ಸಿವಿಲ್ ಉಡುಪುಗಳಲ್ಲಿ ಪೊಲೀಸ್ ಅಧಿಕಾರಿಗಳನ್ನು ನಿಯೋಜಿಸಲಾಗುತ್ತಿತ್ತು.

25 ಜನರನ್ನು ಒಳಗೊಂಡ ಕರ್ನಾಟಕ ರಾಜ್ಯ ಮೀಸಲು ಪೊಲೀಸರ ತಂಡವೂ ಇರುತ್ತಿತ್ತು. ಈಗ ಭದ್ರತೆಯನ್ನು ಬಲಪಡಿಸಿದ್ದು ಕಟ್ಟುನಿಟ್ಟಾದ ಜಾಗರೂಕತೆಯನ್ನು ಹೊಂದಲು ಮತ್ತು ಕಚೇರಿ ಆವರಣದ ಎಲ್ಲಾ ಪ್ರವೇಶ ಮತ್ತು ನಿರ್ಗಮನ ಸ್ಥಳಗಳನ್ನು ಪರಿಶೀಲಿಸಲು ಅವರಿಗೆ ತಿಳಿಸಿದ್ದೇವೆ ಎಂದು ಹಿರಿಯ ಪೊಲೀಸ್ ಅಧಿಕಾರಿ ಬುಧವಾರ(ಸೆ11) ತಿಳಿಸಿದ್ದಾರೆ. ಮೆಟಲ್ ಡಿಟೆಕ್ಟರ್‌ಗಳು, ಡೋರ್ ಸ್ಕ್ಯಾನರ್‌ಗಳನ್ನು ಅಳವಡಿಸಲು ಮತ್ತು ಕಣ್ಗಾವಲಾಗಿ ಎಲ್ಲಾ ಪ್ರದೇಶಗಳಲ್ಲಿ ಸಿಸಿಟಿವಿ ಕೆಮರಾಗಳನ್ನು ಅಳವಡಿಸುವಂತೆ ಪೊಲೀಸರು ಬಿಜೆಪಿಗೆ ಸೂಚನೆ ನೀಡಿದ್ದಾರೆ.

## ಎಚ್‌ಎಂಟಿ ಸಂಸ್ಥೆಗೆ ಮರು ಜೀವ ನೀಡಲು ಸಿದ್ಧರಾದ ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್ ಡಿ ಕುಮಾರಸ್ವಾಮಿ ಎಚ್ ಎಂಟಿ ಸಂಸ್ಥೆಗೆ ಮರು ಜೀವ ನೀಡಲು ಮುಂದಾಗಿದ್ದಾರೆ. ಇದಕ್ಕಾಗಿ ಕೇಂದ್ರದಿಂದ ಹೂಡಿಕೆ ಮಾಡಲು ಯೋಜನೆ ನಡೆಸಿದ್ದಾರೆ ಎನ್ನಲಾಗಿದೆ. ಬೆಂಗಳೂರಿನಲ್ಲಿದ್ದ ಎಚ್ ಎಂಟಿ ಸಂಸ್ಥೆ 2016 ರಲ್ಲಿ ಸ್ಥಗಿತವಾಗಿತ್ತು. ಕಂಪನಿ ನಷ್ಟದಲ್ಲಿ ಸಾಗುತ್ತಿತ್ತು ಎನ್ನುವ ಕಾರಣಕ್ಕೆ ಇದನ್ನು ಬಂದ್ ಮಾಡಲಾಗಿತ್ತು. ಆದರೆ ಇದರಿಂದ ಅನೇಕರು ಉದ್ಯೋಗ ಕಳೆದುಕೊಳ್ಳುವಂತಾಯಿತು. ಇದೀಗ ಕುಮಾರಸ್ವಾಮಿ ಎಚ್ ಎಂಟಿ ಸಂಸ್ಥೆಗೆ ಮರುಜೀವ ನೀಡಲು ಜಿದ್ದಿಗೆ ಬಿದ್ದಿದ್ದಾರೆ. ಇದಕ್ಕೆ ಮರು ಜೀವ ನೀಡಲು ಕೇಂದ್ರ ಸರ್ಕಾರದಿಂದ ಸಹಾಯ ಪಡೆಯಲು ಮುಂದಾಗಿದ್ದಾರೆ. ಕೇಂದ್ರದ ಅನುದಾನ ಪಡೆದು ಮತ್ತೆ ಸಂಸ್ಥೆ ಪುನರಾರಂಭಿಸಲು ಸಿದ್ಧತೆ ನಡೆಸಿದ್ದಾರೆ. ಇದರ ಅಂಗವಾಗಿಯೇ ಇತ್ತೀಚೆಗೆ ಎಲ್ಲಾರೂ ಎಚ್ ಎಂಟಿ ವಾಚ್ ಗಳನ್ನು ಉಡುಗೊರೆಯಾಗಿ ನೀಡಿ ಎಂದು ಕರೆ ನೀಡಿದ್ದರು. ಸಚಿವ ಕುಮಾರಸ್ವಾಮಿಯವರ ಈ ಯೋಜನೆಯಿಂದ ಮತ್ತಷ್ಟು ಉದ್ಯೋಗ ಸೃಷ್ಟಿಯಾಗಬಹುದು. ರಾಜ್ಯದ ಹಲವರಿಗೆ ಉದ್ಯೋಗ ಸಿಗಬಹುದು. ಎಚ್ ಎಂಟಿ ವಾಚು ತಯಾರಿಕೆ ಕಂಪನಿ ಪುನರಾರಂಭಿಸಲು 6,500 ಕೋಟಿ ಹೂಡಿಕೆ ಮಾಡಲು ಕೇಂದ್ರ ಸಮ್ಮತಿ ನೀಡಿದೆ. ರೋಬೋಟಿಕ್ ತಂತ್ರಜ್ಞಾನ ಬಳಸಿ ಹೊಸ ಬಗೆಯ ವಾಚ್ ತಯಾರಿಕೆ ನೀಲನಕ್ಷೆಯನ್ನೂ ಸಿದ್ಧಪಡಿಸಿದ್ದಾರೆ. ಈ ಬಗ್ಗೆ ತಜ್ಞರ ಜೊತೆ ಕುಮಾರಸ್ವಾಮಿ ಮಾತುಕತೆಯನ್ನೂ ನಡೆಸಿದ್ದಾರೆ.

## ಪ್ರಸಂಗ ಬಂದರೆ 'ಸಿಎಂ' ಸ್ಥಾನಕ್ಕೆ ನಾನು ಸ್ಪರ್ಧೆ ಮಾಡುತ್ತೇನೆ

• ಉದಯವಾಹಿನಿ, ದಾವಣಗೆರೆ

ಸದ್ಯ ರಾಜ್ಯದಲ್ಲಿ ಕಾಂಗ್ರೆಸ್ ನಾಯಕರ ಸಿಎಂ ಆಕಾಂಕ್ಷಿಗಳ ಪಟ್ಟಿ ದಿನದಿಂದ ದಿನಕ್ಕೆ ಬೆಳೆಯುತ್ತಲೇ ಹೋಗುತ್ತಿದೆ. ಹಿರಿಯ ನಾಯಕರಾದ ಆರ್ ವಿ ದೇಶಪಾಂಡೆ, ಸಚಿವರಾದ ಶಿವಾನಂದ ಪಾಟೀಲ್, ಎಂ ಬಿ ಪಾಟೀಲ್ ಸೇರಿದಂತೆ ಸಿಎಂ ಸ್ಥಾನದ ಕುರಿತಾಗಿ ತಮ್ಮ ಅಭಿಪ್ರಾಯ ತಿಳಿಸಿದ್ದಾರೆ. ಇದೀಗ ದಾವಣಗೆರೆಯಲ್ಲಿ ಕಾಂಗ್ರೆಸ್ಸಿನ ಹಿರಿಯ ಶಾಸಕ ಶಮಣರು ಶಿವಶಂಕರಪ್ಪ ಅವರು ಪ್ರಸಂಗ ಬಂದರೆ ನಾನು ಕೂಡ ಸಿಎಂ ಸ್ಥಾನಕ್ಕೆ ಸ್ಪರ್ಧೆ ಮಾಡುತ್ತೇನೆ ಎಂದು ತಿಳಿಸಿದರು. ರಾಜಕೀಯದಲ್ಲಿ ಸೀನಿಯರ್, ಜೂನಿಯರ್ ಎಂಬ ಪ್ರಶ್ನೆ ಬರುವುದಿಲ್ಲ. ಹೈಕಮಾಂಡ್ ಯಾರನ್ನು ಹೇಳುತ್ತಾರೋ ಅವರೆ ಫೈನಲ್. ಚುನಾಯಿತ ಶಾಸಕರು ಯಾರಿಗೆ ಬಹುಮತ ಕೊಡುತ್ತಾರೋ ಅವರಿಗೆ ನಮ್ಮ ಹೈಕಮಾಂಡ್ ಸೂಚಿಸುತ್ತಾರೆ. ಅಂತ ಪ್ರಸಂಗ ಬಂದರೆ ನಾನು ಕೂಡ ಸಿಎಂ ಸ್ಥಾನಕ್ಕೆ ಸ್ಪರ್ಧೆ ಮಾಡುತ್ತೇನೆ ಬಿಡುವುದಿಲ್ಲ ಎಂದರು.

## ಮುಂದಿನ ಮೂರು ಮುಕ್ಕಾಲು ವರ್ಷ 'ಸಿದ್ಧರಾಮಯ್ಯ' ಅವರೇ ಸಿಎಂ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅರಣ್ಯ ಇಲಾಖೆಯ ಎಲ್ಲಾ ಕಾರ್ಯಕ್ರಮದಲ್ಲೂ ಭಾಗಿಯಾಗಿ ಮಾರ್ಗದರ್ಶನ ಮಾಡುತ್ತಾರೆ. ಅವರು ಗಟ್ಟಿ ನಿರ್ಧಾರ ಕೈಗೊಂಡು, ಗಟ್ಟಿಯಾಗಿ ಸರ್ಕಾರ ನಡೆಸುತ್ತಿದ್ದಾರೆ. ಮುಂದಿನ ಮೂರೂ ಮುಕ್ಕಾಲು ವರ್ಷವೂ ಅವರೇ ಮುಖ್ಯಮಂತ್ರಿಯಾಗಿ ಮಾರ್ಗದರ್ಶನ ಮಾಡುತ್ತಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನ ಅರಣ್ಯ ಭವನದಲ್ಲಿಂದು ರಾಷ್ಟ್ರೀಯ ಹುತಾತ್ಮರ ದಿನದ ಅಂಗವಾಗಿ ಹುತಾತ್ಮರ ಸ್ಮಾರಕಕ್ಕೆ ಪುಷ್ಪಗುಚ್ಛ ಸಮರ್ಪಿಸಿದ ತರುವಾಯ ಮಾತನಾಡಿದ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಗಳಾಗಿ ಮುಂದುವರಿಯುತ್ತಾರೆ ಎಂದು ಸ್ಪಷ್ಟ ನುಡಿಗಳಲ್ಲಿ ತಿಳಿಸಿದರು.

# ಯಾವುದೇ ಡೌಟ್ ಬೇಡ ನಾನೆ ಸಿಎಂ ಮುಂದುವರೆಯುತ್ತೇನೆ

• ಉದಯವಾಹಿನಿ, ಬೆಂಗಳೂರು



ಮುಡಾ ಹಗರಣದಲ್ಲಿ ಸಿಲುಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಬೇಕು ಎಂದು ಈಗಾಗಲೇ ವಿಪಕ್ಷಗಳು ಆಗ್ರಹಿಸುತ್ತಿವೆ. ಇದರ ಬೆನ್ನಲ್ಲೇ ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವುದೇ ಅನುಮಾನ ಬೇಡ ಮುಖ್ಯಮಂತ್ರಿ ಆಗಿ ನಾನೇ ಮುಂದುವರಿಯುತ್ತಿದ್ದೇನೆ ಎಂದು ಸ್ಪಷ್ಟನೆ ನೀಡಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರು ನಾನು ಸಿಎಂ ಆಗಬಹುದು ಎಂಬ ತಮ್ಮ ವೈಯಕ್ತಿಕ ಅಭಿಪ್ರಾಯ ಹೇಳುತ್ತಿದ್ದು, ಅವರು ಅವರ ಹೇಳಿಕೆಗಳನ್ನು ನೀಡಿದ್ದಾರೆ. ಆದರೆ ಯಾವುದೇ ಅನುಮಾನ ಬೇಡ ಮುಖ್ಯಮಂತ್ರಿ ಸ್ಥಾನದಲ್ಲಿ ನಾನೇ ಮುಂದುವರೆಯಲಿದ್ದೇನೆ ಎಂದು ಸಿದ್ದರಾಮಯ್ಯ ಮತ್ತೊಮ್ಮೆ ಸ್ಪಷ್ಟಪಡಿಸಿದರು.

ಇನ್ನು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ನಾವು ಎಂದಿಗೂ ದ್ವೇಷದ ರಾಜಕೀಯ ಮಾಡಿಲ್ಲ. ಆದರೆ ಬಿಜೆಪಿಯವರು ನಮ್ಮ ವಿರುದ್ಧ ದ್ವೇಷದ ರಾಜಕೀಯ ಮಾಡಿದರು. ನಾವು ಈ ಹಿಂದೆಯೂ ದ್ವೇಷದ ರಾಜಕಾರಣ ಮಾಡಿಲ್ಲ ಈಗಲೂ ಮಾಡುವುದಿಲ್ಲ ಎಂದು ಬೆಂಗಳೂರಿನಲ್ಲಿ ಬಿಜೆಪಿ ವಿರುದ್ಧ ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ 21 ಹಗರಣ ಆಗಿದೆ. ತನಿಖೆ ಮಾಡಿ ಸಂಪುಟಕ್ಕೆ ವರದಿ ಸಲ್ಲಿಸಲು ಹೇಳಿದ್ದೇನೆ. ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ಕೋವಿಡ್ ಹಗರಣ, 40% ಕಮಿಷನ್ ಸೇರಿ ಎಲ್ಲಾದರ ತನಿಖೆ ನಡೆಸಲಾಗುತ್ತದೆ. ಯಾವ ಯಾವ ಪ್ರಕರಣ ಯಾವ ಹಂತದಲ್ಲಿ ಇದೆ ಎಂದು ತಿಳಿಯಲು ಸಮಿತಿ ರಚನೆ ಮಾಡಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

1 ಅಮೆರಿಕ ಪ್ರವಾಸದಲ್ಲಿ ಸಂವಾದದ ವೇಳೆ ಮೀಸಲಾತಿ ಕುರಿತು ಸಂಸದ ರಾಹುಲ್ ಗಾಂಧಿ ಹೇಳಿಕೆ

2 ದೇಶ ಒಡೆಯಲು ಪಿತೂರಿ ಮಾಡುವ ಶಕ್ತಿಗಳ ಜತೆ ನಿಲ್ಲುವುದು ರಾಹುಲ್ ಗಾಂಧಿಗೆ ಹವ್ಯಾಸವಾಗಿದೆ

3 ಕಾಂಗ್ರೆಸ್‌ನ ಮೀಸಲಾತಿ ವಿರೋಧಿ ಮುಖವನ್ನು ಮುನ್ನೆಲೆಗೆ ತಂದಿದ್ದಾರೆ ಎಂದು ಅಮಿತ್ ಶಾ ಟೀಕೆ

# ಶಾ ಅಬ್ಬರ ರಾಗಾ ವಿರುದ್ಧ ಟೀಕಾಪ್ರಹಾರ

**ಮೀಸಲಾತಿ ರದ್ದತಿ ಯಾರಿಂದಲೂ ಸಾಧ್ಯವಿಲ್ಲ**




## ರಾಹುಲ್ ಗಾಂಧಿಗೆ ಅಮಿತ್ ಶಾ ತಿರುಗೇಟು, ರಾಹುಲ್ ಗಾಂಧಿ ಸಮರ್ಥನೆ

### ರಾಹುಲ್ ವಿರುದ್ಧ ಅಮಿತ್ ಶಾ ಆಕ್ರೋಶ

ದೇಶವನ್ನು ವಿಭಜಿಸುವ ಷಡ್ಯಂತ್ರ ರೂಪಿಸುವ ಶಕ್ತಿಗಳೊಂದಿಗೆ ನಿಂತು ದೇಶ ವಿರೋಧಿ ಹೇಳಿಕೆ ನೀಡುವುದು ರಾಹುಲ್ ಗಾಂಧಿ, ಕಾಂಗ್ರೆಸ್ ಪಕ್ಷಕ್ಕೆ ಅಭ್ಯಾಸವಾಗಿದೆ. ವಿದೇಶಿ ವೇದಿಕೆಗಳಲ್ಲಿ ಭಾರತ ವಿರೋಧಿ ಹೇಳಿಕೆಗಳನ್ನು ನೀಡುತ್ತಿರಲಿ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ. ರಾಹುಲ್ ಗಾಂಧಿ ಯಾವಾಗಲೂ ರಾಷ್ಟ್ರದ ಭದ್ರತೆಗೆ ಬೆದರಿಕೆ ಮತ್ತು ಭಾವನೆಗಳನ್ನು ಘಾಸಿಗೊಳಿಸಿದ್ದಾರೆ. ಮನಸ್ಸಿನಲ್ಲಿದ್ದ ಆಲೋಚನೆಗಳು ಅಂತಿಮವಾಗಿ ಪದಗಳಾಗಿ ಹೊರಹೊಮ್ಮಿವೆ.



### ತಪ್ಪುದಾರಿಗೆ ಎಳೆಯುವ ಪ್ರಯತ್ನ



ರಾಹುಲ್ ಗಾಂಧಿ ಅವರು ಸಿಖ್ಖರ ಕುರಿತು ನೀಡಿದ ಹೇಳಿಕೆಗಳು ತಪ್ಪುದಾರಿಗೆ ಎಳೆಯುವಂತಹವು ಮತ್ತು ಆಧಾರರಹಿತ ಎಂದು ಧಾರ್ಮಿಕ ಸ್ವಾತಂತ್ರ್ಯ ಕುರಿತಾದ ಟೀಕೆಯನ್ನು ರಾಜನಾಥ್ ಸಿಂಗ್ ಖಂಡಿಸಿದ್ದಾರೆ. ಭಾರತದ ಸಂಸ್ಕೃತಿಯನ್ನು ಕಾಪಾಡುವಲ್ಲಿ ಸಿಖ್ ಸಮುದಾಯ ನಿರ್ವಹಿಸಿದ ದೊಡ್ಡ ಪಾತ್ರವನ್ನು ಇಡೀ ದೇಶ ಗುರುತಿಸಿದೆ ಮತ್ತು ಗೌರವಿಸುತ್ತದೆ. ಅವರ ಬಗ್ಗೆ ಅಂತಹ ಸುಳ್ಳು ಹೇಳಿಕೆಗಳನ್ನು ನೀಡುವುದು ವಿಪಕ್ಷ ನಾಯಕರಿಗೆ ಶೋಭಿಸುವುದಿಲ್ಲ ಎಂದು ಹೇಳಿದ್ದಾರೆ. ನಮ್ಮ ಪ್ರಧಾನಿ, ದಲಿತರು, ಹಿಂದುಳಿದ ವರ್ಗದವರು ಮತ್ತು ಆದಿವಾಸಿಗಳ ಕಲ್ಯಾಣ ಹಾಗೂ ಅಭಿವೃದ್ಧಿಗಾಗಿ ಮೀಸಲಾತಿ ವ್ಯವಸ್ಥೆಯನ್ನು ಬಲಪಡಿಸಿದ್ದಾರೆ ಎಂದು ಅವರು ಮೀಸಲಾತಿ ರದ್ದುಪಡಿಸಲು ಸರ್ಕಾರ ಬಯಸಿದೆ ಎನ್ನುವ ಆರೋಪವನ್ನು ತಳ್ಳಿಹಾಕಿದ್ದಾರೆ.

• ಉದಯವಾಹಿನಿ, ನವದೆಹಲಿ


ಲೋಕಸಭೆಯಲ್ಲಿನ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಅಮೆರಿಕ ಪ್ರವಾಸದ ವೇಳೆ ನೀಡುತ್ತಿರುವ ಹೇಳಿಕೆಗಳು ಆಡಳಿತಾರೂಢ ಬಿಜೆಪಿಯನ್ನು ಕೆರಳಿಸಿದೆ. ಮೀಸಲಾತಿ ಕುರಿತಂತೆ ರಾಹುಲ್ ಗಾಂಧಿಯ ಹೇಳಿಕೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕಿಡಿಕಾರಿದ್ದಾರೆ. ದೇಶವನ್ನು ವಿಭಜಿಸಲು ಸಂಚು ನಡೆಸುವ ಶಕ್ತಿಗಳ ಜತೆ ನಿಲ್ಲುವುದು ರಾಹುಲ್ ಗಾಂಧಿ ಅವರಿಗೆ ಹವ್ಯಾಸವಾಗಿಬಿಟ್ಟಿದೆ ಎಂದು ಅಮಿತ್ ಶಾ ಬುಧವಾರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೇಶ ಒಡೆಯಲು ಪಿತೂರಿ ಮಾಡುವ ಶಕ್ತಿಗಳ ಜತೆ ನಿಲ್ಲುವುದು ಹಾಗೂ ದೇಶ ವಿರೋಧಿ ಹೇಳಿಕೆಗಳನ್ನು ನೀಡುವುದು ರಾಹುಲ್ ಗಾಂಧಿ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಹವ್ಯಾಸವಾಗಿದೆ. ಅದು ಜಮ್ಮು ಕಾಶ್ಮೀರದಲ್ಲಿ ಜಮ್ಮು ಮತ್ತು ಕಾಶ್ಮೀರ ನ್ಯಾಷನಲ್ ಕಾನ್ಫರೆನ್ಸ್ (ಜೆಕೆಎನ್‌ಸಿ)ಯ ದೇಶ ವಿರೋಧಿ ಮತ್ತು ಮೀಸಲಾತಿ ವಿರೋಧಿ ಕಾರ್ಯಸೂಚಿಗಳನ್ನು ಬೆಂಬಲಿಸುವುದಿರಲಿ ಅಥವಾ ವಿದೇಶಿ ವೇದಿಕೆಗಳಲ್ಲಿ ಭಾರತ ವಿರೋಧಿ ಹೇಳಿಕೆಗಳನ್ನು ನೀಡುವುದಿರಲಿ, ರಾಹುಲ್ ಗಾಂಧಿ ಯಾವಾಗಲೂ ದೇಶದ ಭದ್ರತೆಗೆ ಯಾವಾಗಲೂ ಬೆದರಿಕೆ ಒಡ್ಡುತ್ತಲೇ ಇದ್ದಾರೆ ಮತ್ತು ಭಾವನೆಗಳಿಗೆ ಘಾಸಿ ಉಂಟುಮಾಡುತ್ತಿದ್ದಾರೆ ಎಂದು ಶಾ ಟೀಕಾ ಪ್ರಹಾರ ನಡೆಸಿದ್ದಾರೆ.

ಪ್ರಾದೇಶಿಕತೆ, ಧರ್ಮ ಮತ್ತು ಭಾಷಾ ಭಿನ್ನಾಭಿಪ್ರಾಯಗಳಲ್ಲಿ ಜಗಳಗಳನ್ನು ಉಂಟುಮಾಡುವುದರಲ್ಲಿನ ಕಾಂಗ್ರೆಸ್‌ನ ರಾಜಕಾರಣವನ್ನೇ ರಾಹುಲ್ ಗಾಂಧಿ ಹೇಳಿಕೆ ಪ್ರತಿಬಿಂಬಿಸಿದೆ. ದೇಶದಲ್ಲಿನ ಮೀಸಲಾತಿಯನ್ನು ರದ್ದುಗೊಳಿಸುವ ಕುರಿತಾಗಿ ಮಾತನಾಡುವ ಮೂಲಕ ರಾಹುಲ್ ಗಾಂಧಿ ಅವರು ಕಾಂಗ್ರೆಸ್‌ನ ಮೀಸಲಾತಿ ವಿರೋಧಿ ಮುಖವನ್ನು ಮತ್ತೊಮ್ಮೆ ಮುನ್ನೆಲೆಗೆ ತಂದಿದ್ದಾರೆ. ಅವರ ಮನಸ್ಸಿನಲ್ಲಿದ್ದ ಆಲೋಚನೆಗಳು ಕೊನೆಗೂ ಪದಗಳಲ್ಲಿ ಹೊರಗೆ ಬಂದಿವೆ ಎಂದು 'ಎಕ್ಸ್' ಖಾತೆಯಲ್ಲಿ ಅಮಿತ್ ಶಾ ಹೇಳಿದ್ದಾರೆ. ಬಿಜೆಪಿ ಇಲ್ಲಿ ಇರುವವರೆಗೂ ಯಾರಿಂದಲೂ ಮೀಸಲಾತಿಯನ್ನು ರದ್ದುಗೊಳಿಸಲು ಸಾಧ್ಯವಿಲ್ಲ. ಹಾಗೆಯೇ ರಾಷ್ಟ್ರೀಯ ಭದ್ರತೆಯೊಂದಿಗೆ ಯಾರಿಗೂ ಆಟವಾಡಲಾಗದು ಎಂದು ರಾಹುಲ್ ಗಾಂಧಿಗೆ ಹೇಳಲು ಬಯಸುತ್ತೇನೆ ಎಂದಿದ್ದಾರೆ. ಭಾರತದಲ್ಲಿ ಧಾರ್ಮಿಕ ಸ್ವಾತಂತ್ರ್ಯದ ಬಗ್ಗೆ ಅಮೆರಿಕದ ಕೆಲವು ಸಂಘಟನೆಗಳು ವರ್ಷ ವರ್ಷ ಸಲ್ಲದ ಆರೋಪ ಮಾಡುತ್ತಿರುವ ನಡುವೆಯೇ, ಅಮೆರಿಕ ಪ್ರವಾಸದಲ್ಲಿರುವ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ, 'ಭಾರತದಲ್ಲಿ ಧಾರ್ಮಿಕ ಸ್ವಾತಂತ್ರ್ಯ ಇಲ್ಲ' ಎಂಬ ಗಂಭೀರ ಆರೋಪ ಮಾಡಿದ್ದಾರೆ. ಇದಕ್ಕೆ ಅವರು 'ಸಿಖ್ ಸಮುದಾಯಕ್ಕೆ ಪೇಟ ಧರಿಸಲು ಅವಕಾಶ ನೀಡುತ್ತಿಲ್ಲ' ಎಂದು ಉದಾಹರಣೆ ನೀಡಿದ್ದಾರೆ.

ರಾಹುಲ್ ಆರೋಪಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಬಿಜೆಪಿ ವಕ್ತಾರ ಆರ್.ಪಿ. ಸಿಂಗ್ ಹಾಗೂ ಕೇಂದ್ರ ಸಚಿವ ಹರ್ದೀಪ್ ಪುರಿ, '1984ರಲ್ಲಿ ಸಿಖ್ ಹತ್ಯಾಕಾಂಡ ನಡೆಸಿದ ಕಾಂಗ್ರೆಸ್ ಪಕ್ಷವೇ ಇದೀಗ ಓಲೈಕೆ ರಾಜಕಾರಣಕ್ಕಾಗಿ ಇಂಥ ಮಾತುಗಳನ್ನು ಆಡುತ್ತಿದೆ. ರಾಹುಲ್‌ಗೆ ಧೈರ್ಯವಿದ್ದರೆ ಭಾರತಕ್ಕೆ ಬಂದು ಈ ಮಾತುಗಳನ್ನು ಪುನರುಚ್ಚರಿಸಲಿ. ಅವರನ್ನು ನ್ಯಾಯಾಲಯದ ಮೆಟ್ಟಿಲೇರಿಸುತ್ತೇವೆ' ಎಂದು ಸವಾಲು ಹಾಕಿದ್ದಾರೆ.

### ಮೋದಿ ವಿರುದ್ಧ ವಾಗ್ದಾಳಿ



ಭಾರತದಲ್ಲಿ 21ನೇ ಶತಮಾನದ ಆಧುನಿಕ ಜಗತ್ತಿನಲ್ಲಿ ನಾನು ದೇವರೊಂದಿಗೆ ಮಾತನಾಡುತ್ತೇನೆ ಎಂದು ಪ್ರಧಾನಿ ಹೇಳುತ್ತಿದ್ದಾರೆ. ನಾನು ಎಲ್ಲಾರಿಗಿಂತ ಭಿನ್ನ. ನೀವು ಜೈವಿಕ ವ್ಯಕ್ತಿಗಳು, ನೀವು ಜೈವಿಕವಲ್ಲದ ವ್ಯಕ್ತಿ. ನಾನು ದೇವರೊಂದಿಗೆ ನೇರ ಸಂಪರ್ಕವನ್ನು ಹೊಂದಿದ್ದೇನೆ ಎನ್ನುತ್ತಾರೆ. ನಂತರ ಪ್ರಧಾನ ಮಂತ್ರಿಗಳು ಲೋಕಸಭೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿದ ನಂತರ ಸಂವಿಧಾನ ಪುಸ್ತಕಕ್ಕೆ ನಮಸ್ಕರಿಸಿದ್ದು ವಿರೋಧಾಬಾಸವಾಗಿ ಕಂಡಿತು. ಒಂದೆಡೆ ಸಂವಿಧಾನವನ್ನು, ಪ್ರಜಾಪ್ರಭುತ್ವ ರಚನೆಯ ಮೇಲೆ ದಾಳಿ ಮಾಡುತ್ತಿದ್ದಾರೆ. ನಂತರ ಭಾರತೀಯರು ಸಂವಿಧಾನ, ಪ್ರಜಾಪ್ರಭುತ್ವಕ್ಕೆ ಗೌರವ ಕೊಡಬೇಕು, ಅದನ್ನು ರಕ್ಷಿಸಬೇಕು ಎನ್ನುತ್ತಾರೆ ಎಂದು ರಾಹುಲ್ ಗಾಂಧಿ ಟೀಕಿಸಿದರು.

### ಬಿಜೆಪಿ ತಿರುಗೇಟು

ಬಿಜೆಪಿ ರಾಷ್ಟ್ರೀಯ ವಕ್ತಾರ ಆರ್.ಪಿ.ಸಿಂಗ್, 1984ರಲ್ಲಿ 3000ಕ್ಕೂ ಹೆಚ್ಚು ಸಿಖ್ಖರ ಪೇಟಾ ಕಿತ್ತೆಸೆದು, ಅವರ ಗಡ್ಡ ಬೋಳಿಸಿ ಅವರನ್ನು ಹತ್ಯೆ ಮಾಡಲಾಯಿತು. ಆದರೆ ತಮ್ಮದೇ ಸರ್ಕಾರದ ಅವಧಿಯ ಇತಿಹಾಸದ ಈ ಪುಟಗಳ ಬಗ್ಗೆ ರಾಹುಲ್ ಪ್ರಸ್ತಾಪ ಮಾಡಲಿಲ್ಲ. ನಿಮಗೆ ಧೈರ್ಯವಿದ್ದರೆ ಇದೇ ಮಾತುಗಳನ್ನು ಭಾರತದಲ್ಲಿ ಬಂದು ಪುನರುಚ್ಚಾರ ಮಾಡಿ. ನಾನು ನಿಮ್ಮ ವಿರುದ್ಧ ಪ್ರಕರಣ ದಾಖಲಿಸಿ ಕೋರ್ಟ್ ಮೆಟ್ಟಿಲೇರಿಸುತ್ತೇನೆ' ಎಂದು ಸವಾಲು ಹಾಕಿದ್ದಾರೆ.

## ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ್ ಹೇಳಿದ್ದೇನು?

• ಉದಯವಾಹಿನಿ, ಬೆಂಗಳೂರು

**ಕೇಂದ್ರ ಜಿಎಸ್‌ಟಿ ಅಧಿಕಾರಿಗಳ ಬಂಧನದ ವಿಚಾರ**



ಬೆಂಗಳೂರಿನಲ್ಲಿ ಸಿಸಿಬಿ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಉದ್ಯಮಿಗೆ 1.50 ಕೋಟಿ ವಂಚಿಸಿದ ಕೇಂದ್ರದ ಜಿಎಸ್‌ಟಿ ಅಧಿಕಾರಿಗಳ ಬಂಧನದ ವಿಚಾರವಾಗಿ, ಜಿಎಸ್‌ಟಿ, ಇಡಿ ಅಧಿಕಾರಿಗಳು ಎಂದು ಹಣ ದೋಚಿದವರನ್ನ ಸೆರೆ ಹಿಡಿಯಲಾಗಿದೆ. ನಾಲ್ವರು ಜಿಎಸ್‌ಟಿ ಅಧಿಕಾರಿಗಳನ್ನು ಸಿಸಿಬಿ ಅವರು ಬಂಧಿಸಿದ್ದಾರೆ ಎಂದು ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ್ ಹೇಳಿಕೆ ನೀಡಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಜಿಎಸ್‌ಟಿ ಇಡಿಅಧಿಕಾರಿಗಳು ಯಾವಾಗ ಉದ್ಯಮಿಯ ಮನೆಗೆ ಬಂದಿದ್ದರು, ಅಲ್ಲದೆ ಬೆದರಿಕೆ ಹಾಕಿ ಯಾವಾಗ ಹಣ ದೋಚಿದ್ದಾರೆ ಎಂದು ದೂರು ದಾಖಲಿಸಿದ್ದಾರೆ. ಈ ಬಗ್ಗೆ ಬೈಯಪ್ಪನಹಳ್ಳಿ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ಸೂಕ್ಷ್ಮತೆ ಗಮನಿಸಿ ಕೇಸ್ ಸಿಸಿಬಿಗೆ ವರ್ಗಾಯಿಸಲಾಗಿತ್ತು. ಸಿಸಿಬಿ ಅಧಿಕಾರಿಗಳು ನಾಲ್ವರು ಅಧಿಕಾರಿಗಳನ್ನು ಬಂಧಿಸಿದ್ದಾರೆ. ಒಂದು ಕೋಟಿ ಐವತ್ತು ಲಕ್ಷ ಹಣ ಜಿಎಸ್‌ಟಿ ಹೆಸರಿನಲ್ಲಿ ಪಡೆಯಲಾಗಿತ್ತು. ಜಿ ಎಸ್ ಟಿ ಹಿರಿಯ ಅಧಿಕಾರಿಗಳ ಸಂಪರ್ಕ ಮಾಡಿದಾಗ ಅಕ್ರಮವಾಗಿ ಹಣ ಪಡೆದಿದ್ದಾರೆ ಎಂಬುದು ಸ್ಪಷ್ಟವಾಗಿದೆ.

ಈ ಹಿನ್ನೆಲೆಯಲ್ಲಿ ನಾಲ್ವರು ಅಧಿಕಾರಿಗಳನ್ನು ಬಂಧಿಸಲಾಗಿದೆ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಹೇಳಿಕೆ ನೀಡಿದರು.

## ಬಿಜೆಪಿ ಯೋಜನೆಗಳಿಗೆ ಕಾಂಗ್ರೆಸ್ ಟೇಪ್ ಕಟ್ಟಿಂಗ್

• ಉದಯವಾಹಿನಿ, ಚಿಕ್ಕಬಳ್ಳಾಪುರ



ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಗಳಿಗೆ ಕಾಂಗ್ರೆಸ್ ನಾಯಕರು ಟೇಪ್ ಕತ್ತರಿಸಿ ಹೆಸರು ಪಡೆದುಕೊಳ್ಳುತ್ತಿದ್ದಾರೆ ಎಂದು ಪರೋಕ್ಷವಾಗಿ ಎತ್ತಿನಹೊಳೆ ಯೋಜನೆ ಉದ್ಘಾಟನೆಗೆ ಸಂಸದ ಡಾ.ಕೆ.ಸುಧಾಕರ್ ರಾಜ್ಯ ಕಾಂಗ್ರೆಸ್ ನಾಯಕರ ವಿರುದ್ಧ ಕಿಡಿಕಾರಿದರು. ಬಿಜೆಪಿ ಸದಸ್ಯತ್ವ ಅಭಿಯಾನದ ಕಾರ್ಯಾಗಾರದಲ್ಲಿ ಮಾತನಾಡಿ, ಎತ್ತಿನಹೊಳೆ ಯೋಜನೆಯಡಿ ಕೋಲಾರ, ಬೆಂ.ಗ್ರಾಮಾಂತರ, ಚಿಕ್ಕಬಳ್ಳಾಪುರಕ್ಕೆ ನೀರು ಬಂದಿಲ್ಲ. ಕಳೆದ ನಾಲ್ಕು ವರ್ಷಗಳಲ್ಲಿ ಬಿಜೆಪಿ ಸರ್ಕಾರ 9,200 ಕೋಟಿ ರೂ.ಅನುದಾನವನ್ನು ಯೋಜನೆಗೆ ನೀಡಿದೆ. ಆದರೆ ಈ ಬಗ್ಗೆ ಕಾಂಗ್ರೆಸ್ ನಾಯಕರು ಒಂದೇ ಒಂದು ಮಾತು ಹೇಳಿಲ್ಲ. ಮನಸ್ಸು ಮಾಡಿದ್ದರೆ ಬಿಜೆಪಿ ಸರ್ಕಾರದ ಅವಧಿಯಲ್ಲೇ ಯೋಜನೆ ಉದ್ಘಾಟನೆ ಮಾಡಬಹುದಿತ್ತು. ಬೇಕಿದ್ದರೆ ಇದರ ಕೀರ್ತಿಯನ್ನು ಕಾಂಗ್ರೆಸ್ ಸರ್ಕಾರ ಪಡೆದುಕೊಳ್ಳಲಿ. ಆದರೆ, 2ನೇ ಹಂತದ ಕಾಮಗಾರಿ ಪೂರ್ಣಗೊಳಿಸಲಿ ಎಂದರು.

# ರಾಹುಲ್ ಗಾಂಧಿ ಮೀಸಲಾತಿ ರದ್ದು ಹೇಳಿಕೆ ವಿವಾದ: ಪ್ರತಿಭಟನೆಗೆ ಕರೆ

## ಮೀಸಲಾತಿ ರದ್ದುಪಡಿಸುವುದಾಗಿ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿಯವರು ಅಮೆರಿಕದಲ್ಲಿ ಮನದಾಳದ ಮಾತು

• ಉದಯವಾಹಿನಿ, ಬೆಂಗಳೂರು

ಮೀಸಲಾತಿ ರದ್ದುಪಡಿಸುವುದಾಗಿ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿಯವರು ಅಮೆರಿಕದಲ್ಲಿ ತಮ್ಮ ಮನದಾಳದ ಮಾತನ್ನು ಹೇಳಿದ್ದಾರೆ. ಇದನ್ನು ಖಂಡಿಸಿ ಇವತ್ತಿನಿಂದ ಎರಡು ದಿನಗಳ ಕಾಲ ರಾಹುಲ್ ಗಾಂಧಿಯವರ ಪ್ರತಿಕೃತಿ ದಹನ ಮಾಡಲಿದ್ದೇವೆ ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಅವರು ಪ್ರಕಟಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಎಸ್‌ಸಿ, ಎಸ್‌ಟಿಗಳಿಗೆ ಗೌರವ ಕೊಡಬೇಕು; ಅವರಿಗೆ ರಕ್ಷಣೆ ಕೊಡಬೇಕೆಂಬ ದೃಷ್ಟಿಯಿಂದ ನಾವು ರಾಜ್ಯಾದ್ಯಂತ ನಾಳೆ, ನಾಡಿದ್ದು ರಾಹುಲ್ ಗಾಂಧಿಯವರ ಪ್ರತಿಕೃತಿ ದಹನ ಮಾಡುತ್ತೇವೆ ಎಂದು ತಿಳಿಸಿದರು.

**ದಲಿತರ ಬದುಕಿಗೆ, ಎಸ್‌ಸಿ, ಎಸ್‌ಟಿಗಳ ಮೀಸಲಾತಿಗೆ ಕೊಡಲಿಪೆಟ್ಟು**

ರಾಹುಲ್ ಗಾಂಧಿಯವರು ಮೀಸಲಾತಿ ನಿಲ್ಲಿಸುವುದಾಗಿ ಹೇಳಿದ್ದಾರೆ. ಡಾ. ಬಿ.ಆರ್.ಅಂಬೇಡ್ಕರ್ ಅವರನ್ನು ಎರಡು ಸಾರಿ ಚುನಾವಣೆಯಲ್ಲಿ ಸೋಲಿಸಿದ ಪಕ್ಷ ಕಾಂಗ್ರೆಸ್. ಸಂವಿಧಾನವನ್ನು ಬರೆದ ಡಾ. ಬಿ.ಆರ್.ಅಂಬೇಡ್ಕರ್ ಅವರಿಗೆ ಅವತ್ತು ಅಪಮಾನ ಮಾಡಲಾಗಿತ್ತು. ಈಗ ಮೀಸಲಾತಿ ರದ್ದುಪಡಿಸುವುದಾಗಿ ಹೇಳಿ ಅವರ ವಿಚಾರಕ್ಕೇ ತಿಲಾಂಜಲಿ ನೀಡಲು ಹೊರಟಿದ್ದಾರೆ ಎಂದು ಟೀಕಿಸಿದರು.

ದಲಿತರ ಬದುಕಿಗೆ, ಎಸ್‌ಸಿ, ಎಸ್‌ಟಿಗಳ ಮೀಸಲಾತಿಗೆ ಕೊಡಲಿಪೆಟ್ಟು ಹಾಕುವುದಾಗಿ ರಾಹುಲ್ ಗಾಂಧಿ ಹೇಳಿದ್ದಾರೆ. ಇದೇನಾ ನೀವು ಬಾಬಾ ಸಾಹೇಬ ಅಂಬೇಡ್ಕರ್ ಅವರಿಗೆ ನೀಡುವ ಗೌರವ ಎಂದು ಪ್ರಶ್ನಿಸಿದರು. ಇದೇನಾ ನೀವು ಸಂವಿಧಾನಕ್ಕೆ ಕೊಡುವ ಮರ್ಯಾದೆ ಎಂದು ಕೇಳಿದರು.



### ಸಂವಿಧಾನಕ್ಕೆ ಒಂದಲ್ಲ; ಎರಡಲ್ಲ, 106 ತಿದ್ದುಪಡಿಗಳನ್ನು ತಂದಿತ್ತು

1990ರ ಸೆಪ್ಟೆಂಬರ್ 6ರಂದು ರಾಜೀವ್ ಗಾಂಧಿಯವರು ಮಂಡಲ್ ಕಮಿಷನ್ ವರದಿಯನ್ನು ಮತ್ತು ಮೀಸಲಾತಿಯನ್ನು ವಿರೋಧಿಸಿದ್ದರು. ಮೀಸಲಾತಿಯನ್ನು ನೆಹರೂ, ರಾಜೀವ್ ಗಾಂಧಿಯವರು ವಿರೋಧಿಸಿದ್ದರು ಎಂದು ಗಮನ ಸೆಳೆದರು. ಸಂವಿಧಾನದಲ್ಲಿ ಮೀಸಲಾತಿ ನೀಡಿದ್ದು ಕಾಂಗ್ರೆಸ್ಸಿಗರಿಗೆ ಇಷ್ಟ ಇಲ್ಲ. ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇದ್ದ ಸಂದರ್ಭದಲ್ಲಿ ಸಂವಿಧಾನಕ್ಕೆ ಒಂದಲ್ಲ; ಎರಡಲ್ಲ, 106 ತಿದ್ದುಪಡಿಗಳನ್ನು ತಂದಿತ್ತು ಎಂದು ಟೀಕಿಸಿದರು. ಕಾಂಗ್ರೆಸ್ಸಿಗರು ನಿರಂತರವಾಗಿ ಸಂವಿಧಾನಕ್ಕೆ ಅವಮಾನ ಮಾಡಿದವರು, ಅಗೌರವ ತೋರಿದವರು ಎಂದು ರವಿಕುಮಾರ್ ಅವರು ದೂರಿದರು.

ನಮ್ಮ ದೇಶದಲ್ಲಿ ಮೀಸಲಾತಿ ಎಂಬುದು ಎಸ್‌ಸಿ, ಎಸ್‌ಟಿಗಳ ಬರ್ತ್ ರೈಟ್. ಮೀಸಲಾತಿ ಪಡೆಯುವುದು ಅವರ ಹಕ್ಕು. ಅದು ಕಾಂಗ್ರೆಸ್ ಪಾರ್ಟಿಯ ಭಿಕ್ಷೆಯಲ್ಲ. ದಲಿತರ ಕಲ್ಯಾಣಕ್ಕಾಗಿ, ಬದುಕಿಗೆ ರಕ್ಷಣೆ, ಜೀವನಕ್ಕೆ ಭದ್ರತೆ ನೀಡಲು ಮತ್ತು ಅವರು ಮನುಷ್ಯರ ರೀತಿ ಅವರು ಬದುಕಬೇಕೆಂಬ ಹಿನ್ನೆಲೆಯಲ್ಲಿ ಡಾ. ಅಂಬೇಡ್ಕರ್ ಅವರು ಮೀಸಲಾತಿಯನ್ನು ಸಂವಿಧಾನದಲ್ಲೇ ಬರೆದರು ಎಂದು ಎನ್.ರವಿಕುಮಾರ್ ಅವರು ವಿಶ್ಲೇಷಿಸಿದರು.

1955ರಲ್ಲಿ ಕಾಕಾ ಕಾಲೇಕರ್ ಸಮಿತಿ ವರದಿ ನೀಡುವ ಸಂದರ್ಭದಲ್ಲಿ ನೆಹರೂ ಅವರು ಮೀಸಲಾತಿಯನ್ನು ವಿರೋಧಿಸಿದ್ದರು. ಅಂದರೆ ನೆಹರೂ ಅವರು ಕೂಡ ಸಂವಿಧಾನದಲ್ಲಿದ್ದ ಮೀಸಲಾತಿಯನ್ನು ವಿರೋಧಿಸಿದ್ದರು ಎಂದು ಆಕ್ಷೇಪಿಸಿದರು. ಕರ್ನಾಟಕದಲ್ಲಿ ಸಿದ್ದರಾಮಯ್ಯನವರು ಎಸ್‌ಸಿ, ಎಸ್‌ಟಿಗಳ 25 ಸಾವಿರ ಕೋಟಿ ಹಣವನ್ನು ಬೇರೆಬೇರೆ ಇಲಾಖೆಗಳಿಗೆ ವರ್ಗಾವಣೆ ಮಾಡಿದ್ದಾರೆ. ಇದು ಕೂಡ ಎಸ್‌ಸಿ, ಎಸ್‌ಟಿಗಳಿಗೆ ಮಾಡಿದ ಘೋರ ಅಪಮಾನ ಎಂದು ಖಂಡಿಸಿದರು. ಎಸ್‌ಟಿಗಳ ಅಭಿವೃದ್ಧಿಗಾಗಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಇದ್ದ ಹಣವನ್ನು ಬಳ್ಳಾರಿ ಚುನಾವಣೆಗೆ ಬಳಸಿದ್ದಾರೆ. 187 ಕೋಟಿ ಹಣವನ್ನು ಲೂಟಿ ಮಾಡಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಮೀಸಲಾತಿ ಕೊಡಬಾರದು ಎಂಬ ಚಿಂತನೆ ಕಾಂಗ್ರೆಸ್ಸಿಗರ ರಕ್ತದಲ್ಲೇ ಇದೆ ಎಂದು ಅವರು ಟೀಕಿಸಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,325/Gram24ct ₹6,715/Gram22ct | ಬೆಳ್ಳಿ: ₹86.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಅಭೂತಾಭಿನಿವೇಶೇನ

**ಸ್ವಾತ್ಮಾನಂ ವಂಚಯತ್ಯಯಂ!**
**ಅಸತ್ಯಪಿ ದ್ವಿತೀಯೇರ್ಥೇ**
**ಸೋಮಶರ್ಮ ಪಿತಾ ಯಥಾ!!**

ಸುರೇಶ್ವರಾಚಾರ್ಯರ ನೈಷ್ಕರ್ಮ್ಯಸಿದ್ಧಿಯ ಒಂದು ಶ್ಲೋಕ. ಇಲ್ಲದುದನ್ನು ನಾನು ನನ್ನದು ಎಂದು ತಿಳಿದಿರುವುದರಿಂದ ಈ ತಪ್ಪು ತಿಳುವಳಿಕೆ ಜೀವನಿಗೆ ಭಾರೀ ಆಘಾತವನ್ನುಂಟುಮಾಡುತ್ತದೆ.ತನ್ನ ಹೊರತು ಎರಡನೆಯ ಯಾರೂ ಯಾವುದೂ ಇಲ್ಲದಿದ್ದರೂ ಅದು ತಾನು ತನ್ನದು ಎಂದು ತಿಳಿದು ಸಂಕಟಕ್ಕೊಳಗಾದುದಕ್ಕೆ ಒಂದು ನಿದರ್ಶನ ಸೋಮಶರ್ಮನ ತಂದೆ. ಭಿಕ್ಷೆಯ ಹಿಟ್ಟಿನ ಚೀಲ ಮರಕ್ಕೆ ತಗುಲಿ ಹಾಕಿ ವಿಶ್ರಾಂತಿಗೆ ಜಾರಿ ಕನಸು ಕಂಡ ಅವಿವಾಹಿತ ತಿರುಕ, ಅಲ್ಲಿ ಹಿಟ್ಟು ಮಾರಿ ಹಸು ತಂದು ಲಾಭ ಗಳಿಸಿ ಭೂಮಿ ಖರೀದಿಸಿ ಸಿರಿವಂತನಾಗಿ ಮದುವೆಯಾಗಿ ಮಗನ ಹಡೆದು ಸೋಮಶರ್ಮ ಎಂದು ಹೆಸರಿಟ್ಟ. ಹೆಂಡತಿ ಮಗನನ್ನು ಚೆನ್ನಾಗಿ ಆರೈಕೆ ಮಾಡಲಿಲ್ಲವೆಂದು ಕಾಲಿನಿಂದ ಒದ್ದ. ಹಿಟ್ಟಿನ ಚೀಲ ಹರಿದು ಚೆಲ್ಲಲು ಎಚ್ಚರಾದ! ಇದ್ದಂತೆ ತೋರುವ ಈ ಜಗತ್ತು ವಾಸ್ತವವಲ್ಲ. ಪ್ರತಿಯೊಂದು ಪ್ರತಿ ಕ್ಷಣ ಪರಿವರ್ತನಾಶೀಲ. ಇದನ್ನು ತಿಳಿಯದೇ ಬೇರೆಯಾಗಿ ಭಾವಿಸಿದ್ದರಿಂದ ಅನೇಕ ಪ್ರವೃತ್ತಿಗಳು. ವಿಚಿತ್ರ ಪರಿಣಾಮಗಳು. ವಾಸ್ತವವನ್ನು ಅರಿತವರ ಬಾಳು ಗೋಳಾಗದೇ ಹೋಳಾಗುವುದು.

# ಅರಣ್ಯ ಸಿಬ್ಬಂದಿಗೂ ಪೊಲೀಸ್ ಕ್ಯಾಂಟೀನ್ ಸೌಲಭ್ಯ

## ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ಸಿದ್ದರಾಮಯ್ಯಗೆ ಮನವಿ, ಹುತಾತ್ಮರ ಕುಟುಂಬಕ್ಕೆ ಪರಿಹಾರ ನೀಡುವ ಘೋಷಣೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಸಮೃದ್ಧ ಅರಣ್ಯ ಸಂಪತ್ತಿನ ರಕ್ಷಣೆಗೆ ಹಗಲಿರುಳು, ಜೀವದ ಹಂಗು ತೊರೆದು ಶ್ರಮಿಸುವ ಅರಣ್ಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಹಾಲಿ ಇರುವ ಪೊಲೀಸ್ ಕ್ಯಾಂಟೀನ್ ಸೌಲಭ್ಯ ಬಳಸಿಕೊಳ್ಳಲು ಅವಕಾಶ ನೀಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದಾರೆ.

ಬೆಂಗಳೂರಿನ ಅರಣ್ಯ ಭವನದಲ್ಲಿಂದ ರಾಷ್ಟ್ರೀಯ ಹುತಾತ್ಮರ ದಿನದ ಅಂಗವಾಗಿ ಹುತಾತ್ಮರ ಸ್ಮಾರಕಕ್ಕೆ ಪುಷ್ಪಗುಚ್ಛ ಸಮರ್ಪಿಸಿದ ತರುವಾಯ ಮಾತನಾಡಿದ ಅವರು, ಕಾಡ್ಗಿಚ್ಚು ನಂದಿಸುವಾಗ, ಮಾನವ-ವನ್ಯಜೀವಿ ಸಂಘರ್ಷ ತಡೆಯುವ ಸಂದರ್ಭದಲ್ಲಿ ಮತ್ತು ಒತ್ತುವರಿದಾರರು ಮತ್ತು ಕಾಡುಗಳ್ಳರ ಆಕ್ರೋಶಕ್ಕೆ ಗುರಿಯಾಗಿ ಈವರೆಗೆ 61 ಅರಣ್ಯ ಸಿಬ್ಬಂದಿ ಮತ್ತು ಅಧಿಕಾರಿಗಳು ಹುತಾತ್ಮರಾಗಿದ್ದಾರೆ. ಈ ಎಲ್ಲರ ಕುಟುಂಬದೊಂದಿಗೆ ಇಲಾಖೆ ನಿಂತಿದೆ ಎಂದರು. ಈ ಹಿಂದೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಗಳಾಗಿದ್ದಾಗ ಹುತಾತ್ಮರ ಕುಟುಂಬಕ್ಕೆ ಪರಿಹಾರ ನೀಡುವ ಘೋಷಣೆ ಮಾಡಿದರು, 30 ಲಕ್ಷ ರೂ. ಇದ್ದ ಪರಿಹಾರದ ಮೊತ್ತವನ್ನು ಈಗ 50 ಲಕ್ಷಕ್ಕೆ ಹೆಚ್ಚಿಸುವ ಕಾರ್ಯವನ್ನೂ ಅವರೆ ಮಾಡಿದ್ದಾರೆ ಎಂದರು. ನಮ್ಮ ಸರ್ಕಾರ ಅರಣ್ಯದಲ್ಲಿ ಜೀವದ ಹಂಗು ತೊರೆದು ಆನೆ ಕಾರ್ಯಪಡೆ, ಕಳ್ಳಬೇಟೆ ನಿಗ್ರಹ ಶಿಬಿರ ಮತ್ತು ಇತರ ವಿಭಾಗದಲ್ಲಿ ಕಾರ್ಯನಿರ್ವಹಿಸುವ ಹೊರಗುತ್ತಿಗೆ ನೌಕರರಿಗೂ ಮಾಸಿಕ 2 ಸಾವಿರ ರೂ. ಕಷ್ಟ ಕಾರ್ಯ ಭತ್ಯೆ ನೀಡುವ ಘೋಷಣೆ ಮಾಡಿದ್ದು, ಇದನ್ನು ಅನುಷ್ಠಾನ ಮಾಡಲಾಗಿದೆ ಎಂದು ತಿಳಿಸಿದರು. ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಅರಣ್ಯ ಕಾರ್ಯಪಡೆ ಮುಖ್ಯಸ್ಥರಾದ ಬ್ರಿಜೇಶ್ ದೀಕ್ಷಿತ್ ಮತ್ತಿತರರು ಭಾಗವಹಿಸಿದ್ದರು.

**ಹೆಚ್ಚು ಅರಣ್ಯ ಭೂಮಿ ಮರು ವಶಕ್ಕೆ**

> **ಕಳೆದ 16 ತಿಂಗಳ ಅವಧಿಯಲ್ಲಿ ಅರಣ್ಯ ಇಲಾಖೆ ಸುಮಾರು 10 ಸಾವಿರ ಎಕರೆ ಭೂಮಿಯನ್ನು ಅಧಿಸೂಚಿತ ಅರಣ್ಯ ಎಂದು ಘೋಷಿಸಿದೆ. ಜೊತೆಗೆ ಬೆಂಗಳೂರು, ಕೋಲಾರ, ಬೀದರ್ ಸೇರಿದಂತೆ ರಾಜ್ಯದ ವಿವಿಧೆಡೆ ಸಾವಿರಾರು ಕೋಟಿ ರೂ ಬೆಲೆ ಬಾಳುವ 2500 ಎಕರೆಗೂ ಹೆಚ್ಚು ಅರಣ್ಯ ಭೂಮಿಯನ್ನು ಮರು ವಶಕ್ಕೆ ಪಡೆದಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.**



> **ಪಶ್ಚಿಮಘಟ್ಟ ಹಲವು ನದಿಗಳ ಮೂಲವಷ್ಟೇ ಅಲ್ಲದೆ, ಸಸ್ಯ ಸಂಕುಲ, ಪ್ರಾಣಿ ಸಂಕುಲ, ಕೀಟ ಸಂಕುಲ, ಪಕ್ಷಿ ಸಂಕುಲದ ನೆಲೆಯಾಗಿದೆ. ಇದರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಇದೇ 19ರಂದು ಪಶ್ಚಿಮಘಟ್ಟ ವ್ಯಾಪ್ತಿಯ ಬಾಧ್ಯಸ್ಥರ ಸಭೆ ನಡೆಸಿ ಅಭಿಪ್ರಾಯ ಸಂಗ್ರಹಿಸಿ, ನಂತರ ಸಚಿವ ಸಂಪುಟದ ಉಪ ಸಮಿತಿ ಸಭೆಯಲ್ಲಿ ಚರ್ಚಿಸಿ, ಮುಖ್ಯಮಂತ್ರಿಗಳೊಂದಿಗೆ ಸಮಾಲೋಚಿಸಿ ನಂತರ ಸಚಿವ ಸಂಪುಟದ ಅನುಮೋದನೆ ಪಡೆದು, ಪಶ್ಚಿಮಘಟ್ಟದ ಜೀವವೈವಿಧ್ಯ, ಜನರ ಜೀವನೋಪಾಯ ಎರಡೂ ಇರುವ ರೀತಿಯಲ್ಲಿ ಕೇಂದ್ರ ಸರ್ಕಾರಕ್ಕೆ ನಮ್ಮ ರಾಜ್ಯದ ನಿಲುವು ತಿಳಿಸಲಾಗುವುದು ತಿಳಿಸಿದರು.** -ಈಶ್ವರ ಖಂಡ್ರೆ

> **2015ಕ್ಕೆ ಮೊದಲು ಅಂದರೆ ರಾಜ್ಯ ಸರ್ಕಾರದ ನಡವಳಿಗೆ ಮೊದಲು ಪಟ್ಟಾ ಜಮೀನು ಮತ್ತು ಅರಣ್ಯ ಭೂಮಿ ಒತ್ತುವರಿ ಸೇರಿ 3 ಎಕರೆ ಮೀರದ ಪ್ರಕರಣಗಳಲ್ಲಿ ಮತ್ತು ಅರಣ್ಯ ಹಕ್ಕು ಕಾಯಿದೆಯ ಅರ್ಜಿ ವಿಲೇವಾರಿ ಆಗದ ಪ್ರಕರಣಗಳ ಹೊರತಾಗಿ ದೊಡ್ಡ ಅರಣ್ಯ ಒತ್ತುವರಿ ತೆರವು ಮಾಡಿಸಲು ಸ್ಪಷ್ಟ ಆದೇಶ ನೀಡಲಾಗಿದೆ. ಇದು ಸಂವಿಧಾನದ 41 (ಎ) ಮತ್ತು 51 (ಎ) ಆಶಯಗಳಿಗೆ ಅನುಗುಣವಾಗಿದೆ ಎಂದು ತಿಳಿಸಿದರು.**

## ರಂಗ ಒಲಿದ ದಾಸರಾಯ ವಿಶೇಷ ದಾಸವಾಣಿ ಕಾರ್ಯಕ್ರಮ



• **ಉದಯವಾಹಿನಿ, ಬೆಂಗಳೂರು**

ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಮಾನ್ವಿಯ ಮುನಿಪುಂಗವ' ಶ್ರೀ ಜಗನ್ನಾಥದಾಸರ ಆರಾಧನೆಯ ಪ್ರಯುಕ್ತ ಸೆಪ್ಟೆಂಬರ್12 , ಗುರುವಾರ ಸಂಜೆ 6-30ಕ್ಕೆ ವಿದುಷಿ ಶ್ರೀಮತಿ ಸಂಧ್ಯಾ ಶ್ರೀನಾಥ್ ಅವರು ರಂಗ ಒಲಿದ ದಾಸರಾಯ ಎಂಬ ಶೀರ್ಷಿಕೆಯಲ್ಲಿ ಜಗನ್ನಾಥದಾಸರನ್ನು ಕುರಿತ ಕೃತಿಗಳನ್ನೂ ಹಾಗೂ ಶ್ರೀ ಜಗನ್ನಾಥದಾಸರು ರಚಿಸಿರುವ ಕೃತಿಗಳನ್ನೂ ಪ್ರಸ್ತುತಪಡಿಸಲಿದ್ದಾರೆ. ವಾದ್ಯಸಹಕಾರ : ಶ್ರೀ ಬಿ. ಆರ್. ಪ್ರಕಾಶ್ (ಕೀ-ಬೋರ್ಡ್), ಶ್ರೀ ಶ್ರೀನಿವಾಸ ಕಾಖಂಡಕಿ (ತಬಲಾ) ಈ ಮೇಲ್ಕಂಡ ವಿಶೇಷ ಕಾರ್ಯಕ್ರಮದಲ್ಲಿ ದಾಸಸಾಹಿತ್ಯಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶ್ರೀಮಠದ ಗೌರವ ಅಧ್ಯಕ್ಷರಾದ ಡಾ|| ಸುಧೀಂದ್ರಕುಮಾರ್ ವಿನಂತಿಸಿದ್ದಾರೆ.

ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಕೆಂಗೇರಿ ಉಪನಗರ, ಬೆಂಗಳೂರು

## ಬೆಂಗಳೂರು ಪೊಲೀಸರಿಂದ ಭರ್ಜರಿ ಕಾರ್ಯಾಚರಣೆ

• **ಉದಯವಾಹಿನಿ, ಬೆಂಗಳೂರು**

ಪೊಲೀಸರು ಭರ್ಜರಿ ಕಾರ್ಯಾಚರಣೆಯನ್ನು ನಡೆಸಿದ್ದು, ಐವರು ಕೇಂದ್ರದ ಜಿಎಸ್‌ಟಿ ಅಧಿಕಾರಿಗಳನ್ನು ಬಂಧಿಸಿದ್ದಾರೆ. ಬೆಂಗಳೂರಿನ ಉದ್ಯಮಿಯೊಬ್ಬರ ವಿರುದ್ಧದ ಕೇಸ್ ಮುಚ್ಚಿ ಹಾಕಲು 1.50 ಕೋಟಿ ಹಣವನ್ನು ಪಡೆದಿದ್ದಂತ ಐವರು ಜಿಎಸ್‌ಟಿ ಅಧಿಕಾರಿಗಳು ನಾಪತ್ತೆಯಾಗಿದ್ದರು. ಸಂಬಂಧ ಬೈಯಪ್ಪನಹಳ್ಳಿ ಠಾಣೆಯ ಪೊಲೀಸರಿಗೆ ಉದ್ಯಮಿ ದೂರು ನೀಡಿದ್ದರು. ದೂರು ಆಧರಿಸಿ ಕಾರ್ಯಾಚರಣೆಗೆ ಇಳಿದಂತ ಪೊಲೀಸರು ಮಹಿಳಾ ಅಧಿಕಾರಿ ಸೇರಿದಂತೆ ಐವರು ಕೇಂದ್ರದ ಜಿಎಸ್ಟಿ ಅಧಿಕಾರಿಗಳನ್ನು ಬಂಧಿಸಿದ್ದಾರೆ. ಈ ಮೂಲಕ ಬೈಯ್ಯಪ್ಪನಹಳ್ಳಿ ಠಾಣೆಯ ಪೊಲೀಸರು 1.50 ಕೋಟಿ ಹಣ ಪಡೆದು ಪರಾರಿಯಾಗಿದ್ದಂತ ಐವರು ಅಧಿಕಾರಿಗಳನ್ನು ಅರೆಸ್ಟ್ ಮಾಡಿದೆ. ಅಂದಹಾಗೇ ಉದ್ಯಮಿಯ ವಿರುದ್ಧ ಏನಿತ್ತು ಕೇಸ್ ಅವರು ಅಷ್ಟೊಂದು ಹಣ ಕೊಟ್ಟಿದ್ದೇಕೆ ಸೇರಿದಂತೆ ಇತರೆ ಮಾಹಿತಿಯನ್ನು ನಿರೀಕ್ಷಿಸಲಾಗಿದೆ. ಈ ಸಂಬಂಧ ಪೊಲೀಸರಿಂದ ತನಿಖೆ ನಡೆಯುತ್ತಿದ್ದು, ಮತ್ತಷ್ಟು ಮಾಹಿತಿ ನಿರೀಕ್ಷಿಸಲಾಗಿದೆ.

## ರಾಜ್ಯ ಸರ್ಕಾರದಿಂದ ವಿವಿಧ ನಿಗಮಗಳಿಗೆ ಗುಡ್ ನ್ಯೂಸ್ : ಹಲವು ಸೌಲಭ್ಯ

• **ಉದಯವಾಹಿನಿ, ಬೆಂಗಳೂರು**

ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳ ವತಿಯಿಂದ 2024-25 ನೇ ಸಾಲಿನಲ್ಲಿ ನೇರಸಾಲ ಯೋಜನೆ, ಉದ್ಯಮ ಶೀಲತಾಭಿವೃದ್ಧಿ ಯೋಜನೆ, ಸ್ವಾವಲಂಬಿ ಸಾರಥಿ, ಮೈಕ್ರೋ ಕ್ರೆಡಿಟ್ ಪ್ರೇರಣಾ ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ಭೂ ಒಡೆತನ ಯೋಜನೆಗಳಡಿ ಸೌಲಭ್ಯ ನೀಡಲು ಅರ್ಜಿ ಆಹ್ವಾನಿಲಾಗಿದೆ. ಆಸಕ್ತ ಫಲಾಪೇಕ್ಷಿಗಳು ಶಿವಮೊಗ್ಗ-1, ಗ್ರಾಮ-1, ಕರ್ನಾಟಕ-1, ಸೇವಾ ಸಿಂಧು ಪೋರ್ಟಲ್ನಲ್ಲಿ ಅಗತ್ಯ ದಾಖಲೆಗಳೊಂದಿಗೆ ವೆಬ್ಸೈಟ್ https://sevasindhu.karnataka.gov.in ರ ಮೂಲಕ ಅಕ್ಟೋಬರ್ 10 ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಜಿಲ್ಲಾ ವ್ಯವಸ್ಥಾಪಕರ ಕಚೇರಿಯನ್ನು ಖುದ್ದಾಗಿ ಅಥವಾ ದೂ.ಸಂ.: 08182-224349 ನ್ನು ಸಂಪರ್ಕಿಸಬಹುದೆಂದು ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2025ರ ಫೆ.12ರಿಂದ 14 ರ ವರೆಗೆ ಬೃಹತ್ ಜಾಗತಿಕ ಹೂಡಿಕೆದಾರರ ಸಮಾವೇಶ ನಿಗದಿ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ 2025ರ ಫೆ.12ರಿಂದ 14ರ ವರೆಗೆ ಬೃಹತ್ ಜಾಗತಿಕ ಹೂಡಿಕೆದಾರರ ಸಮಾವೇಶ ನಿಗದಿಯಾಗಿದೆ. ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರ ನೇತೃತ್ವದಲ್ಲಿ 2025ರ ಫೆಬ್ರವರಿ 12ರಿಂದ 14ರ ವರೆಗೆ ಬೃಹತ್ ಜಾಗತಿಕ ಹೂಡಿಕೆದಾರರ ಸಮಾವೇಶವು ಬೆಂಗಳೂರಿನಲ್ಲಿ ನಡೆಯಲಿದೆ. ಈ ಸಮಾವೇಶದ ಮುಖ್ಯ ಧ್ಯೇಯವು ?ಬೆಳವಣಿಗೆಯ ಹೊಸ ಪರಿಕಲ್ಪನೆ? ಆಗಿದೆ. ಇನ್ವೆಸ್ಟ್ ಕರ್ನಾಟಕ ಶೃಂಗಸಭೆ 2025 ರಲ್ಲಿ 100 ಕ್ಕೂ ಹೆಚ್ಚು ಪರಿಣಿತರು ವಿಷಯ ಮಂಡಿಸಲಿದ್ದಾರೆ. 30ಕ್ಕೂ ಹೆಚ್ಚು ತಾಂತ್ರಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. 5,000ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ಸರ್ಕಾರ ಮಾಹಿತಿ ನೀಡಿದೆ.

## ಕರ್ನಾಟಕದಲ್ಲಿ ಕನ್ನಡಿಗರಿಗೆ ಇಲ್ಲ ರಕ್ಷಣೆ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದಲ್ಲಿ ಕನ್ನಡಿಗರಿಗೆಲ್ಲಾ ಸುರಕ್ಷತೆ ಇಲ್ಲದಂತಾಗಿದೆ. ಬೇರೆ ಬೇರೆ ರಾಜ್ಯದಿಂದ ಕರ್ನಾಟಕಕ್ಕೆ ಆಗಮಿಸಿ ಇಲ್ಲಿಯೇ ಜೀವನ ರೂಪಿಸಿಕೊಂಡು, ಅವರಿಗೆ ಇಲ್ಲಿಯ ಅನ್ನ ನೀರು ಬೇಕೇ ಹೊರತು, ಕನ್ನಡಿಗರು ಮಾತ್ರ ಬೇಡ ಅನ್ನುವ ಪರಿಸ್ಥಿತಿ ನಿರ್ಮಾಣವಾಗಿದೆ. ಹೌದು ಕನ್ನಡ ಮಾತನಾಡಿದ್ದಕ್ಕೆ ಯುಪಿ ಗ್ಯಾಂಗ್ ನಿಂದ ಕನ್ನಡಿಗ ಕಾರ್ಮಿಕನ ಮೇಲೆ ಹಲ್ಲೆ ನಡೆಸಲಾಗಿದೆ.
ಬೆಂಗಳೂರಿನ ಆನೇಕಲ್ ಪಟ್ಟಣದಲ್ಲಿ ಈ ಒಂದು ಘಟನೆ ನಡೆದಿದೆ ಎಂದು ತಿಳಿದುಬಂದಿದೆ. ಹಿಂದಿ ಮಾತಾಡುವಂತೆ ಕಾರ್ಮಿಕನ ಮೇಲೆ ಹಲ್ಲೆ ನಡೆಸಿದ್ದಾರೆ ಎನ್ನುವ ಆರೋಪ ಕೇಳಿ ಬಂದಿದೆ.

## ಅರಣ್ಯ ಹುತಾತ್ಮರ ಕುಟುಂಬಕ್ಕೆ ಪರಿಹಾರ 30 ರಿಂದ 50 ಲಕ್ಷಕ್ಕೆ ಹೆಚ್ಚಳ

• **ಉದಯವಾಹಿನಿ, ಬೆಂಗಳೂರು**



ಪ್ರಕೃತಿಯಿಂದ ಲಾಭ ಪಡೆಯುತ್ತಿರುವ ಎಲ್ಲರಿಗೂ ಪ್ರಕೃತಿ ರಕ್ಷಣೆಯ ಹೊಣೆ ಇದೆ. ಅರಣ್ಯ ಹುತಾತ್ಮರ ಕುಟುಂಬಕ್ಕೆ ನೀಡುವ ಪರಿಹಾರ ಮೊತ್ತವನ್ನು 30 ರಿಂದ 50 ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನದ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅರಣ್ಯ ಭವನದಲ್ಲಿನ ಹುತಾತ್ಮರ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು. ರಾಜ್ಯದಲ್ಲಿ ಅನುಪಾತಕ್ಕೆ ತಕ್ಕಷ್ಟು ಅರಣ್ಯವಿಲ್ಲ. ಆದ್ದರಿಂದ ಅರಣ್ಯೀಕರಣ ಹೆಚ್ಚಾಗಬೇಕು. ಕಾಡು ಮತ್ತು ವನ್ಯ ಪ್ರಾಣಿ ಸಂಪತ್ತಿನ ರಕ್ಷಣೆ ಕೇವಲ ಅರಣ್ಯಾಧಿಕಾರಿಗಳು ಮತ್ತು ಸಿಬ್ಬಂದಿಯ ಕರ್ತವ್ಯ ಎಂದರೆ ನಾವು ನಮ್ಮ ಹೊಣೆಗಾರಿಕೆಯಿಂದ ತಪ್ಪಿಸಿಕೊಂಡಂತಾಗುತ್ತದೆ ಎಂದರು. ರಾಜ್ಯದಲ್ಲಿ ಆನೆ, ಹುಲಿಗಳ ಸಂಖ್ಯೆ ಹೆಚ್ಚುತ್ತಿರುವುದು ಸಂತೋಷದ ಸಂಗತಿ. ಆದರೆ ಪ್ರಾಣಿ-ಮನುಷ್ಯ ಸಂಘರ್ಷ ತಪ್ಪಿಸಿ ಮಾನವ, ಪ್ರಾಣಿ ಸಂಪತ್ತನ್ನು ಕಾಪಾಡುವ ದಿಕ್ಕಿನಲ್ಲಿ ಇನ್ನಷ್ಟು ಪರಿಣಾಮ ಕಾರಿ ಕೆಲಸಗಳು ಆಗಬೇಕಿದೆ. ಇದಕ್ಕಾಗಿ ಲಭ್ಯ ಇರುವ ಆಧುನಿಕ ತಂತ್ರ ಜ್ಞಾನವನ್ನು ಬಳಸಿಕೊಳ್ಳಬೇಕು ಎಂದು ಕರೆ ನೀಡಿದರು. ಅರಣ್ಯ ಹುತಾತ್ಮರ ಕುಟುಂಬಕ್ಕೆ ನೀಡುವ ಪರಿಹಾರ ಮೊತ್ತವನ್ನು 30 ರಿಂದ 50 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಅರಣ್ಯ ಹುತಾತ್ಮರು ಮನುಕುಲದ ಸಂರಕ್ಷಕರು. ಇವರ ತ್ಯಾಗ ಅರಣ್ಯ ಸಂರಕ್ಷಣೆಗೆ ಸ್ಫೂರ್ತಿಯಾಗಲಿ ಎಂದು ಹಾರೈಸಿದರು. ಅರಣ್ಯ ಮತ್ತು ಜೀವಶಾಸ್ತ್ರ ಇಲಾಖೆಯ ಸಚಿವ ಈಶ್ವರ್ ಖಂಡ್ರೆ, ಮತ್ತು ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಹುತಾತ್ಮರ ಕುಟುಂಬದ ಸದಸ್ಯರು ಮತ್ತು ಬಂಧುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಕೃಷಿ ಪಂಪ್ ಸೆಟ್‌ಗಳ ಸಕ್ರಮ ಯೋಜನೆ ಮರುಜಾರಿ!

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ರಾಜ್ಯದ ರೈತರಿಗೆ ಸಿಎಂ ಸಿದ್ದರಾಮಯ್ಯ ಮತ್ತೊಂದು ಸಿಹಿಸುದ್ದಿ ನೀಡಿದ್ದು, ಅಕ್ರಮ ಕೃಷಿ ಪಂಪ್ ಸೆಟ್‌ಗಳ ಸಕ್ರಮ ಯೋಜನೆ ಮರು ಜಾರಿ ಸೇರಿ ರೈತರ ವಿವಿಧ ಸಮಸ್ಯೆಗಳನ್ನು ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಮತ್ತು ರಾಜ್ಯ ಕಬ್ಬು ಬೆಳೆಗಾರರ ಸಂಘದ ಪದಾಧಿಕಾರಿಗಳು ರೈತ ಮುಖಂಡ ಕುರುಬೂರು ಶಾಂತಕುಮಾರ್ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ರೈತ ಸಮುದಾಯದ ಪ್ರಮುಖ ಬೇಡಿಕೆಗಳ ಕುರಿತು ಚರ್ಚಿಸಿದರು.

ಈ ವೇಳೆ ಅಕ್ರಮ ಕೃಷಿ ಪಂಪ್ ಸೆಟ್‌ಗಳ ಸಕ್ರಮ ಯೋಜನೆ ಮರು ಜಾರಿ ಸೇರಿ ರೈತರ ವಿವಿಧ ಸಮಸ್ಯೆಗಳನ್ನು ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಭೂ ಸುಧಾರಣಾ ತಿದ್ದುಪಡಿ ಕಾಯ್ದೆ ರದ್ದು ಮಾಡುವುದಕ್ಕೆ ಸರ್ಕಾರ ಬದ್ಧವಾಗಿದೆ. ವಿಧಾನ ಪರಿಷತ್‌ನಲ್ಲಿ ಪಕ್ಷ ಬಹುಮತ ಸಾಧಿಸಿದ ನಂತರ ತಿದ್ದುಪಡಿ ವಿಧೇಯಕ ಮಂಡಿಸಿ ಹಿಂದಿನ ಕಾಯ್ದೆ ಮರು ಸ್ಥಾಪಿಸಲಾಗುವುದು. ನೀರಾವರಿ ಪಂಪ್‌ಸೆಟ್‌ಗಳಿಗೆ ರೈತರ ಆಧಾರ್ ಸಂಖ್ಯೆ ಜೋಡಣೆ ಮಾಹಿತಿಯಿಲ್ಲ. ಈ ಬಗ್ಗೆ ವಿವರ ಪಡೆದು ಸೂಕ್ತ ಕ್ರಮವಹಿಸುವೆ ಎಂಬ ಭರವಸೆ ನೀಡಿದರು.

ಇನ್ನುಳಿದ ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸಲು ಕ್ರಮವಹಿಸುವೆ. ಅಧಿಕಾರಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡುವೆ ಎಂದು ಸಿದ್ದರಾಮಯ್ಯ ತಿಳಿಸಿದರು.

**ಅಧಿಕಾರಿಗಳಿಗೆ ಸೂಚನೆ**

**ಈಡೇರಿಕೆಗೆ ರೈತರು ಒತ್ತಾಯ**

**ಬರ, ಅತಿವೃಷ್ಟಿ, ಪ್ರವಾಹದಿಂದ ಹಾನಿಯಾದ ಬೆಳೆಗಳಿಗೆ ವೈಜ್ಞಾನಿಕ ಮಾನದಂಡಗಳ ಅನ್ವಯ ಪರಿಹಾರ ಕೊಡಬೇಕು. ಖಾಸಗಿ ಫೈನಾನ್ಸ್, ಬ್ಯಾಂಕ್ ಸಾಲ ವಸೂಲಿ ನೆಪದಲ್ಲಿ ರೈತರಿಗೆ ಕಿರುಕುಳ ನೀಡುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕು. ಜಿಂದಾಲ್‌ಗೆ ನೀಡಿದ 3667 ಎಕರೆ ಜಮೀನು ಹಿಂಪಡೆಯಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ರೈತರು ಒತ್ತಾಯಿಸಿದ್ದಾರೆ.**

## ಮಹತ್ವಾಕಾಂಕ್ಷೆಯ ಸ್ಯಾಟಲೈಟ್ ರಿಂಗ್ ರಸ್ತೆ ಯೋಜನೆಗೆ ಕೇಂದ್ರ ಸರ್ಕಾರದ ಅನುಮೋದನೆ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

4-5 ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಈ ಕಾಮಗಾರಿಗೆ ಚಾಲನೆ ನೀಡಬೇಕೆಂದು ಮಾಜಿ ಪ್ರಧಾನಮಂತ್ರಿ, ಸನ್ಮಾನ್ಯ ಶ್ರೀ ಎಚ್.ಡಿ. ದೇವೇಗೌಡ ಅವರು ಹಾಗೂ ಸಂಸದರಾದ ಪದ್ಮಶ್ರೀ ಡಾ. ಸಿ ಎನ್ ಮಂಜುನಾಥ್ ರವರು ಸಂಸತ್ ಅಧಿವೇಶನದ ಸಂದರ್ಭದಲ್ಲಿ ಗೌರವಾನ್ವಿತ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವರಾದ ಶ್ರೀ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಈ ಕಾಮಗಾರಿಗೆ ಅನುಮೋದನೆ ನೀಡಲು ಮನವಿ ಸಲ್ಲಿಸಿದ್ದರು, ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು 45 ದಿನಗಳಲ್ಲಿ ಪ್ರಾರಂಭ ಮಾಡುವುದಾಗಿ ಭರವಸೆ ನೀಡಿದ್ದರು,ಆಶ್ಚರ್ಯ ಎಂದರೆ 30 ದಿನಗಳಲ್ಲೇ ಅನುಮೋದನೆ ನೀಡಿದ್ದಾರೆ. ರೂ. 4,750 ಕೋಟಿಗಳ ಅಂದಾಜಿನ ಸ್ಯಾಟಲೈಟ್ ಟೌನ್ ರಿಂಗ್ ರೋಡ್ ಯೋಜನೆಗೆ ಟೆಂಡರ್ ಪ್ರಕ್ರಿಯೆಗೆ ಅನುಮೋದನೆ ನೀಡಲಾಗಿದೆ. ಈ ಪ್ರಮುಖ ಮೂಲಸೌಕರ್ಯ ಯೋಜನೆಯು ಈಡಿ ಬೆಂಗಳೂರು ನಗರ ಗ್ರಾಮೀಣ ಮತ್ತು ಸುತ್ತಮುತ್ತಲಿನ ತಾಲ್ಲೂಕುಗಳಾದ ಡಾಬಸ್ ಪೇಟೆ ದೇವನಹಳ್ಳಿ ದೊಡ್ಡಬಳ್ಳಾಪುರ ಸರ್ಜಾಪುರ ಹೊಸಕೋಟೆ ಕನಕಪುರ ಅತ್ತಿಬೆಲೆ ಸೂಲಿಬೆಲೆ ತಟ್ಟೆಕೆರೆ ರಾಮನಗರ ಮಾಗಡಿ ಮತ್ತು ಆನೇಕಲ್‌ಗೆ ಗಣನೀಯ ಪ್ರಯೋಜನವನ್ನು ನೀಡುತ್ತದೆ. ಇದು ವಾಹನ ಸಂಚಾರ ದಟ್ಟಣೆಯನ್ನು ನಿವಾರಿಸುವುದು ಮತ್ತು ಪ್ರಯಾಣದ ದಕ್ಷತೆ, ಸುರಕ್ಷತೆಯನ್ನು ಹೆಚ್ಚಿಸುವುದರ ಜೊತೆಗೆ ಪ್ರಯಾಣದ ಸಮಯ ಉಳಿಯುತ್ತದೆ. ಈ ಯೋಜನೆಯನ್ನು ಭಾರತಮಾಲಾ ಪರಿಯೋಜನಾ ಯೋಜನೆಯಡಿಯಲ್ಲಿ ಭಾರತದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ನಿರ್ಮಿಸಲಾಗುತ್ತಿದೆ ಹಾಗೂ ಈ ಪ್ರದೇಶದ ಅಭಿವೃದ್ಧಿಗೆ ಪ್ರಮುಖ ಮೈಲಿಗಲ್ಲಾಗಿದೆ, ಬೆಂಗಳೂರಿನ ಸಂಚಾರ ಸಮಸ್ಯೆಗಳಿಗೆ ದೀರ್ಘಕಾಲಿಕ ಪರಿಹಾರವನ್ನು ನೀಡುತ್ತದೆ ಮತ್ತು ಸಾವಿರಾರು ದೈನಂದಿನ ಪ್ರಯಾಣಿಕರಿಗೆ ಸಂಪರ್ಕವನ್ನು ಸುಧಾರಿಸಲು ನೆರವಾಗಲಿದೆ.

> **ಸಮಸ್ತ ರಾಜ್ಯದ ಜನತೆಯ ಪರವಾಗಿ, ಗೌರವಾನ್ವಿತ ಪ್ರಧಾನಮಂತ್ರಿ, ಸನ್ಮಾನ್ಯ ಶ್ರೀ ನರೇಂದ್ರ ಮೋಧಿ ಅವರು ಮತ್ತು ಗೌರವಾನ್ವಿತ ಸಚಿವ ಶ್ರೀ ನಿತಿನ್ ಗಡ್ಕರಿ ಅವರು ಸ್ಯಾಟಲೈಟ್ ಟೌನ್ ರಿಂಗ್ ರೋಡ್ ಯೋಜನೆಗೆ ಟೆಂಡರ್ ಪ್ರಕ್ರಿಯೆಯನ್ನು ಅನುಮೋದಿಸಿದ್ದಕ್ಕಾಗಿ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ.** -ಡಾ. ಸಿ ಎನ್ ಮಂಜುನಾಥ್

## ಗೃಹಲಕ್ಷ್ಮೀ ಯೋಜನೆಗೆ ಹೆಲ್ಪ್ ಡೆಸ್ಕ್ ಆರಂಭ!

• **ಉದಯವಾಹಿನಿ, ಬೆಂಗಳೂರು**




ಗೃಹಲಕ್ಷ್ಮೀ ಯೋಜನೆಯಡಿ ನೊಂದಣಿಯಾಗಿ ಸಹಾಯಧನ ಪಾವತಿಯಾಗದೇ ಇರುವ ಫಲಾನುಭವಿಗಳಿಗೆ ಸೂಕ್ತ ಮಾಹಿತಿ ನೀಡಲು ತಾಲ್ಲೂಕುವಾರು ಶಿಶು ಅಭಿವೃದ್ಧಿ ಯೋಜನಾ ಕಚೇರಿಯಲ್ಲಿ ಹೆಲ್ಪ್ ಡೆಸ್ಕ್ ತೆರೆಯಲಾಗಿದೆ.

ಇಲ್ಲಿಯವರೆಗೂ ಗೃಹಲಕ್ಷ್ಮೀ ಯೋಜನೆಗೆ ನೊಂದಣಿ ಮಾಡಿಕೊಳ್ಳದೇ ಇರುವ ಫಲಾನುಭವಿಗಳು ಗ್ರಾಮ ಒನ್, ದಾವಣಗೆರೆ ಒನ್, ಸೇವಾಸಿಂಧೂ ಕೇಂದ್ರಗಳಲ್ಲಿ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಲಲಿತ.ಟಿ.ಎಸ್ ಪ್ರಥಮ ದರ್ಜೆ ಸಹಾಯಕರು ಮೊ.ಸಂ:9620380498, ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಎಂ.ಸಿ.ಸಿ.ಬಿ ಬ್ಲಾಕ್, ಕುವೆಂಪು ನಗರ ದಾವಣಗೆರೆ, ತುಷಾರ್.ಆರ್.ಎ ದ್ವಿತೀಯ ದರ್ಜೆ ಸಹಾಯಕರು ಮೊ.ಸಂ: 9380629266, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೆರಿ, ದುಗಾರ್ಂಬಿಕ ಶಾಲೆ ಹತ್ತಿರ, ಸರಸ್ವತಿ ಬಡಾವಣೆ, ದಾವಣಗೆರೆ, ಕಿರಣ್ ತಾಲ್ಲೂಕು ಸಂಯೋಜನಾಧಿಕಾರಿ, ಪೋಷಣ್ ಅಭಿಯಾನ ಯೋಜನೆ ಮೊ.ಸಂ:9731262426, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ನೆಲಮಹಡಿ, ಪಿ.ಎಲ್.ಡಿ ಬ್ಯಾಂಕ್ ಬಿಲ್ಡಿಂಗ್. ಶಿವಮೊಗ್ಗ ರಸ್ತೆ, ಹರಿಹರ, ಈಶ್ವರ ತಾಲ್ಲೂಕು ಸಂಯೋಜನಾಧಿಕಾರಿ, ಪೋಷಣ್ ಅಭಿಯಾನ ಯೋಜನೆ ಮೊ.ಸಂ: 9740192819, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ತಾಲ್ಲೂಕು ಪಂಚಾಯಿತಿ ಆವರಣ, ಸ್ರೀಶಕ್ತಿ ಭವನ ಜಗಳೂರು. ಸುದೀಪ್ ತಾಲ್ಲೂಕು ಸಂಯೋಜ ನಾಧಿಕಾರಿ, ಪೋಷಣ್ ಅಭಿಯಾನ ಯೋಜನೆ ಮೊ.ಸಂ:9844019027, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಎರಡನೇ ಮಹಡಿ, ಮಲ್ಲಪ್ಪ ಕಾಂಪ್ಲೆಕ್ಸ್, ಟಿ.ಎಮ್ ರೋಡ್, ಹೊನ್ನಾಳಿ. ಶಿವಣ್ಣ ತಾಲ್ಲೂಕು ಸಂಯೋಜನಾಧಿಕಾರಿ, ಪೋಷಣ್ ಅಭಿಯಾನ ಯೋಜನೆ ಮೊ.ಸಂ:9686601791, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಶಿವಮೊಗ್ಗ ರಸ್ತೆ, ಐ.ಸಿ.ಐ.ಇ ಬ್ಯಾಂಕ್ ಹತ್ತಿರ, ಜಿ.ಎಂ ಕಾಂಪ್ಲೆಕ್ಸ್ ಚನ್ನಗಿರಿ ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ಸಿಎಂ ಸಿದ್ದರಾಮಯ್ಯಗೆ ಪತ್ರ ಬರೆದ ಮುಖ್ಯಮಂತ್ರಿ ಚಂದ್ರು

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಸುಪ್ರೀಂ ಕೋರ್ಟ್ ಆದೇಶವಾಗಿ 6 ವರ್ಷಗಳು ಕಳೆದರೂ ಉತ್ತರಕರ್ನಾಟಕದ ಪ್ರಮುಖ ನೀರಾವರಿ ಯೋಜನೆಯಾಗಿರುವ ಮಹದಾಯಿ, ಕಳಸಾ -ಬಂಡೂರಿ ಯೋಜನೆ ಅನುಷ್ಠಾನಗೊಳ್ಳದಿರುವುದು ಬೇಸರದ ಸಂಗತಿ.

ಆರೋಪ-ಪ್ರತ್ಯಾರೋಪ ಮಾಡುತ್ತ ಕಾಲಹರಣ ಮಾಡದೆ ಆದಷ್ಟು ಶೀಘ್ರವಾಗಿ ಸರ್ವಪಕ್ಷ ನಿಯೋಗವನ್ನು ದೆಹಲಿಗೆ ಕೊಂಡೊಯ್ಯುವ ಮೂಲಕ ಈ ಯೋಜನೆಗೆ ತಾರ್ಕಿಕ ಅಂತ್ಯ ಕಾಣಿಸಬೇಕು ಎಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಪತ್ರ ಬರೆದಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಅವರು ಪತ್ರ ಬರೆದಿದ್ದು, ಭದ್ರಾ ಮೇಲ್ದಂಡೆ ಯೋಜನೆಯ ಹಣಕಾಸಿನ ನವೀಕೃತ ಮಾಹಿತಿಯನ್ನು ತಕ್ಷಣ ಕೇಂದ್ರಕ್ಕೆ ಕಳುಹಿಸಿ, ಅದರ ಪಾಲಿನ ರೂ.5,300 ಕೋಟಿ ಕೂಡಲೇ ಬಿಡುಗಡೆ ಮಾಡುವಂತೆ ಒತ್ತಡ ಹೇರಬೇಕು ಎಂದು ತಿಳಿಸಿದ್ದಾರೆ. ಮಹದಾಯಿ ನ್ಯಾಯಾಧೀಕರಣದಿಂದ 2018ರ ಆಗಸ್ಟ್ 14 ರಂದು ತೀರ್ಪು ಪ್ರಕಟವಾಗಿದೆ. ತೀರ್ಪಿನಲ್ಲಿ 13.42 ಟಿಎಂಸಿ ನೀರು ರಾಜ್ಯಕ್ಕೆ ಹಂಚಿಕೆಯಾಗಿದ್ದು, ಕಳಸಾ- 1.72 ಟಿಎಂಸಿ, ಬಂಡೂರಿ ನಾಲಾದಿಂದ 2.18 ಟಿಎಂಸಿ ನೀರು ಹಂಚಿಕೆ ಆಗಿದೆ. ಕಳಸಾ ನಾಲಾಗೆ ಕಣಕುಂಬಿ ಬಳಿ ಈಗಾಗಲೇ 5 ಕಿ.ಮೀ. ಟನಲ್ ನಿರ್ಮಾಣ ಮಾಡಲಾಗಿದೆ. ಜತೆಗೆ ಕಳಸಾ ನೀರು ಬಳಕೆಗೆ ಕಳಸಾ, ಹಲತಾರ ಡ್ಯಾಂ ನಿರ್ಮಾಣದ ಅವಶ್ಯಕತೆ ಇದೆ. ಡ್ಯಾಂ ನಿರ್ಮಾಣದ ಜಮೀನು ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಇದೆ. ಹೀಗಾಗಿ ಕೇಂದ್ರ ಪರಿಸರ ಹಾಗೂ ಅರಣ್ಯ ಇಲಾಖೆ ಅನುಮತಿ ಸಿಕ್ಕಿಲ್ಲ. ಜತೆಗೆ ಗೋವಾ ಸರ್ಕಾರ ಪರಿಸರದ ನೆಪವೊಡ್ಡಿ ಪದೆ ಪದೇ ಅಡ್ಡಿ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಚಂದ್ರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

> **ಕೇಂದ್ರದಲ್ಲಿ ಕಳೆದ 10 ವರ್ಷಗಳಿಂದ ಮೋದಿ ಸರ್ಕಾರವಿದೆ. ಗೋವಾದಲ್ಲಿಯೂ ಬಿಜೆಪಿ ಸರ್ಕಾರವಿದೆ. ಕಳೆದ ಬಾರಿ ರಾಜ್ಯದಿಂದ 25 ಬಿಜೆಪಿ ಸಂಸದರಿದ್ದರು. ಈ ಬಾರಿಯೂ 16 ಸಂಸದರಿದ್ದಾರೆ. ಉತ್ತರ ಕರ್ನಾಟಕ ಭಾಗದಲ್ಲಿ ಬಿಜೆಪಿ ಪ್ರಾಬಲ್ಯ ಹೊಂದಿದೆ. ಇಷ್ಟೆಲ್ಲಾ ಇದ್ದರೂ ಮಹದಾಯಿ ಯೋಜನೆ ಅನುಷ್ಠಾನಗೊಳ್ಳದಿರುವುದು ಬಿಜೆಪಿ ಪಕ್ಷದ ಬದ್ಧತೆಯನ್ನು ಹೇಳುತ್ತದೆ. ಆದರೆ ಈಗ ರಾಜಕೀಯ ಕೆಸರೆರಚಾಟ ಮಾಡುತ್ತ ಕೂರುವ ಸಮಯವಲ್ಲ. ಸರ್ವಪಕ್ಷ ನಿಯೋಗದ ಮೂಲಕ ಕೇಂದ್ರದ ಮುಂದೆ ರಾಜ್ಯದ ಶಕ್ತಿ ಪ್ರದರ್ಶನವಾಗಬೇಕಿದೆ ಎಂದು ಪತ್ರದಲ್ಲಿ ಒತ್ತಾಯಿಸಿದ್ದಾರೆ.**

# ರಾಗಾ-ಡಿಕೆಶಿ ಭೇಟಿ, ಬಿಪಿಎಲ್ ಕಾರ್ಡು ರದ್ದು!

## ಯಾವುದೇ ಬಿಪಿಎಲ್ ಕಾರ್ಡ್‌ಗಳನ್ನು ಕಡಿತ ಮಾಡುವುದಿಲ್ಲ, ಇನ್ನೂ ದ್ವೇಷದ ರಾಜಕಾರಣ ಆರೋಪ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಅಮೆರಿಕಾದಲ್ಲಿ ಡಿ.ಕೆ.ಶಿವಕುಮಾರ್ ಮತ್ತು ಪಕ್ಷದ ನಾಯಕ ರಾಹುಲ್ ಗಾಂಧಿ ಭೇಟಿಯಾಗಿರುವುದು ನನಗೆ ಗೊತ್ತಿಲ್ಲ. ಸೋಷಿಯಲ್ ಮೀಡಿಯಾದಲ್ಲಿ ಬಂದಿರುವ ಫೋಟೊಗಳನ್ನು ಗಮನಿಸಿದ್ದೇನೆ.
ಅವರು ಕುಟುಂಬ ಸಮೇತ ಅಮೇರಿಕಾ ಪ್ರವಾಸ ಹೋಗಿದ್ದಾರೆ. ಆಕಸ್ಮಿಕವಾಗಿ ಅದೇ ಹೋಟೆಲ್‌ನಲ್ಲಿ ಸಿಕ್ಕಿದ್ದಾರೆ ಎಂದರೆ, ಓಡಿ ಹೋಗಲು ಆಗುತ್ತಾ ಹೀಗಾಗಿ ಅವರಿಗೆ ಸತ್ಕರಿಸಿರುತ್ತಾರೆ ಎಂದು ಗೃಹ ಸಚಿವ ಜಿ,ಪರಮೇಶ್ವರ ತಿಳಿಸಿದರು.

ಬುಧವಾರ ತಮ್ಮ ನಿವಾಸದ ಬಳಿ ಸುದ್ದಿಗಾರರ ಜೊತೆ ಮಾತನಾಡಿದ ಅವರು ಪಡಿತರ ಬಿಪಿಎಲ್ ಕಾರ್ಡ್ ರದ್ದು ಬಗ್ಗೆ ಸ್ಪಷ್ಟನೆ ನೀಡಿದರು. ಯಾವುದೇ ಬಿಪಿಎಲ್ ಕಾರ್ಡ್‌ಗಳನ್ನು ಕಡಿತ ಮಾಡುವುದಿಲ್ಲ. ತೆರಿಗೆ ಪಾವತಿ ಮಾಡುತ್ತಿರುವ ಕುಟುಂಬಸ್ಥರು ಬಿಪಿಎಲ್ ಕಾರ್ಡ್ ಪಡೆಯಲು ಅರ್ಹರಲ್ಲ ಎಂಬುದು ನಿಯಮದಲ್ಲಿದೆ. ಸುಳ್ಳು ದಾಖಲೆ ಸಲ್ಲಿಸಿ, ಅಧಿಕಾರಿಗಳ ಮನವೊಲಿಸಿ ಕಾರ್ಡ್ ಪಡೆದಿರುವುದು ತಪ್ಪಲ್ಲವೇ ಯಾರ ಕಾರ್ಡ್‌ನ್ನು ಪಟ್ಟಿಯಿಂದ ತೆಗೆಯುವುದಿಲ್ಲ ಎಂದರು.

ಸರ್ಕಾರ ಬಡವರ ಅನ್ನ ಕಿತ್ತುಕೊಳ್ಳುವ ಪ್ರಯತ್ನ ಮಾಡುತ್ತಿದೆ ಎಂದಿರುವ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿ, ಅವರು ಏನೋ ಹೇಳುತ್ತಾರೇ ಪಾಪ. ಹೆಚ್.ಡಿ.ಕುಮಾರಸ್ವಾಮಿ ಅವರು ದೊಡ್ಡ ಜವಾಬ್ದಾರಿಯಲ್ಲಿದ್ದಾರೆ. ರಾಜ್ಯಕ್ಕೆ ದೊಡ್ಡ ಕೈಗಾರಿಕೆ, ಸ್ಟೀಲ್ ಇಂಡಸ್ಟ್ರೀಸ್ ನೀಡಿದರೆ ಚೆಂದ ಎಂದು ತಿರುಗೇಟು ನೀಡಿದರು. ಮುಖ್ಯಮಂತ್ರಿ ಸ್ಥಾನದ ಚರ್ಚೆಯ ಬಗ್ಗೆ ಶಿಸ್ತಿನ ಕ್ರಮದ ಕುರಿತು ಪಕ್ಷದ ಅಧ್ಯಕ್ಷರು ಕಡಿವಾಣ ಹಾಕುತ್ತಾರೆ. ಸದ್ಯ ಕೆಪಿಸಿಸಿ ಅಧ್ಯಕ್ಷರಾದ ಡಿಸಿಎಂ ಡಿಕೆ ಶಿವಕುಮಾರ್ ಅವರು ಅಮೆರಿಕಾ ಪ್ರವಾಸದಲ್ಲಿದ್ದಾರೆ. ಅವರ ಮರಳಿ ಬಂದನಂತರ ಈ ಬಗ್ಗೆ ಗಮನ ಹರಿಸುತ್ತಾರೆ ಎಂದು ವಿವರಿಸಿದರು. ವಾಲ್ಮೀಕಿ ನಿಗಮ ಹಗರಣದ ಇ.ಡಿ. ಚಾರ್ಜ್‌ಶೀಟ್ ಕುರಿತು ಪ್ರತಿಕ್ರಿಯಿಸಿ, ನಮ್ಮೆಲ್ಲರ ಹೇಳಿಕೆಗಳು ಮುಖ್ಯವಲ್ಲ. ತನಿಖಾ ಸಂಸ್ಥೆಗಳಿಗೆ ದೊರೆತ ಸಾಕ್ಷ್ಯಾಧಾರಗಳ ಆಧಾರದ ಮೇಲೆ ತೀರ್ಮಾನ ಮಾಡುತ್ತಾರೆ. ನಾವು ನೀಡುವ ಹೇಳಿಕೆಗಳು ಮೇಲ್ನೋಟಕ್ಕೆ ಮಾತ್ರ. ತನಿಖೆ ಕೈಗೊಂಡ ಬಳಿಕ ಸತ್ಯಾಸತ್ಯತೆ ಗೊತ್ತಾಗುತ್ತದೆ. ಮಾಜಿ ಸಚಿವ ನಾಗೇಂದ್ರ ಅವರ ಪಾತ್ರ ಇದೆ ಎಂದು ಇ.ಡಿ.ಯವರು ಹೇಳುತ್ತಿದ್ದಾರೆ. ಬೇಕಾದಷ್ಟು ಸಲ ಹಾಗೇ ಆಗುತ್ತದೆ. ಅವರು ಹೇಳಿರುವುದಕ್ಕೆ ನಮಗೆ ಸಾಕ್ಷ್ಯ ಸಿಕ್ಕಿರುವುದಿಲ್ಲ. ನಾವು ಹೇಳಿರುವುದಕ್ಕೆ ಅವರಿಗೆ ಸಾಕ್ಷ್ಯ ಸಿಕ್ಕಿರುವುದಿಲ್ಲ. ಬೇಕಾದಷ್ಟು ಸಲ ಹೀಗಾಗಿದೆ. ವಿವಿಧ ತನಿಖಾ ಸಂಸ್ಥೆಗಳ ತನಿಖಾ ವಿಧಾನವೇ ಬೇರೆ ಇರುತ್ತದೆ. ಆ ದೃಷ್ಟಿಯಿಂದ ಮಾಡುತ್ತಾರೆ. ಇ.ಡಿ.ಯವರು ಮತ್ತು ಎಸ್‌ಐಟಿಯವರು ಇಬ್ಬರು ಚಾರ್ಜ್‌ಶೀಟ್ ಸಲ್ಲಿಸುತ್ತಾರೆ ಎಂದು ಹೇಳಿದರು. ಪೊಲೀಸ್ ಇಲಾಖೆಯಲ್ಲಿ ಬಾಕಿ ಇರುವ ಪ್ರಕರಣಗಳನ್ನು ಪ್ರಗತಿ ಪರಿಶೀಲನೆ ಮಾಡಲಾಗಿದೆ. ಒಂದಷ್ಟು ಅಂಶಗಳನ್ನು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ಪ್ರಕರಣಗಳು ಸಂಬಂಧ ವಾರದೊಳಗೆ ಸಭೆ ಮಾಡಿ ಆ ವರದಿಯನ್ನು ಸಚಿವ ಸಂಪುಟಕ್ಕೆ ಸಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

> **ಇನ್ನೂ ದ್ವೇಷದ ರಾಜಕಾರಣ ಆರೋಪಕ್ಕೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಬಿಜೆಪಿಯವರು ಏನಾದರು ಹೇಳಿಕೊಳ್ಳಲಿ. ನಮ್ಮನ್ನು ಟೀಕೆ ಮಾಡುವುದಕ್ಕೆ, ಸಲಹೆ ನೀಡಲು, ತಪ್ಪು ಮಾಡಿದಾಗ ಹೇಳುವುದಕ್ಕೆ ಅವರಿಗೆ ಜವಾಬ್ದಾರಿ ಇದೆ. ಆಡಳಿತ ನಡೆಸುವರಿಗೂ ಅವರಿಗೆ ಆದಂತಹ ಜವಾಬ್ದಾರಿಗಳಿರುತ್ತವೆ ಎಂದು ತಿಳಿಸಿದರು.**

> **ಮುಖ್ಯಮಂತ್ರಿ ಸ್ಥಾನದ ಬಗ್ಗೆ ಚರ್ಚೆ ಅನಗತ್ಯ. ನಾವು ಜನರಿಗೆ ಕೊಟ್ಟ ಭರವಸೆಗಳನ್ನು, ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಆಡಳಿತ ಮಾಡಬೇಕು. ಬಿಜೆಪಿಯವರು ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ಸರ್ಕಾರವನ್ನು ಅಸ್ಥಿರಗೊಳಿಸಲು, ಸರ್ಕಾರದ ಕಾರ್ಯಕ್ರಮಗಳು ಅನುಷ್ಟಾನ ಆಗಬಾರದು ಎಂಬ ಉದ್ದೇಶದಿಂದ ಈ ರೀತಿ ನಡೆದುಕೊಳ್ಳುತ್ತಿದ್ದಾರೆ. ಇದೆಲ್ಲವನ್ನು ಬದಿಗೊತ್ತಿ ನಾವು ಕೆಲಸ ಮಾಡಬೇಕಿದೆ ಎಂದರು.**

> **ತನಿಖಾ ಸಂಸ್ಥೆಗಳ ಹಂತದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಅವರು ಪರಿಶೀಲಿಸಿದ್ದಾರೆ. ಅಗತ್ಯ ಸೂಚನೆ ನೀಡಿದ್ದಾರೆ. ತ್ವರಿತಗತಿಯಲ್ಲಿ ತನಿಖೆ ಮಾಡಲು ಸಮಿತಿ ರಚಿಸಲಾಗಿದೆ. ಅದರಂತೆ ಒಂದು ವಾರದಲ್ಲಿ ಸಭೆ ಮಾಡಿ ಕ್ಯಾಬಿನೆಟ್‌ಗೆ ಸಲ್ಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು. ಎಲ್ಲಾ ಹಗರಣಗಳ ಪ್ರಕರಣಗಳನ್ನು ಗುರುತಿಸಿದ್ದೇವೆ. ಅವುಗಳ ತನಿಖೆ ಯಾವ ಹಂತದಲ್ಲಿವೆ ಎಂಬುದನ್ನು ಪರಿಶೀಲಿಸಿ, ವರದಿ ಸಿದ್ದಪಡಿಸಲಾಗುತ್ತದೆ. ತ್ವರಿತಗತಿಯಲ್ಲಿ ತನಿಖೆ ನಡೆಯಬೇಕು ಎಂಬ ಉದ್ದೇಶದಿಂದ ಸಮಿತಿ ರಚನೆ ಮಾಡಲಾಗಿದೆ.**

# ರೇಷ್ಮೆ ಬೆಳೆಗಾರರ ಸಮಸ್ಯೆಗೆ ಪರಿಹಾರದ ಭರವಸೆ

## ರೇಷ್ಮೆ ಬೆಳೆಗಾರರ ಸಮಸ್ಯೆಗಳ ಕುರಿತು ಶಾಸಕರ ನಿಯೋಗದೊಂದಿಗೆ ಸಿಎಂ ಭೇಟಿ ಮಾಡಲಾಗುವುದು: ಕೆ. ವೆಂಕಟೇಶ್

• ಉದಯವಾಹಿನಿ ರಾಮನಗರ

ರೇಷ್ಮೆ ಬೆಳೆಗಾರರ ಸಮಸ್ಯೆಗಳ ಕುರಿತು ಶಾಸಕರ ನಿಯೋಗದೊಂದಿಗೆ ಮುಖ್ಯಮಂತ್ರಿ ಭೇಟಿ ಮಾಡಲಾಗುವುದು. ಸಮಸ್ಯೆಗಳನ್ನು ಅವರಿಗೆ ಮನದಟ್ಟು ಮಾಡಿಕೊಟ್ಟು ಹಂತಹಂತವಾಗಿ ಪರಿಹರಿಸಲಾಗುವುದು ಎಂದು ಪಶು ಸಂಗೋಪನೆ ಹಾಗೂ ರೇಷ್ಮೆ ಸಚಿವ ಕೆ. ವೆಂಕಟೇಶ್ ಭರವಸೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು, ರೇಷ್ಮೆ ಬೆಳೆಗಾರರು ಹಾಗೂ ರೀಲರ್ಸ್‌ಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಮೊದಲ ಬಾರಿಗೆ ಸಚಿವರಾದಾಗ ರೇಷ್ಮೆ ಖಾತೆಯನ್ನು ನಿಭಾಯಿಸಿದ್ದರು. ಅವರಿಗೆ ಈ ಕ್ಷೇತ್ರದ ಸಮಸ್ಯೆಗಳ ಅರಿವಿದ್ದು, ಬೆಳೆಗಾರರಿಗೆ ಸ್ಪಂದಿಸಲಿದ್ದಾರೆ' ಎಂದರು. ಇಲಾಖೆಯು ಆರ್ಥಿಕ ತೊಂದರೆಯಲ್ಲಿದೆ. ಅಧಿಕಾರಿಗಳು, ಸಿಬ್ಬಂದಿ ಕೊರತೆ ಸೇರಿದಂತೆ ಇಲಾಖೆಯಲ್ಲೂ ನ್ಯೂನತೆಗಳಿವೆ.

**ಅಧಿಕಾರಿಗಳು ಸಿಬ್ಬಂದಿ ಕೊರತೆ**

ಸರ್ಕಾರ ರೇಷ್ಮೆ ಬೆಳೆಗಾರರಿಗೆ ಒದಗಿಸಿರುವ ಸವಲತ್ತುಗಳನ್ನು ಅಧಿಕಾರಿಗಳು ನಿಗದಿತ ಅವಧಿಯೊಳಗೆ ತಲುಪಿಸಬೇಕು. ಕ್ಷೇತ್ರ ಭೇಟಿ ಸಂದರ್ಭದಲ್ಲಿ ಬೆಳೆಗಾರರ ಸಮಸ್ಯೆಗಳನ್ನು ಅರಿತುಕೊಳ್ಳಬೇಕು' ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ನೂತನ ರೇಷ್ಮೆ ಮಾರುಕಟ್ಟೆಯನ್ನು ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ನಿರ್ಮಿಸಲಾಗುತ್ತಿದೆ. ಆದರೂ, ಹಳೆ ಮಾರುಕಟ್ಟೆಯಲ್ಲಿ ವಹಿವಾಟು ಮುಂದುವರಿಸಲಾಗುವುದು. ವಿವಿಧ ಜಿಲ್ಲೆಗಳಲ್ಲಿ ಇಲಾಖೆಗೆ ಸೇರಿದ ಸಾಕಷ್ಟು ಜಮೀನಿದೆ. ಬೆಳೆಗಾರರು ಹಾಗೂ ರೀಲರ್ಸ್‌ಗಳ ಹಿತದೃಷ್ಟಿಯಿಂದ ವಿವಿಧ ರೀತಿ ಯ ಚಟುವಟಿಕೆಗಳನ್ನು ಅಲ್ಲಿ ಕೈಗೊಳ್ಳಲಾಗುವುದು' ಎಂದರು.

ಈಗಾಗಲೇ ಹನಿ ನೀರಾವರಿ ಯೋಜನೆ ಸೌಲಭ್ಯ ಪಡೆದವರಿಗೆ ಮತ್ತೆ ಸೌಲಭ್ಯ ಪಡೆಯಲು ಇಲಾಖೆಯಲ್ಲಿ ಅವಕಾಶವಿಲ್ಲ. ಮತ್ತೆ ಕೊಡಬೇಕೆಂಬ ಒತ್ತಡವಿದ್ದು, ಈ ಕುರಿತು ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು' ಎಂದು ಭರವಸೆ ನೀಡಿದರು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ


ಉದಯವಾಹಿನಿ, ಚಿತ್ರ

ಅಧ್ಯಕ್ಷ ಕೆ. ರಾಜು, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ. ಚೇತನ್‌ಕುಮಾರ್, ರೇಷ್ಮೆ ಮತ್ತು ತೋಟಗಾರಿಕೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ. ಶರ್ಮಾ ಇಕ್ಬಾಲ್, ಜಿಲ್ಲಾ ಪಂಚಾಯಿತಿ ಸಿಇಒ ದಿಗ್ವಿಜಯ್ ಬೋಡ್ಕೆ, ಉಪ ವಿಭಾಗಾಧಿಕಾರಿ ಬಿನೋಯ್, ರೇಷ್ಮೆ ಇಲಾಖೆ ಉಪ ನಿರ್ದೇಶಕ ಬಸವರಾಜ, ರೇಷ್ಮೆಗೂಡು ಮಾರುಕಟ್ಟೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ, ರೇಷ್ಮೆ ಬೆಳೆಗಾರರ ಹಿತರಕ್ಷಣಾ ಸಮಿತಿಯ ರವಿ, ಚಾಕಿ ಸಾಕಾಣಿಕೆ ಕೇಂದ್ರಗಳ ಮಾಲೀಕರು ಹಾಗೂ ಬೆಳೆಗಾರರು ಇದ್ದರು.

ರಾಮನಗರದ ಜಿಲ್ಲಾ ಪಂಚಾಯಿತಿ ಕಚೇರಿಯ ಸಭಾಂಗಣದಲ್ಲಿ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ. ವೆಂಕಟೇಶ್ ಅವರು ಹಮ್ಮಿಕೊಂಡಿದ್ದ ಸಭೆಯಲ್ಲಿ ರೈತರು ಅಧಿಕಾರಿಗಳು ಹಾಗೂ ರೀಲರ್ಸ್ ಗಳು ಭಾಗವಹಿಸಿದ್ದರು.

> ರಾಮನಗರ ತಾಲ್ಲೂಕಿನ ಕೆ.ಪಿ. ದೊಡ್ಡಿಯಲ್ಲಿ ರೀಲರ್ಸ್ ಪಾರ್ಕ್‌ಗಾಗಿ 37 ಎಕರೆ ಸರ್ಕಾರಿ ಜಮೀನು ಗುರುತಿಸಲಾಗಿದೆ. ಆ ಕುರಿತು ಈಗಾಗಲೇ ಸಲ್ಲಿಸಿರುವ ಪ್ರಸ್ತಾವಕ್ಕೆ ಅನುಮೋದನೆ ನೀಡಬೇಕು. 3 ತಿಂಗಳಿಗೊಮ್ಮೆ ಸಭೆ ನಡೆಸಿ ರೇಷ್ಮೆಗೆ ಖ್ಯಾತಿಯಾಗಿರುವ ರಾಮನಗರದಲ್ಲಿ 3 ತಿಂಗಳಿಗೊಮ್ಮೆ ಬೆಳೆಗಾರರು ಹಾಗೂ ರೀಲರ್ಸ್‌ಗಳೊಂದಿಗೆ ಸಭೆ ನಡೆಸಿ ಸಮಸ್ಯೆ ಆಲಿಸಬೇಕು. ನಗರದಲ್ಲಿರುವ ರೇಷ್ಮೆಗೂಡು ಮಾರುಕಟ್ಟೆಯಲ್ಲಿ ಶೌಚಾಲಯ ಕ್ಯಾಂಟೀನ್ ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯ ಒದಗಿಸಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿ ಕೊರತೆ ನೀಗಿಸಬೇಕು ಎಂದು ಸಚಿವರಿಗೆ ಮನವಿ ಮಾಡಿದ ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಇಲಾಖೆಯ ವಿಜ್ಞಾನಿಗಳು ಹೋಬಳಿ ಅಥವಾ ಪಂಚಾಯಿತಿ ಮಟ್ಟದಲ್ಲಿ ಶಿಬಿರ ಆಯೋಜಿಸಿ ರೇಷ್ಮೆ ಕೃಷಿಯಲ್ಲಾಗುತ್ತಿರುವ ಬದಲಾವಣೆ ಕುರಿತು ರೈತರಿಗೆ ತಿಳಿವಳಿಕೆ ನೀಡಬೇಕು **-ಎಚ್.ಎ. ಇಕ್ಬಾಲ್ ಹುಸೇನ್**, ಶಾಸಕ

**ರೈತರ ಒತ್ತಾಯಗಳು**

- ಸರ್ಕಾರ ರೇಷ್ಮೆ ಬೆಳೆಗಾರರನ್ನು ರಕ್ಷಿಸಿ ದಲ್ಲಾಳಿಗಳಿಗೆ ಕಡಿವಾಣ ಹಾಕಬೇಕು.
- ಬೆಳೆಗಾರರಿಗೆ ಇಲಾಖೆ ವತಿಯಿಂದಲೇ ಸಬ್ಸಿಡಿ ದರಲ್ಲಿ ಮಿನಿ ಟ್ರ್ಯಾಕ್ಟರ್ ಒದಗಿಸಬೇಕು.
- ಬಿತ್ತನೆ ವಲಯವನ್ನು ಸಮರ್ಥವಾಗಿ ನಿರ್ವಹಿಸದ ಅಧಿಕಾರಿಗಳನ್ನು ವರ್ಗಾವಣೆ ಮಾಡಬೇಕು.
- ಸರ್ಕಾರಿ ಶೈತ್ಯಾಗಾರದಲ್ಲಿ ಖಾಸಗಿಯವರು ಮೊಟ್ಟೆ ಇರಿಸಲು ಉಚಿತವಾಗಿ ಅಥವಾ ದರ ನಿಗದಿಪಡಿಸಿ ಅವಕಾಶ ಕಲ್ಪಿಸಬೇಕು.
- ಜಿಲ್ಲೆಯಲ್ಲಿ ಪಶು ವೈದ್ಯರ ಕೊರತೆ ನೀಗಿಸಿ. ಪಶುಗಳ ಚಿಕಿತ್ಸೆಗೆ ಸಂಚಾರ ವಾಹನಗಳನ್ನು ಒದಗಿಸಿ.

---

## ಭೂಗಳ್ಳರ ಪಾಲಾಗುತ್ತಿರುವ ಸರ್ಕಾರಿ ಆಸ್ತಿ ಉಳಿಸಲು ವಿಶೇಷ ತಂಡ ರಚಿಸಿ

• ಉದಯವಾಹಿನಿ ಬೇತಮಂಗಲ

ರಾಜ್ಯದ ಗಡಿಯಲ್ಲಿ ಆಂಧ್ರ ರಿಯಲ್ ಎಸ್ಟೇಟ್ ಭೂಗಳ್ಳರ ಪಾಲಾಗುತ್ತಿರುವ ಸರ್ಕಾರಿ ಆಸ್ತಿಗಳನ್ನು ಉಳಿಸಲು ವಿಶೇಷ ತಂಡ ರಚನೆ ಮಾಡಿ ಅಕ್ರಮ ದಾಖಲೆಗಳನ್ನು ಸೃಷ್ಟಿಸಿರುವ ಕಂದಾಯ ಸರ್ವೇ ಅಧಿಕಾರಿಗಳ ವಿರುದ್ದ ಕಾನೂನು ಕ್ರಮ ಕೈಗೊಳ್ಳಬೇಕೆಂದು ರೈತ ಸಂಘದ ರಾಜ್ಯ ಉಪಾದ್ಯಕ್ಷ ಕೆ.ನಾರಾಯಣಗೌಡ ಪ್ರಶ್ನಿಸಿದರು.

ರೈತ ಸಂಘದಿಂದ ಶಿರಸ್ತೆದಾರ್ ಮಂಜುನಾಥ್ ರವರಿಗೆ ಮನವಿ ನೀಡಿ ಮಾತನಾಡಿದ ಅವರು ಗ್ರಾಮೀಣ ಪ್ರದೇಶದ ಕುರಿಗಾಯಿಗಳಿಗೆ ತಾಲ್ಲೂಕಿನ ಸರ್ಕಾರಿ ಕಟ್ಟಡಗಳಿಗೆ ಭೂ ಮಂಜೂರು ಮಾಡಲು ವರ್ಷಾನುಘಟ್ಟಲೇ ಹುಡುಕಾಡಿದರೂ ಕನಿಷ್ಠ ಒಂದು ಗುಂಟೆ ಜಮೀನು ಗುರುತಿಸಲು ಕಂದಾಯ ಸರ್ವೇ ಅಧಿಕಾರಿಗಳು ಪರದಾಡುತ್ತಾರೆ ಎಂದರು.

ಆದರೆ ರಾತ್ರೋ ರಾತ್ರಿ ಸ್ಥಳಿಯರ ಹೆಸರಿನಲ್ಲಿ ಆಕ್ರಮ ದರಕಾಸ್ತ್ ಕಮಿಟಿ ಕಡತ ಸೃಷ್ಠಿ ಮಾಡಿ ನೂರಾರು ಎಕರೆ ಸರ್ಕಾರಿ ಗೋಮಾಳ ಜಮೀನನ್ನು ಆಂಧ್ರ ಮೂಲದ ಭೂಗಳ್ಳರಿಗೆ ಸಾಗುವಳಿ ನೀಡುತ್ತಿರುವ ದಂದೆಯಲ್ಲಿ ತಾಲ್ಲೂಕು ದಂಡಾದಿಕಾರಿಗಳು ಗಂಭೀರವಾಗಿ


ಉದಯವಾಹಿನಿ, ಚಿತ್ರ

ಪರಿಗಣಿಸುತ್ತಿಲ್ಲ ಏಕೆ ಎಂದು ಪ್ರಶ್ನೆ ಮಾಡಿದರು.

ಸ್ಥಳಿಯ ಶಾಸಕರಾದ ರೂಪಕಲಾ ಅವರು ರೈತರ ಹಿತ ದೃಷ್ಠಿಯಿಂದ ನೂರು ಎಕರೆ ಟೊಮೋಟೊ ಮಾರುಕಟ್ಟೆಗೆ 100 ಎಕರೆ ಪೋಲಿಸ್ ತರಬೇತಿಗೆ ನೀಡಿರುವುದು ಸ್ವಾಗತಾರ್ಹ ಅದರಂತೆ ಮಾರುಕಟ್ಟೆ ಸುತ್ತಮುತ್ತಲಿರುವ ಸರ್ಕಾರಿ ಆಸ್ತಿಗಳನ್ನು ಉಳಿಸುವಂತೆ ಅಧಿಕಾರಿಗಳಿಗೆ ಸೂಚಿಸುವಂತೆ ಒತ್ತಾಯಿಸಿದರು.

ಒಂದು ಕಡೆ ಒತ್ತುವರಿ ಮತ್ತೊಂದು ಕಡೆ ಮಾಯವಾಗಿರುವ ರಾಜಕಾಲುವೆಗಳಿಂದ ಮುಂಗಾರು ಮಳೆ ನೀರು ಹರಿಯಲು ಕಾಲುವೆಗಳಿಲ್ಲದೆ ಲಕ್ಷಾಂತರ ಬಂಡವಾಳ ಹಾಕಿ ಬೆಳೆದಂತಹ ರೈತರ ಬೆಳೆಗೆ ನುಗ್ಗಿ ನಷ್ಟವಾಗುತ್ತಿದ್ದರೂ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿ ಕಷ್ಟಪಟ್ಟು ಬೆವರು ಸುರಿಸಿ ಬಿಸಿಲಿನಲ್ಲಿ ದುಡಿದರೆ ರೈತರ ಕಷ್ಟ

> ತಾಲ್ಲೂಕಿನಾದ್ಯಂತ ಸರ್ಕಾರಿ ಕೆರೆ, ರಾಜಕಾಲುವೆಗಳು ಬೆಂಗಳೂರು ಆಂಧ್ರ ಮೂಲದ ಭೂಗಳ್ಳರು ಎರಡು ಎಕರೆ ಕೃಷಿ ಜಮೀನನ್ನು ಖರೀದಿ ಮಾಡಿ 10 ಎಕರೆ ಕೆರೆ ಜಮೀನನ್ನು ಒತ್ತುವರಿ ಮಾಡಿಕೊಂಡು ಕಾಂಪೌಂಡ್ ನಿರ್ಮಿಸಿದ್ದರೂ ಆಯಾ ವ್ಯಾಪ್ತಿಯ ಕಂದಾಯ ಅಧಿಕಾರಿಗಳು ಮೌನವಾಗಿರುವುದು ಏಕೆ ಎಂದು ಪ್ರಶ್ನೆ ಮಾಡಿದರು
> **-ರಾಮಸಾಗರ ವೇಣು**, ತಾಲ್ಲೂಕಾದ್ಯಕ್ಷ

ಗೊತ್ತಾಗುತ್ತಿತ್ತು ಎಂದು ಮನವಿ ನೀಡಿ ಒತ್ತಾಯಿಸಿದರು,

ಮನವಿ ಸ್ವೀಕರಿಸಿ ಮಾತನಾಡಿದ ಶಿರಸ್ತೆದಾರ್ ಮಂಜುನಾಥ್‌ರವರು ತಹಶೀಲ್ದಾರ್‌ರವರ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸುವ ಭರವಸೆಯನ್ನು ನೀಡಿದರು.

ರಾಜ್ಯ ಮುಖಂಡ ಮರಗಲ್ ಶ್ರೀನಿವಾಸ್, ಬಂಗವಾದಿ ನಾಗರಾಜ್‌ಗೌಡ, ಈಕಂಬಳ್ಳಿ ಮಂಜುನಾಥ್, ಪಾರಾಂಡಹಳ್ಳಿ ಮಂಜುನಾಥ್, ಬಾಬು, ಮೂರಾಂಡಹಳ್ಳಿ ಶಿವಾರೆಡ್ಡಿ ಸುರೇಶ್ ಬಾಬು, ಲಕ್ಷಣ್, ಪುತ್ತೇರಿ ರಾಜು ,ಗಿರೀಶ್, ಮಂಗಸಂದ್ರ ತಿಮ್ಮಣ್ಣ ಮುಂತಾದವರಿದ್ದರು.

---

## ಅಕ್ರಮ ಕಲ್ಲು ಗಣಿಗಾರಿಕೆ: ಆರೋಪ

• ಉದಯವಾಹಿನಿ ಕೆಜಿಎಫ್

ತಾಲ್ಲೂಕಿನ ಗ್ರಾಮೀಣ ಭಾಗದಲ್ಲಿ ಗುಪ್ತವಾಗಿ ನಡೆಯುತ್ತಿದ್ದ ಅಕ್ರಮ ಕಲ್ಲು ಗಣಿಗಾರಿಕೆ ಈಗ ಕೋಟಿಲಿಂಗೇಶ್ವರ ದೇವಸ್ಥಾನವಿರುವ ಕಮ್ಮಸಂದ್ರದ ಸುತ್ತ ಮುತ್ತಲಿನ ಪ್ರದೇಶಕ್ಕೂ ವಿಸ್ತರಿಸಿದೆ. ಕಮ್ಮ ಸಂದ್ರದ ಪರಿಶಿಷ್ಟ ಜಾತಿ ಸಮುದಾಯದವರೇ ಹೆಚ್ಚಾಗಿ ವಾಸಿಸುವ ಕಾಲೊನಿ ಅಕ್ಕಪಕ್ಕದಲ್ಲೇ ಕಲ್ಲು ಗಣಿಗಾರಿಕೆ ಎಗ್ಗಿಲ್ಲದೆ ನಡೆಯುತ್ತಿದೆ.

ಬಂಡೆ ಸಿಡಿಸುವ ಪ್ರಕ್ರಿಯೆಗೆ ಜನ ಬೆಚ್ಚಿಬಿದ್ದಿದ್ದಾರೆ. ಪ್ರಭಾವಿಗಳು ಗಣಿಗಾರಿಕೆ ನಡೆಸುತ್ತಿರುವ ಕಾರಣಕ್ಕೆ ದೂರು ನೀಡಲು ಗ್ರಾಮಸ್ಥರು ಹಿಂದೇಟು ಹಾಕುತ್ತಿದ್ದಾರೆ ಎನ್ನಲಾಗಿದೆ. ಕಮ್ಮ ಸಂದ್ರದಲ್ಲಿರುವ ಗೋಮಾಳ ಜಮೀನಿನಲ್ಲಿ ಬಿಳಿ ಕಲ್ಲುಗಳು ಹೇರಳವಾಗಿದೆ. ಈ ಬಿಳಿ ಕಲ್ಲುಗಳನ್ನು ಸಿಡಿಸಿ, ದೊಡ್ಡ ಗಾತ್ರದ ಬ್ಲಾಕ್‌ಗಳನ್ನಾಗಿ ಮಾಡಲಾಗುತ್ತಿದೆ. ಈ ಅಕ್ರಮಗಳು ಗ್ರಾಮದ ಹೊರಭಾಗದಲ್ಲಿ ನಡೆಯುತ್ತಿದ್ದ ಕಾರಣ ಜನರು ಸುಮ್ಮನಿದ್ದರು. ಆದರೆ, ಈಗ ಗ್ರಾಮದ ಮಧ್ಯೆಯೇ ಸ್ಫೋಟಿಸುವ ಪರಿಸ್ಥಿತಿ


ಉದಯವಾಹಿನಿ, ಚಿತ್ರ

ಬಂದಿರುವುದರಿಂದ ಮನೆಗಳ ಗೋಡೆ ಬಿರುಕು ಬಿಡುತ್ತಿವೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಕಮ್ಮಸಂದ್ರ ಗ್ರಾಮ ಪಂಚಾಯಿತಿ ಕಚೇರಿ ಕೂಗಳತೆಯಲ್ಲೇ ಇಂತಹ ಅಕ್ರಮಗಳು ನಡೆಯುತ್ತಿದ್ದರೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ಕಂಡು ಕಾಣದಂತಿದ್ದಾರೆ ಎಂಬ ಆರೋಪವಿದೆ. ಇದು ಕಂದಾಯ ಇಲಾಖೆ ಮತ್ತು ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಸಂಬಂಧಿಸಿದ ವಿಷಯ ಎಂದು ಉಪೇಕ್ಷೆ ಮಾಡುತ್ತಿದ್ದಾರೆ ಎನ್ನಲಾಗಿದೆ.

ಹಾಡುಹಗಲೇ ಕಲ್ಲು ಬಂಡೆ ಸ್ಫೋಟಿಸುವ ಕೆಲಸ ನಡೆಯುತ್ತಿತ್ತು. ಕಂದಾಯ ಇಲ್ಲವೇ ಪಂಚಾಯಿತಿ ಅಧಿಕಾರಿಗಳು ಕ್ರಮ ಕೈಗೊಳ್ಳಲೇ ಇಲ್ಲ. ಈ ಸಂಬಂಧ ಮಾಹಿತಿ ಪಡೆದು ಸ್ಥಳಕ್ಕೆ ಭೇಟಿ ನೀಡಿದ ಬೆಮಲ್ ಪೊಲೀಸರು ಅಕ್ರಮ ಗಣಿಗಾರಿಕೆಗೆ ತಡೆಯೊಡ್ಡಿದರು ಎಂದು ಕಾಲೊನಿಯ ನಿವಾಸಿಗಳು ಹೇಳುತ್ತಾರೆ.

---

## ಪಟ್ಟಣದಲ್ಲಿ ಹೆಚ್ಚಿದ ಬೀದಿ ನಾಯಿ ಕಾಟ

• ಉದಯವಾಹಿನಿ, ಶ್ರೀನಿವಾಸಪುರ

ಪಟ್ಟಣದಲ್ಲಿ ಬೀದಿ ನಾಯಿಗಳ ಕಾಟ ಜೋರಾಗಿದ್ದು, ಕೆಲ ಬಡಾವಣೆಗಳಲ್ಲಿ ನಡೆದಾಡುವುದೇ ದುಸ್ತರವಾಗಿ ಪರಿಣಮಿಸಿದ್ದು ನಾಗರಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಹುತೇಕ ರಸ್ತೆಗಳಲ್ಲಿ ಬೀದಿ ನಾಯಿಗಳು ಹೆಚ್ಚಿವೆ. ಹೆಜ್ಜೆ ಹೆಜ್ಜೆಗೂ ಗುರ್ ಎನ್ನುವ ಶ್ವಾನಗಳು ಸಾರ್ವಜನಿಕರಲ್ಲಿ ಭೀತಿ ಸೃಷ್ಟಿಸಿವೆ. ಪಾದಚಾರಿಗಳು ಮತ್ತು ದ್ವಿ ಚಕ್ರ ವಾಹನಗಳ ಸವಾರರಿಗೆ ಸಂಚಾಕಾರ ತೊಂದೊಡ್ಡಿದ್ದು, ಜನ ರೋಸಿ ಹೋಗಿದ್ದಾರೆ.

ಬಡಾವಣೆಗಳಲ್ಲಿ ತಿಂಡಿ, ತಿನಿಸುಗಳನ್ನು ಹಿಡಿದು ಸಾಗುವ ಪುಟ್ಟ ಮಕ್ಕಳ ಮೈಮೇಲೆ ಬೀದಿ ನಾಯಿಗಳು ದಾಳಿ ಇಡುತ್ತಿದ್ದು, ಈ ಸಂಬಂಧ ಪುರಸಭೆ ಅಧಿಕಾರಿಗಳು, ಸಿಬ್ಬಂದಿ ಕ್ರಮ ವಹಿಸ ಬೇಕೆಂದು ನಾಗರಿಕರು ಆಗ್ರಹಿಸಿದ್ದಾರೆ.

ಪಟ್ಟಣದ ರಾಜಾಜಿ ರಸ್ತೆ , ಆಜಾದ್ ರಸ್ತೆ , ಹೈದರಾಲಿ ಮೊಹಲ್ಲಾ, ಗಫರ್ ಖಾನ್ ಮೊಹಲ್ಲಾ, ಜಾಕಿರ್ ಹುಸೇನ್ ಮೊಹಲ್ಲಾ ಸೇರಿದಂತೆ ಹಲವು ಬಡಾವಣೆಗಳಲ್ಲಿ ಬೀದಿಗಳ ನಾಯಿಗಳ ಹಾವಳಿ ಹೆಚ್ಚಾಗಿದೆ. ನಾಯಿಗಳ ಕಾಟ ತಪ್ಪಿಸುವಲ್ಲಿ ಸ್ಥಳೀಯ ಪುರಸಭೆ ಅಧಿಕಾರಿಗಳು ಮತ್ತು ಪುರಸಭೆ ಸದಸ್ಯರು


ಉದಯವಾಹಿನಿ, ಚಿತ್ರ

ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ಸ್ಥಳೀಯರು ಕಿಡಿಕಾರುತ್ತಿದ್ದಾರೆ.

ಬೀದಿ ನಾಯಿಗಳ ಕಾಟದಿಂದ ಆರೋಗ್ಯ ಸಮಸ್ಯೆಗಳೂ ಉಂಟಾಗುತ್ತಿವೆ. ಮಾಂಸದ ಅಂಗಡಿಗಳ ತ್ಯಾಜ್ಯಕ್ಕಾಗಿ ದಿನವಿಡೀ ಬೀದಿ ನಾಯಿಗಳು ಅಲೆದಾಡುತ್ತಿರುತ್ತವೆ. ರಾತ್ರಿಯಲ್ಲೂ ಇದೇ ಮಾಂಸದಂಗಡಿಗಳ ಮುಂದೆ ಇರುವ ನಾಯಿಗಳು ದ್ವಿಚಕ್ರ ವಾಹನ ಸವಾರರ ಮೇಲೆರಗುತ್ತಿವೆ. ಬೆಳಿಗ್ಗೆ ವ್ಯಾಯಾಮಕ್ಕೆ ಹೋಗುವ ಮಹಿಳೆಯರು, ವೃದ್ಧರು, ಶಾಲೆಗಳು ತೆರಳುವ ಮಕ್ಕಳಗಳ ಮೇಲೆ ನಾಯಿಗಳ ಗುಂಪಾಗಿ ದಾಳಿ ಮಾಡುತ್ತಿವೆ.

ಜಾಕಿರ್ ಹುಸೇನ್ ಮೊಹಲ್ಲಾ ಹಾಗೂ ಕೆಲ ಬಡಾವಣೆಗಳಲ್ಲಿ ನಾಯಿಗಳ ದಾಳಿಗೆ ಕುರಿ, ಮೇಕೆ ಮತ್ತು ಕೋಳಿಗಳು ಸಹ ಬಲಿಯಾಗಿವೆ. ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕೆಂದು ಪ್ರಜ್ಞಾವಂತ ನಾಗರಿಕರು ಆಗ್ರಹಿಸಿದ್ದಾರೆ.

---

## ರಾಧಾಕೃಷ್ಣನ್ ಅವರ ಜನ್ಮದಿನದ ಗೌರವಾರ್ಥ ಶಿಕ್ಷಕರ ದಿನಾಚರಣೆ ಆಚರಣೆ

• ಉದಯವಾಹಿನಿ, ಬಂಗಾರಪೇಟೆ

ಶಿಕ್ಷಕರು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ,ಕೌಶಲ್ಯಗಳನ್ನು ವೃದ್ಧಿಸುವುದರ ಜೊತೆಗೆ ಸಾಮಾಜಿಕ, ಮಾನವೀಯ, ಹಾಗೂ ನೈತಿಕ ಮೌಲ್ಯಗಳನ್ನು ವರ್ದಿಸುವುದರ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸುವಲ್ಲಿ ಅವರ ಕೊಡುಗೆ ಅನನ್ಯವಾದದ್ದು ಎಂದು ಕೆ,ಯು,ಡಿ,ಐ,ಎಫ್,ಸಿ ಅಧ್ಯಕ್ಷ ಹಾಗೂ ಶಾಸಕ ಎಸ್ ಎನ್ ನಾರಾಯಣ ಸ್ವಾಮಿ ಅಭಿಪ್ರಾಯಪಟ್ಟರು.

ಪಟ್ಟಣದ ಹೊರವಲಯದ ಎಸ್ ಎನ್ ರೆಸಾರ್ಟ್ ನಲ್ಲಿ ರಾಷ್ಟ್ರಿಯ ಹಬ್ಬಗಳ ಆಚರಣಾ ಸಮಿತಿ ನೇತೃತ್ವದಲ್ಲಿ ಮಾಜಿ ರಾಷ್ಟ್ರಪತಿ ದಿವಂಗತ ರಾಧಕೃಷ್ಣನ್‌ರವರ ಜನ್ಮದಿನಾಚರಣೆ ಪ್ರಯುಕ್ತ ಆಚರಿಸಲಾಗುವ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು,

ಭಾರತದ ಶಿಕ್ಷಣ ವ್ಯವಸ್ಥೆಗೆ ಅರ್ಥಪೂರ್ಣವಾದ ಚೌಕಟ್ಟು ಕಟ್ಟಿಕೊಟ್ಟ ಶಿಕ್ಷಣ ತಜ್ಞ, ದೇಶ ಕಂಡ ಸರ್ವ ಶ್ರೇಷ್ಠ ಶಿಕ್ಷಕ, ಮಾಜಿ ರಾಷ್ಟ್ರಪತಿ, ಭಾರತರತ್ನ ದಿವಂಗತ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಗೌರವಾರ್ಥ ಶಿಕ್ಷಕರ ದಿನಾಚರಣೆ ಆಚರಣೆಮಾಡಲಾಗುತ್ತಿದೆ, ಪ್ರತಿ ವ್ಯಕ್ತಿಗೆ ತಮ್ಮ ಜೀವನದಲ್ಲಿ ತಂದೆ ತಾಯಿಯ ನಂತರದ ಸ್ಥಾನವನ್ನು ಗುರುವಿಗೆ ನೀಡುತ್ತಾರೆ.


ಉದಯವಾಹಿನಿ, ಚಿತ್ರ

ಶಿಕ್ಷಣ ಮೂಲಾರ್ಥವನ್ನು ತಿಳಿಸಿ ಪ್ರತಿ ವ್ಯಕ್ತಿಯ ಬದುಕನ್ನು ಬೆಳಗುವವರು ಶಿಕ್ಷಕರಾಗಿರುವುದರಿಂದ ಇಡೀ ಪ್ರಪಂಚವೇ ಇವರನ್ನು ಅಗ್ರಸ್ಥಾನದಲ್ಲಿಟ್ಟು ಪೂಜಿಸುತ್ತರೆ ಎಂದರು.

ಇದರೊಟ್ಟಿಗೆ ಸುಕನ್ಯಾ ಮೇಡಂ ರವರು ವೈಯುಕ್ತಿಕ ಬದುಕಿನಲ್ಲಿ ಅನೇಕ ಆರೋಗ್ಯ ಸಮಸ್ಯೆಗಳಿದ್ದರೂ ಶಿಕ್ಷಣ ಕ್ಷೇತ್ರದಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದ್ದಾರೆ, ಇವರ ವಯೋನಿವೃತಿಗೆ ಮೂರು ವರ್ಷಗಳ ಕಾಲಾವಕಾಶವಿದ್ದು ಅಷ್ಟರ ಒಳಗಾಗಿ ಬಂಗಾರಪೇಟೆ ತಾಲೂಕಿನಲ್ಲಿ ನೂತನ ಬಿಇಓ ಕಟ್ಟಡ ನಿರ್ಮಿಸಿ ಅವರ ಸಮ್ಮುಖದಲ್ಲಿ ಉದ್ಘಾಟನೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಪುರಸಭಾ ಅಧ್ಯಕ್ಷ ಗೋವಿಂದ, ತಹಶೀಲ್ದಾರ್ ವೆಂಕಟೇಶಪ್ಪ, ಇಓ ರವಿಕುಮಾರ್ , ಬಿಇಓ ಸುಕನ್ಯಾ, ಸಮಾಜ ಕಲ್ಯಾಣ ಅಧಿಕಾರಿ ಅಂಜಲಿದೇವಿ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಅಪ್ಪೇಗೌಡ,

**ಬಿಇಓ ವರ್ಗಾವಣೆಯಲ್ಲಿ ನನ್ನ ಕೈವಾಡವಿಲ್ಲ**

> ಶ್ರೀ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಎರಡು ವರ್ಷಗಳ ಕಾಲ ಸುಧೀರ್ಘವಾಗಿ ಸೇವೆ ಸಲ್ಲಿಸಿದ ಸುಕನ್ಯಾರವರ ವರ್ಗಾವಣೆಯಲ್ಲಿ ನನ್ನ ಪಾತ್ರವಿಲ್ಲ, ಅವರ ಸ್ವಗ್ರಾಮಕ್ಕೆ ಚಿಕ್ಕಬಳ್ಳಾಪುರ ಜಿಲ್ಲೆ ಸಮೀಪವಿದೆ ಎಂಬ ಕಾರಣಕ್ಕೆ ಅವರೇ ವರ್ಗಾವಣೆಯನ್ನು ಬಯಸಿದ್ದರು, ವಿಪರ್ಯಾಸ ವರ್ಗಾಯಾದರೂ ಸಹ ಸ್ಥಳ ನಿಯೋಜನೆ ಆಗಲಿಲ್ಲ, ಆದಕಾರಣ ನನ್ನದೇ ಜಿಲ್ಲೆಯ ಇತರೆ ತಾಲ್ಲೂಕುಗಳಲ್ಲಿ ಅಥವಾ ಡಯಟ್ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುವುದಾದರೆ ಅವರಿಗೆ ಸ್ಥಳ ನಿಯೋಜನೆ ಮಾಡಿಸುತ್ತೇನೆ.

ಉಪಾಧ್ಯಕ್ಷ ರವಿಕುಮಾರ್, ತಾಲ್ಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಅಂಜಿನಯ್ಯ ಗೌಡ, ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ ಅಧ್ಯಕ್ಷ ರಾಜಪ್ಪ, ಜಿಲ್ಲಾ ಉಪಾಧ್ಯಕ್ಷ ನಾರಾಯಣಸ್ವಾಮಿ, ಅಕ್ಷರ ದಾಸೋಹ ನಿರ್ದೇಶಕ ಯುವರಾಜ್ ಇದ್ದರು.

---

## ನಗರಸಭೆ ಚುನಾವಣೆ: ಇಬ್ಬರು ಸದಸ್ಯರು ಕಾಣುತ್ತಿಲ್ಲ, ಜೆಡಿಎಸ್ ಅಳಲು

• ಉದಯವಾಹಿನಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ನಗರಸಭೆ ಚುನಾವಣೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ಇಂದು ನಡೆಯಲಿದೆ. ಆದರೆ ಜೆಡಿಎಸ್ ಪಕ್ಷದಿಂದ ಗೆದ್ದ ಇಬ್ಬರು ಸದಸ್ಯರು ನಮ್ಮ ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ಜೆಡಿಎಸ್ ಜಿಲ್ಲಾ ಅಧ್ಯಕ್ಷ ಮುಕ್ತ ಮುನಿಯಪ್ಪ ತಮ್ಮ ಅಳಲು ತೋಡಿಕೊಂಡರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 'ಅವರು ಯಾವೋದೋ ಒತ್ತಡಕ್ಕೆ ಮಣಿದು ಎಲ್ಲಿ

ಇದ್ದಾರೆ ಎನ್ನುವುದು ಗೊತ್ತಾಗುತ್ತಿಲ್ಲ.


ಉದಯವಾಹಿನಿ, ಚಿತ್ರ

ಅವರು ಎಲ್ಲಿಯೆ ಇರಲಿ, ಬಿಜೆಪಿ, ಜೆಡಿಎಸ್ ಪಕ್ಷದ ಮೈತ್ರಿ ಅಭ್ಯರ್ಥಿಗಳಿಗೆ ನಗರಸಭಾ ಚುನಾವಣೆಯಲ್ಲಿ ಮತ ಹಾಕುತ್ತಾರೆಂಬ ವಿಶ್ವಾಸ ಇದೆ ಎಂದರು. ಜೆಡಿಎಸ್ ಪಕ್ಷದ ಸದಸ್ಯರಾದ ಆರ್.ಮಟಮಪ್ಪ ಹಾಗೂ ವೀಣಾ ರಾಮು ಅವರು ಸಾಕಷ್ಟು ಬಾರಿ ಕಾಂಗ್ರೆಸ್ ವಿರುದ್ದ ಮಾತನಾಡಿದ್ದಾರೆ. ಆದ್ದರಿಂದ ಈಗಲೇ ಎನ್‌ಡಿಎ ಅಭ್ಯರ್ಥಿಗಳ ಪರವಾಗಿ ಇಬ್ಬರು ಮತ ಚಲಾಯಿಸುವ ವಿಶ್ವಾಸ ಇದೆ. ಆದರೆ ಮೂರು ದಿನದಿಂದ ಅವರು ಸಂಪರ್ಕದಲ್ಲಿ ಇಲ್ಲ' ಎಂದರು.

ಈ ಸಂದರ್ಭದಲ್ಲಿ ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಕೊಳವನಹಳ್ಳಿ ಮುನಿರಾಜು, ಜಿಲ್ಲಾ ಕಾರ್ಯಾಧ್ಯಕ್ಷ ಕರ.ಆರ್.ರೆಡ್ಡಿ, ಮುಖಂಡರಾದ ಕಿಸಾನ್ ಕೃಷ್ಣಪ್ಪ, ದಿನೇಶ್, ನಾಗರಾಜ್, ಹನುಮಂತಪ್ಪ, ತಮ್ಮನಾಯಕನಹಳ್ಳಿ ವೆಂಕಟೇಶ, ಶಿಲ್ಪಗೌಡ ಸರಿದಂತೆ ಮತ್ತಿತರರು ಇದ್ದರು.

---

## ಸಿಎಂ ರೇಸ್ ಲಿಸ್ಟ್‌ಗೆ ಜಿ. ಪರಮೇಶ್ವರ್: ಸುಮ್ನಿರಪ್ಪಾ ಎಂದ ಸಚಿವರು

• ಉದಯವಾಹಿನಿ, ತುಮಕೂರು

ಕಾಂಗ್ರೆಸ್‌ನಲ್ಲಿ ಸಿಎಂ ಸಿದ್ದರಾಮಯ್ಯ ಬಳಿಕ ಮುಖ್ಯಮಂತ್ರಿ ಯಾಗಲು ಹಿರಿಯ ನಾಯಕರು ಸಾಲಾಗಿ ನಿಂತಿದ್ದಾರೆ. ಸಿಎಂ ಸ್ಥಾನಕ್ಕೆ ಒಬ್ಬೊಬ್ಬರೇ ಆಕಾಂಕ್ಷಿಗಳ ಹೆಸರು ಕೇಳಿಬರುತ್ತಿದೆ.ಈ ಲಿಸ್ಟ್ ಗೆ ಈಗ ಜಿ ಪರಮೇಶ್ವರ್ ಹೆಸರೂ ಸೇರ್ಪಡೆಯಾಗಿದೆ.


ಉದಯವಾಹಿನಿ, ಚಿತ್ರ

ತಮ್ಮ ತವರು ಕ್ಷೇತ್ರ ತುಮಕೂರಿಗೆ ಬಂದಿದ್ದಾಗ ಗೃಹ ಸಚಿವ ಜಿ ಪರಮೇಶ್ವರ್ ಅಭಿಮಾನಿಗಳು ಜೈಕಾರ ಕೂಗುವಾಗ ಅವರ ಹೆಸರಿನ ಜೊತೆ ಮುಂದಿನ ಮುಖ್ಯಮಂತ್ರಿಗೆ ಜೈ ಎಂದಿದ್ದಾರೆ. ಆ ಮೂಲಕ ತಮ್ಮ ನಾಯಕ ಮುಖ್ಯಮಂತ್ರಿಯಾಗಬೇಕು ಎಂದು ಅವರ ಅಭಿಮಾನಿಗಳು ಆಗ್ರಹಿಸಿದ್ದಾರೆ.

ಆದರೆ ತಮ್ಮ ಅಭಿಮಾನಿಗಳ ಗುಂಪು ಮುಂದಿನ ಮುಖ್ಯಮಂತ್ರಿಗೆ ಜೈ ಎಂದಾಗ ಸಿಡಿಮಿಡಿಗೊಂಡ ಜಿ ಪರಮೇಶ್ವರ್ ಸುಮ್ನಿರಪ್ಪಾ ಎಂದು ಸುಮ್ಮನಾಗಿಸಿದರು. ಅಲ್ಲೇ ಇದ್ದ ಮಾಧ್ಯಮದವರು ಹೆಚ್ಚಿನ ಪ್ರಶ್ನೆ ಕೇಳಬಹುದು ಎಂದೇನೋ ಪರಮೇಶ್ವರ್ ಕಾರು ಹತ್ತಿ ಹೊರಟೇ ಬಿಟ್ಟರು.

ಅದೇನೇ ಇರಲಿ, ಕಾಂಗ್ರೆಸ್‌ನಲ್ಲಿ ಈಗ ಸಿಎಂ ಆಕಾಂಕ್ಷಿಗಳ ಪಟ್ಟಿ ಬೆಳೆಯುತ್ತಿದ್ದು, ಹೈಕಮಾಂಡ್ ಮಾತಿಗೂ ಜಗ್ಗದೇ ಬಹಿರಂಗವಾಗಿಯೇ ಹೇಳಿಕೆ ನೀಡುತ್ತಿದ್ದಾರೆ. ಹೀಗಾಗಿ ಈಗ ಎಐಸಿಸಿ ನಾಯಕ ರಾಹುಲ್ ಗಾಂಧಿಗೆ ರಾಜ್ಯ ನಾಯಕರ ವರ್ತನೆ ಬಗ್ಗೆ ದೂರು ನೀಡಲಾಗಿದೆ.

---

# ಕಾವೇರಿ ನದಿ ನೀರಿನ ಗುಣಮಟ್ಟ ಕುಸಿತ: ತಾಂತ್ರಿಕ ತಜ್ಞರ ಸಮಿತಿ ಹೇಳಿದ್ದೇನು?

## ಕಾವೇರಿ, ಕಪಿಲಾ ಹಾಗೂ ಲಕ್ಷ್ಮಣ ತೀರ್ಥ ನದಿ ಕಲುಷಿತಗೊಂಡಿರುವ ಬಗ್ಗೆ ತಾಂತ್ರಿಕ ತಜ್ಞರ ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಕೆ

• ಉದಯವಾಹಿನಿ ಮೈಸೂರು

ರಾಜ್ಯದ ಕೆಲವು ನಗರಗಳ ಗಾಳಿಯ ಗುಣಮಟ್ಟ ಕುಸಿದಿದೆ ಎನ್ನುವ ಅಘಾತಕಾರಿ ವಿಚಾರ ಹೊರ ಬಂದ ಬೆನ್ನಲ್ಲೇ ಕಾವೇರಿ ಕಣಿವೆಯ ನದಿಗಳು ಕೂಡ ಕಲುಷಿತವಾಗುತ್ತಿರುವ ವಿಚಾರ ಜನರಲ್ಲಿ ಆತಂಕವನ್ನುಂಟು ಮಾಡಿದೆ. ಅದರಲ್ಲೂ ಕಾವೇರಿ, ಲಕ್ಷ್ಮಣತೀರ್ಥ ಮತ್ತು ಕಪಿಲ ನದಿಗಳು ಕಲುಷಿತವಾಗುತ್ತಿದ್ದು, ಈ ನದಿಗಳ ನೀರಿನ ಗುಣಮಟ್ಟ ದಿನದಿಂದ ದಿನಕ್ಕೆ ಕುಗ್ಗುತ್ತಿರುವುದು ಗೋಚರಿಸಿದೆ.

ಹಾಗೆನೋಡಿದರೆ ರಾಜ್ಯದಲ್ಲಿರುವ ಬಹುತೇಕ ನದಿಗಳು ಕಲುಷಿತವಾಗಿದ್ದು, ಸ್ವಾಭಾವಿಕವಾಗಿಯೇ ಅವುಗಳ ಗುಣಮಟ್ಟ ಕುಗ್ಗುತ್ತಾ ಹೋಗುತ್ತಿವೆ. ಆದರೆ ಹಳೆ ಮೈಸೂರು ಭಾಗದ ಜನರ ಜೀವನಾಡಿಯಾಗಿರುವ ಕಾವೇರಿ ಕಲುಷಿತಗೊಂಡು ಇದರ ಗುಣಮಟ್ಟ ಕುಸಿದಿದೆ ಎಂದರೆ ಭಯವಾಗುವುದು ಸಹಜವೇ... ಆದರೆ ಇದಕ್ಕೆ ಕಾರಣ ನಾವೇ ಆಗಿದ್ದೇವೆ ಎಂಬುದನ್ನು ಕೂಡ ಒಪ್ಪಿಕೊಳ್ಳಲೇ ಬೇಕಾಗಿದೆ.

ಇದೀಗ ಸಿಲಿಕಾನ್ ಸಿಟಿ ಬೆಂಗಳೂರು ಸೇರಿದಂತೆ


ಉದಯವಾಹಿನಿ, ಚಿತ್ರ

ಮೈಸೂರು ನಗರಕ್ಕೆ ಕುಡಿಯುವ ನೀರು ಒದಗಿಸುವ ಕಾವೇರಿ, ಕಪಿಲಾ ಹಾಗೂ ಲಕ್ಷ್ಮಣ ತೀರ್ಥ ನದಿ ಕಲುಷಿತಗೊಂಡಿರುವ ಬಗ್ಗೆ ತಾಂತ್ರಿಕ ತಜ್ಞರ ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಈ ವರದಿಯಲ್ಲಿ ಏನಿದೆ ಎಂಬುದನ್ನು ನೋಡುವ ಮುನ್ನ ಕರ್ನಾಟಕ ಸೇರಿದಂತೆ ದೇಶದ ಎಲ್ಲಾ ನದಿಗಳ ನೀರಿನ ಗುಣಮಟ್ಟದ ಬಗ್ಗೆ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ವೈಜ್ಞಾನಿಕ ಸಂಶೋಧನೆ ಮೂಲಕ ಸಮೀಕ್ಷೆ ನಡೆಸಿದ್ದು ಅದರ ಪ್ರಕಾರ ರಾಜ್ಯದ 17 ನದಿಗಳು ಸೇರಿದಂತೆ ದೇಶದ 311 ನದಿಗಳು ಕಲುಷಿತಗೊಂಡಿವೆಯಂತೆ. ಈ ಬಗ್ಗೆ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ

**ಕೂಡಲೇ ಕಡಿವಾಣ ಹಾಕಬೇಕು**

> ಈ ನಡುವೆ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಕೂಡ ಸರ್ಕಾರಕ್ಕೆ ಪತ್ರ ಬರೆದು ನಗರ ಪ್ರದೇಶದ ಕಲುಷಿತ ನೀರು ನೇರವಾಗಿ ಕಾವೇರಿ ನದಿ ನೀರು ಸೇರುತ್ತಿದ್ದು, ಇದಕ್ಕೆ ಕೂಡಲೇ ಕಡಿವಾಣ ಹಾಕಬೇಕೆಂದು ಸರ್ಕಾರಕ್ಕೆ ಮನವಿ ಮಾಡಿದ್ದರು. ಈ ಹಿನ್ನೆಲೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನದ ಮೇರೆಗೆ ಮಂಡಳಿಯ ಮೈಸೂರು ವಿಭಾಗ ತಾಂತ್ರಿಕ ತಜ್ಞರ ಸಮಿತಿಯೊಂದನ್ನು ರಚಿಸಿತ್ತು.

2022ರಲ್ಲಿ ವರದಿ ಪ್ರಕಟಿಸಿದೆ.

ಕೇಂದ್ರ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಕಾರ ಪ್ರತಿ ಲೀಟರ್ ಶುದ್ಧ ನೀರಿನಲ್ಲಿ 1ಎಂಜಿ ಬಯೋ ಕೆಮಿಕಲ್ ಆಕ್ಸಿಜನ್ ಡಿಮ್ಯಾಂಡ್ (ಬಿಒಡಿ) ಇರಬೇಕು. ಆದರೆ ಕಾವೇರಿ ನದಿ ನೀರಿನಲ್ಲಿ

> ಕಾವೇರಿ, ಕಪಿಲಾ, ಲಕ್ಷ್ಮಣ ತೀರ್ಥ ಸೇರಿದಂತೆ ಕರ್ನಾಟಕದ 17 ನದಿಗಳ ಕಲುಷಿತತೆ ಬಗ್ಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಹಸಿರು ನ್ಯಾಯ ಮಂಡಳಿಗೆ ಪ್ರಮಾಣ ಪತ್ರ ಕೂಡ ಸಲ್ಲಿಸಿತ್ತು. ಈ ಹಿನ್ನೆಲೆ ಕರ್ನಾಟಕದ ಕಾವೇರಿ, ಕಪಿಲಾ, ಲಕ್ಷ್ಮಣ ತೀರ್ಥ ಸೇರಿದಂತೆ 17 ನದಿಗಳ ಬಗ್ಗೆ ವೈಜ್ಞಾನಿಕ ಸಂಶೋಧನೆ ನಡೆಸಿ ವರದಿ ನೀಡುವಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ಸೂಚನೆ ನೀಡಿತ್ತು.

**ಬಹುತೇಕ ನದಿಗಳು ಕಲುಷಿತ**

6 ಬಿಒಡಿ ಪ್ರಮಾಣವಿದ್ದರೆ, ಕಪಿಲಾ ನೀರಿನಲ್ಲಿ 3.8 ಇದ್ದರೆ,ಲಕ್ಷ್ಮಣ ತೀರ್ಥದಲ್ಲಿ 5.6ರಷ್ಟು ಬಿಒಡಿ ಪ್ರಮಾಣವಿದೆಯಂತೆ.

ಇದಲ್ಲದೆ ಬೆಂಗಳೂರಿನ ನಂದಿ ಬೆಟ್ಟದಲ್ಲಿ ಹುಟ್ಟುವ ಪಿನಾಕಿನಿ ನದಿ ನೀರಿನಲ್ಲಿ 111, ಅಘನಾಶಿನಿಯಲ್ಲಿ 3.3, ಅರ್ಕಾವತಿಯಲ್ಲಿ 39, ಭದ್ರಾದಲ್ಲಿ 7, ಭೀಮಾದಲ್ಲಿ 4, ಗಂಗಾವಳಿಯಲ್ಲಿ 3.4, ಕಾಗಿಣದಲ್ಲಿ 3.1, ಕೃಷ್ಣದಲ್ಲಿ 4.7, ನೇತ್ರಾ ವತಿಯಲ್ಲಿ 6, ಶರಾವತಿಯಲ್ಲಿ 3.3, ಶಿಂಶಾದಲ್ಲಿ 9.5, ತುಂಗಾದಲ್ಲಿ 6.2 ರಷ್ಟಿದೆ ಎಂದು ವರದಿ ಹೇಳಿದೆ.

ಈ ಸಮಿತಿಯಲ್ಲಿ ಪ್ರಧಾನ ಪರಿಸರ ಅಧಿಕಾರಿ ಡಾ.ಪಿ.ನಿರಂಜನ್, ನಿವೃತ್ತ ಪರಿಸರ ಅಧಿಕಾರಿ ಡಾ.ಬಿ.ಎಂ.ಪ್ರಕಾಶ್, ಕರ್ನಾಟಕ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಎಕ್ಸಿಕ್ಯೂಟಿವ್ ಎಂಜಿನಿಯರ್, ಕಾವೇರಿ ನೀರಾವರಿ ನಿಗಮದ ಸೂಪರಿಡೆಂಟೆಂಟ್ ಎಂಜಿನಿಯರ್, ಮೈಸೂರು ವಿಶ್ವವಿದ್ಯಾನಿಲಯದ ಒಬ್ಬ ಪ್ರಾಧ್ಯಾಪಕರು ಹಾಗೂ ಎಸ್ ಜೆಸಿಇ ಒಬ್ಬ ಪ್ರಾಧ್ಯಾಪಕ ಸೇರಿದಂತೆ ತಂತ್ರಜ್ಞರು ಇದ್ದರು.

---



# ಮಿನಿ ನ್ಯೂಸ್

## ಗಣೇಶೋತ್ಸದಲ್ಲಿ ಡ್ಯಾನ್ಸ್‌ಗೆ ನಿರಾಕರಣೆ ಯುವಕ ಆತ್ಮಹತ್ಯೆಗೆ ಶರಣು

• ಉದಯವಾಹಿನಿ ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಘೋರ ಘಟನೆಯೊಂದು ನಡೆದಿದ್ದು, ಗಣೇಶೋತ್ಸವದಲ್ಲಿ ಡ್ಯಾನ್ಸ್ ಮಾಡಲು ನಿರಾಕರಿಸಿದ ಹಿನ್ನೆಲೆಯಲ್ಲಿ ನೊಂದ ಯುವಕನೊಬ್ಬ ಆತ್ಮಹತ್ಯೆಗೆ ಶರಣಾಗಿರುವ ಘಟನೆ ನಡೆದಿದೆ.


ಚಿಕ್ಕಬಳ್ಳಾಪುರ ಜಿಲ್ಲೆಯ ಚಿಕ್ಕಪ್ಯಾಲಯಗುರ್ಕಿಯಲ್ಲಿ ಗಣೇಶೋತ್ಸವದಲ್ಲಿ ಡ್ಯಾನ್ಸ್ ಮಾಡದಂತೆ ಅಮ್ಮ ಮತ್ತು ಅಣ್ಣ ನಿರಾಕರಿಸಿದ ಹಿನ್ನೆಲೆಯಲ್ಲಿ ನೊಂದ ಯುವಕನೊಬ್ಬ ಆತ್ಮಹತ್ಯೆಗೆ ಶರಣಾಗಿದ್ದಾನೆ. ಮೃತ ಯುವಕನನ್ನು ಗಿರೀಶ್ (21) ಎಂದು ಗುರುತಿಸಲಾಗಿದೆ.

ಗಿರೀಶ್ ಗ್ರಾಮದ ಮುತ್ತರಾಯಸ್ವಾಮಿ ದೇಗುಲದ ಬಳಿಯ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಪರೇಸಂದ್ರ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ಹುಲಿಯನ್ನೇ ಗುಮ್ಮಿದ ಕಾಡೆಮ್ಮೆ

• ಉದಯವಾಹಿನಿ ಚಾಮರಾಜನಗರ

ಚಾಮರಾಜನಗರ ಜಿಲ್ಲೆಯಲ್ಲಿ ಕಾಡುಪ್ರಾಣಿಗಳ ಹಾವಳಿ ಮಾಡುತ್ತಲೇ ಇರುತ್ತವೆ. ಇತ್ತೀಚೆಗಷ್ಟೇ ಹುಲಿಯೊಂದು ಎರಡು ಹಸುಗಳ ರಕ್ತ ಹೀರಿರುವ ಘಟನೆ ಜಿಲ್ಲೆಯ ವಡೆಯನಪುರ ಗ್ರಾಮದಲ್ಲಿ ನಡೆದಿತ್ತು. ಇನ್ನು ಇದೀಗ ಬೇಟೆಯಾಡಲು ಬಂದ ಹುಲಿಯನ್ನೇ ಕಾಡೆಮ್ಮೆಯೊಂದು ಹಿಮ್ಮೆಟ್ಟಿಸಿರುವುದು ಬಂಡೀಪುರ ಸಫಾರಿಯಲ್ಲಿ ನಡೆದಿದೆ.


ಉದಯವಾಹಿನಿ, ಚಿತ್ರ

ಸುಮ್ಮನೆ ಯಾವುದೇ ಪ್ರಾಣಿಗಳ ತಂಟೆಗೆ ಹೋಗದೇ ಮೇಯುತ್ತಿದ್ದ ಕಾಡೆಮ್ಮೆ ಮೇಲೆ ದಾಳಿ ಹುಲಿ ದಾಳಿ ನಡೆಸಲು ಮುಂದಾಗಿದೆ. ಈ ವೇಳೆ ಹುಲಿಗೆ ಕಾಲಿನಿಂದ ಒದ್ದು ಕಾಡೆಮ್ಮೆ ಎದುರಿಸಿ ನಿಂತಿದೆ. ಇನ್ನು ಕಾಡೆಮ್ಮೆಯ ರೌದ್ರಾವತಾರ ಕಂಡ ಹುಲಿ ಬಂದ ದಾರಿಗೆ ಸುಂಕ ಇಲ್ಲವೆಂಬಂತೆ ಸ್ಥಳದಿಂದ ಕಾಲ್ಕಿತ್ತಿದೆ.

ಇನ್ನು, ಈ ರೋಮಾಂಚಕ ಬೇಟೆ ದೃಶ್ಯವನ್ನು ಸಫಾರಿಗೆ ತೆರಳಿದ್ದ ಪ್ರವಾಸಿಗರು ಸೆರೆ ಹಿಡಿದಿದ್ದಾರೆ. ಸೆಪ್ಟೆಂಬರ್ 11ರಂದು ಸಂಜೆ ಸಫಾರಿಯಲ್ಲಿ ಈ ಬೇಟೆ ಕಾಳಗ ನಡೆದಿದೆ ಎಂದು ತಿಳಿದುಬಂದಿದೆ. ಕಾಡೆಮ್ಮೆ ಬಲಿಷ್ಠ ಪ್ರಾಣಿಯಾದರೂ ಸಹ ಹುಲಿಯ ಪ್ರಮುಖ ಬೇಟೆಗಳಲ್ಲಿ ಒಂದಾಗಿದೆ. ಆದರೆ, ಹುಲಿಯನ್ನು ಎದುರಿಸಿ ಹಿಮ್ಮೆಟ್ಟಿಸಿದ್ದು ಮಾತ್ರ ರೋಮಾಂಚಕಾರಿ ಆಗಿದೆ.

## ಕಲುಷಿತ ನೀರು ಸೇವಿಸಿ ಓರ್ವ ಸಾವು ವಾಂತಿ ಭೇದಿಯಿಂದ 12 ಮಂದಿ ಅಸ್ವಸ್ಥ

• ಉದಯವಾಹಿನಿ ಮೈಸೂರು

ಕಲುಷಿತ ನೀರು ಸೇವನೆಯಿಂದ ಓರ್ವ ಸಾವನ್ನಪ್ಪಿದ್ದು, 12 ಜನ ವಾಂತಿಭೇದಿಯಿಂದ ಅಸ್ವಸ್ಥಗೊಂಡಿರುವ ಘಟನೆ ಸಾಲಿಗ್ರಾಮ ತಾಲ್ಲೂಕಿನ ಗಡಿ ಗ್ರಾಮ ಬೆಟ್ಟಹಳ್ಳಿಯಲ್ಲಿ ನಡೆದಿದೆ.

ಗೋವಿಂದೇಗೌಡ (65) ಸಾವಿಗೀಡಾದ ವ್ಯಕ್ತಿ. ಗ್ರಾಮದ ಟ್ಯಾಂಕ್‌ನಿಂದ ಸರಬರಾಜಾಗಿದ್ದ ನೀರನ್ನು ಸೇವಿಸಿ ಕೆಲವರಿಗೆ ವಾಂತಿ ಭೇದಿ ಆಗಿದೆ ಎಂದು ಶಂಕಿಸಲಾಗಿದೆ.

ಅಸ್ವಸ್ಥರನ್ನು ತಕ್ಷಣವೇ ಸಾಲಿಗ್ರಾಮ ಸಮುದಾಯ ಆರೋಗ್ಯ ಕೇಂದ್ರಕ್ಕೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಗೋವಿಂದೇಗೌಡ ಎಂಬುವ 'ವರು ತೀವ್ರ ಅಸ್ವಸ್ಥಗೊಂಡ ಹಿನ್ನೆಲೆ ಹಾಸನ ಜಿಲ್ಲೆಯ ಸರ್ಕಾರಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾರೆ. ತಾಲ್ಲೂಕು ಆಸ್ಪತ್ರೆಯ ವೈದ್ಯರು ಬೆಟ್ಟಹಳ್ಳಿ ಗ್ರಾಮಕ್ಕೆ ಭೇಟಿ ಜನರ ಆರೋಗ್ಯ ಪರೀಕ್ಷೆ ನಡೆಸಿದರು.

## ಕೋಲಾರ ಭಾಗದವರಿಗೂ ಸಿಎಂ ಸ್ಥಾನ ಕೊಡಲಿ: ಕೊತ್ತೂರು ಮಂಜುನಾಥ್

• ಉದಯವಾಹಿನಿ ಕೋಲಾರ



ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿ ಸದ್ಯಕ್ಕೆ ಖಾಲಿ ಇಲ್ಲ. ಬದಲಾವಣೆ ಪ್ರಶ್ನೆಯೂ ಇಲ್ಲ ಎಂದಿರುವ ಶಾಸಕ ಕೊತ್ತೂರು ಮಂಜುನಾಥ್, ಕೆಲವರು ಉತ್ತರ ಕರ್ನಾಟಕಕ್ಕೆ, ಬೆಳಗಾವಿ ಭಾಗದವರಿಗೆ ಸಿಎಂ ಸ್ಥಾನ ಕೇಳುತ್ತಿದ್ದಾರೆ. ಕೊಡುವುದಾದರೆ ಕೋಲಾರಕ್ಕೂ ಕೊಡಲಿ, ಬೆಂಗಳೂರಿಗೆ ಹತ್ತಿರವಾಗುತ್ತದೆ. ಮೊದಲ ಸಿಎಂ ಕೋಲಾರದವರೇ ಆಗಿರುವುದರಿಂದ ಕೇಳುವುದರಲ್ಲಿ ತಪ್ಪಿಲ್ಲ ಎಂದು ಹೇಳಿದರು.

ಸುದ್ದಿಗಾರರ ಜತೆ ಮಾತನಾಡಿ, ಮುಂದೆ ಏನಾದರೂ ಸಿಗಬಹುದು ಎಂದು ಕೆಲವರು ಈಗಲೇ ಕಲ್ಲು ಎಸೆಯಲು ಹೊರಟಿರಬಹುದು. ಆಸೆಗಾಗಿ ಮಾತಾಡಿದ್ದಾರೆ. ಹಾಗೇನಾದರೂ ಇದ್ದಲ್ಲಿ ನನ್ನಲ್ಲಿ ಯಾರಾದರೂ ಬೆಂಬಲ ಕೋರುತ್ತಿದ್ದರು. ಇದುವರೆಗೂ ಅಂತಹ ಪ್ರಸ್ತಾವ ನಮ್ಮ ಮುಂದೆ ಇಲ್ಲ ಎಂದರು. ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ 5 ವರ್ಷ ಪೂರ್ಣಗೊಳಿಸಲಿದ್ದಾರೆ. ಇದರ ಬಗ್ಗೆ ತಲೆಕೆಡಿಸಿಕೊಳ್ಳುವ ಆವಶ್ಯಕತೆ ಇಲ್ಲ ಎಂದರು.

## ಉದ್ಘಾಟನೆಗೆ ಕಾದಿವೆ ಭವನಗಳು

• ಉದಯವಾಹಿನಿ ಶಿರಾ

ತಾಲ್ಲೂಕಿನ ಬುಕ್ಕಾಪಟ್ಟಣ ಹೋಬಳಿಯಲ್ಲಿ ಅಂಬೇಡ್ಕರ್ ಭವನಗಳ ಕಾಮಗಾರಿ ಪೂರ್ಣಗೊಂಡು ವರ್ಷಗಳೇ ಕಳೆದರೂ ಉದ್ಘಾಟನೆಯಾಗಿಲ್ಲ. ಬುಕ್ಕಾಪಟ್ಟಣ ಹೋಬಳಿ ಹುಯಿಲ್ ದೊರೆ, ರಂಗನಾಥಪುರ, ಕುಣಗಾಟನಹಳ್ಳಿ, ಸುಬಾಬಲ್ ರಂಗಾಪುರದಲ್ಲಿ ತಲಾ 20 ಲಕ್ಷ ವೆಚ್ಚದಲ್ಲಿ ಅಂಬೇಡ್ಕರ್ ಭವನ ಕಾಮಗಾರಿ ಪೂರ್ಣಗೊಂಡರೂ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಉದ್ಘಾಟನೆಯಾಗಿಲ್ಲ. ಬುಕ್ಕಾಪಟ್ಟಣ ಹೋಬಳಿ ಆಡಳಿತಾತ್ಮಕವಾಗಿ ಶಿರಾ ತಾಲ್ಲೂಕಿಗೆ ಸೇರಿದ್ದರೂ ಚಿಕ್ಕನಾಯಕನಹಳ್ಳಿ ವಿಧಾನಸಭೆ ವ್ಯಾಪ್ತಿಗೆ ಸೇರುವುದರಿಂದ ಅಭಿವೃದ್ಧಿ ವಿಚಾರದಲ್ಲಿ ಮಲತಾಯಿ ಧೋರಣೆ ತಾಳಲಾಗುತ್ತಿದ್ದು, ಅಧಿಕಾರಿಗಳು ತಾಲ್ಲೂಕಿನ ಇತರೆ ಹೋಬಳಿಗೆ ಕೊಟ್ಟಷ್ಟು ಪ್ರಾಮುಖ್ಯತೆ ಬುಕ್ಕಾಪಟ್ಟಣ ಹೋಬಳಿ

ನೀಡುವುದಿಲ್ಲ ಎನ್ನುವ ದೂರು ಸ್ಥಳೀಯರದ್ದು. ಅಂಬೇಡ್ಕರ್ ಭವನಗಳು ಉದ್ಘಾಟನೆಗೊಂಡಿದ್ದರೆ ಜನರ ಉಪಯೋಗಕ್ಕೆ ಬರುತ್ತಿದ್ದವು. ಆದರೆ ಉದ್ಘಾಟನೆ ಮಾಡದೆ ಬೀಗ ಹಾಕಿರುವುದರಿಂದ ಭವನದ ಸುತ್ತ ಗಿಡ, ಗಂಟಿ ಬೆಳೆದು ವಿಷ ಜಂತುಗಳ ತಾಣವಾಗುತ್ತಿದ್ದು ಒಳಗೆ ಹೋಗಲು ಸಾಧ್ಯವಾಗದಂತಾಗಿದೆ.

ಹುಯಿಲ್ ದೊರೆ ಗ್ರಾಮದಲ್ಲಿ ಶಾಲೆ ಸಮೀಪದಲ್ಲಿಯೇ ಅಂಬೇಡ್ಕರ್ ಭವನ ನಿರ್ಮಿಸಲಾಗಿದೆ. ಜೊತೆಗೆ ಅಲ್ಲಿಯೇ ನೀರಿನ ಸಿಸ್ಟನ್ ಇದ್ದು ಮಹಿಳೆಯರು ನೀರು ಹಿಡಿಯಲು ಬಂದಾಗ ಹಲವರು ಹಾವುಗಳನ್ನು ಕಂಡು ಭಯಭೀತರಾಗಿದ್ದಾರೆ. ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಹೇಳುವಂತೆ ಕಟ್ಟಡದ ಕಾಮಗಾರಿ ಪೂರ್ಣವಾಗಿದ್ದು, ವಿದ್ಯುತ್ ಸಂಪರ್ಕ ನೀಡಬೇಕಿದೆ. ಒಂದು ವಾರದಲ್ಲಿ ವಿದ್ಯುತ್ ಸಂಪರ್ಕ ದೊರೆಯಲಿದ್ದು ನಂತರ ಭವನಗಳನ್ನು ಹಸ್ತಾಂತರ ಮಾಡಲಾಗುವುದು ಎನ್ನುತ್ತಾರೆ.

ಅಂತರಾಳದಿಂದ.. EDITORIAL

# ರಾಹುಲ್ ಗಾಂಧಿ ಪರ ಪನ್ನುನ್ ಬ್ಯಾಟ್: ಪ್ರತ್ಯೇಕ ರಾಷ್ಟ್ರ ಬೇಡಿಕೆ ಮುಂದಿಟ್ಟ ಖಲಿಸ್ತಾನ್ ಉಗ್ರ!

ಖಲಿಸ್ತಾನಿ ಪರ ಸಂಘಟನೆಯಾದ ಸಿಟ್ಸ್ ಫಾರ್ ಜಸ್ಟಿಸ್ ಸಂಸ್ಥಾಪಕ ಗುರುಪತ್‌ಂತ್ ಸಿಂಗ್ ಪನ್ನುನ್ ರಾಹುಲ್ ಗಾಂಧಿ ಹೇಳಿಕೆಯನ್ನು ಉಲ್ಲೇಖಿಸಿ ಪ್ರತ್ಯೇಕ ಖಲಿಸ್ತಾನ್ ರಾಷ್ಟ್ರ ಬೇಡಿಕೆಯನ್ನು ಮತ್ತೊಮ್ಮೆ ಮುಂದಿಟ್ಟಿದ್ದಾನೆ.

ವಾಷಿಂಗ್ಟನ್‌ನಲ್ಲಿರುವ ಗುರುಪತ್‌ವಂತ್ ಸಿಂಗ್ ಪನ್ನುನ್ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದು, ವಾಷಿಂಗ್ಟನ್ ಡಿಸಿಯಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ ಅವರು ಖಈಖಯ ಜಾಗತಿಕ ಖಲಿಸ್ತಾನ್ ಜನಾಭಿಪ್ರಾಯ ಸಂಗ್ರಹ ಅಭಿಯಾನವನ್ನು ಸಮರ್ಥಿಸಿಕೊಂಡಿದ್ದಾರೆ.



ಉದಯವಾಹಿನಿ ಚಿತ್ರ

ಭಾರತದಲ್ಲಿ ಸಿಖ್ಖರಿಗೆ ಪೇಟ, ಕಡವನ್ನು ಧರಿಸಿ ಗುರುದ್ವಾರಕ್ಕೆ ಹೋಗುವುದಕ್ಕೆ ಅನುಮತಿ ನೀಡಲಾಗುತ್ತದೆಯೇ ಎಂಬುದರ ಬಗ್ಗೆ ಯೋಚಿಸಬೇಕಿದೆ ಎಂದು ಹೇಳಿದ್ದಾರೆ.

ಭಾರತದ ಸಿಬ್ಬರ್ ಬಗ್ಗೆ ರಾಹುಲ್ ಆಡಿರುವ ಮಾತು ದಿಟ್ಟತನದಿಂದ ಕೂಡಿರುವುದು ಮಾತ್ರವಲ್ಲ 1947 ರಿಂದ ಭಾರತದಲ್ಲಿ ಸಿಬ್ಬರು ಎದುರಿಸುತ್ತಿರುವ ವಾಸ್ತವಿಕ ಇತಿಹಾಸದಲ್ಲಿ ಎದುರಿಸುತ್ತಿರವ ಸಮಸ್ಯೆಯನ್ನು ತಿಳಿಸಿದೆ. ಸಿಖ್ ಫಾರ್ ಜಸ್ಟಿಸ್ ಸಂಘಟನೆ ಸಿಬ್ಬರ ತಾಯ್ನಾಡಾಗಿ ಖಲಿಸ್ತಾನ ಪ್ರತ್ಯೇಕ ರಾಷ್ಟ್ರ ಸ್ಥಾಪಿಸಬೇಕೆಂಬ ಪಂಜಾಬ್ ಸ್ವಾತಂತ್ರ್ಯದ ಜನಾಭಿಪ್ರಾಯ ಸಂಗ್ರಹಣೆಯ ಸಮರ್ಥನೆಯನ್ನು ದೃಢೀಕರಿಸುತ್ತದೆ ಎಂದು ಹೇಳಿದ್ದಾನೆ.

**ಮಾತನಾಡಿದ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ''ಭಾರತದಲ್ಲಿ ಹೋರಾಟ ಎಂಬುದು ಕೇವಲ ರಾಜಕೀಯಕ್ಕೆ ಸಂಬಂಧಿಸಿಲ್ಲ. ಒಬ್ಬ ಸಿಖ್ ಪೇಟ ಧರಿಸಲು ಅನುಮತಿ ನೀಡುವುದೆ ಅಥವಾ ಗುರುದ್ವಾರಕ್ಕೆ ಹೋಗಲು ಅನುಮತಿ ಇದೆಯೇ ಎಂಬುದಾಗಿದೆ. ಕೇವಲ ಸಿಖ್ಖರು ಮಾತ್ರವಲ್ಲ, ಎಲ್ಲಾ ಧರ್ಮೀಯರ ಮೂಲಭೂತ ಹಕ್ಕಾದ ಧಾರ್ಮಿಕ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ,'' ಎಂದು ಹೇಳಿದ್ದರು.**

**ರಾಹುಲ್ ಹೇಳಿದ್ದೇನು?** ಸಿಬ್ಬರು ಟರ್ಬನ್, ಖಡಗ ಧರಿಸುವುದಕ್ಕೆ ಹೆದರುವಂತಾಗಿದೆ. ಇದು ಒಬ್ಬ ವ್ಯಕ್ತಿ ಮತ್ತು ಒಂದು ಧರ್ಮಕ್ಕೆ ಸೀಮಿತವಾಗಿಲ್ಲ.

ಎಲ್ಲಾ ಧರ್ಮಗಳಲ್ಲೂ ಇಂತಹ ಸ್ಥಿತಿ ಇದೆ. ಸ್ವಾತಂತ್ರ್ಯ ನಂತರದ ಇತಿಹಾಸದಲ್ಲಿ ಸಿಖ್ ಸಮುದಾಯದ ಮೇಲೆ ಹತ್ಯಾಕಾಂಡ ನಡೆದ ಸಂದರ್ಭವಿತ್ತು ಆಗ 3,000 ಅಮಾಯಕ ಸಿಬ್ಬರನ್ನು ಕೊಲ್ಲಲಾಯಿತು. ಆ ಸಂದರ್ಭದಲ್ಲಿ ನನ್ನ ಕೆಲವು ಸಹೋದರರು ಪೇಟ ಧರಿಸುವುದನ್ನೇ ಬಿಟ್ಟರು ಎಂದು ರಾಹುಲ್ ಹೇಳಿದ್ದರು. ಅಮೆರಿಕ ಪ್ರವಾಸದಲ್ಲಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸಿಖ್ಖರ ಸ್ವಾತಂತ್ರ್ಯದ ಕುರಿತು ನೀಡಿರುವ ಹೇಳಿಕೆಯು ದಿಟ್ಟ ಮತ್ತು ಪ್ರವರ್ತನಕಾರಿ ಹೇಳಿಕೆ ಎಂದಿರುವ ಖಲಿಸ್ತಾನಿ ಉಗ್ರ ಗುರುಪತ್ವಂತ್ ಸಿಂಗ್ ಪನ್ನು, ಪ್ರತ್ಯೇಕ ಖಲಿಸ್ತಾನಿ ದೇಶದ ಬೇಡಿಕೆಯನ್ನು ಇದು ಸಮರ್ಥಿಸುತ್ತದೆ ಎಂದು ಹೇಳಿದ್ದಾನೆ. ಭಾರತದಲ್ಲಿ ಧಾರ್ಮಿಕ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡುವ ಸನ್ನಿವೇಶ ಸೃಷ್ಟಿಯಾಗಿದೆ ಎಂಬ ರಾಹುಲ್ ಗಾಂಧಿ ಮಾತು ಆಕ್ರೋಶದ ಕಿಡಿ ಹೊತ್ತಿಸಿದೆ.

ವರ್ಜೀನಿಯಾದ ಹೆರ್ನ್‌ಡಾನ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ರಾಹುಲ್ ಗಾಂಧಿ, ಜಾತಿಗಣತಿ, ಆರ್ಥಿಕ ಸಂಪನ್ಮೂಲಗಳ ಅಸಮಾನ ಹಂಚಿಕೆ, ಉನ್ನತ ಹುದ್ದೆಗಳಲ್ಲಿ ಮೇಲ್ವರ್ಗದ ಪ್ರಾಬಲ್ಯಗಳ ಕುರಿತು ಮಾತನಾಡಿದರು. ಇದಕ್ಕೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮೂಲಕ ಬೆಂಬಲ ವ್ಯಕ್ತಪಡಿಸಿರುವ ಜಸ್ಟೀಸ್ ಫಾರ್ ಸಿಖ್ಸ್ ಸಂಘಟನೆಯ ಮುಖ್ಯಸ್ಥ ಗುರುಪತ್ವಂತ್ ಸಿಂಗ್ ಪನ್ನು, ಭಾರತದಲ್ಲಿನ ಸಿಖ್ಖರಿಗೆ ಇರುವ ಅಸ್ತಿತ್ವವಾದದ ಬೆದರಿಕೆಯು 1947ರಿಂದಲೂ ಭಾರತದಲ್ಲಿ ವಿವಿಧ ಸರ್ಕಾರಗಳ ಆಡಳಿತದ ಅಡಿಯಲ್ಲಿ ಸಿಖ್ಖರು ನಿರಂತರವಾಗಿ ಎದುರಿಸುತ್ತಿರುವ ವಾಸ್ತವ ಇತಿಹಾಸದಲ್ಲಿ ದೃಢವಾಗಿ ನೆಲೆಯೂರಿದೆ ಎಂದು ಹೇಳಿದ್ದಾನೆ.

ಇದು ಸಿಖ್ಖರ ತಾಯ್ನಾಡು (ಖಲಿಸ್ತಾನ) ನಿರ್ಮಾಣಕ್ಕೆ ಪಂಜಾಬ್ ಸ್ವತಂತ್ರ ಜನಾಭಿಪ್ರಾಯದ ಬೇಡಿಕೆ ಕುರಿತಾದ ಸಿಖ್ಸ್ ಫಾರ್ ಜಸ್ಟೀಸ್‌ನ ನಿಲುವನ್ನು ಸಮರ್ಥಿಸುತ್ತದೆ ಕೂಡ ಎಂದು ಅಮೆರಿಕ ಮೂಲದ ಸಂಘಟನೆ ನಡೆಸುತ್ತಿರುವ ಪನ್ನು ಬರೆದುಕೊಂಡಿದ್ದಾನೆ. ಸಿಖ್ಖರ ಹತ್ಯೆಗೈದವರಾರು..? ರಾಹುಲ್ ಗಾಂಧಿ ಮಾತಿಗೆ ಬಿಜೆಪಿ ಕಿಡಿಕಾರಿದೆ.

''ದಿಲ್ಲಿಯಲ್ಲಿ 1984ರಲ್ಲಿ ಸಿಖ್ಖರ ಮಾರಣ ಹೋಮ ಮಾಡಿದ್ದು ಯಾರು? ಅಂದು ಸಿಖ್ ಸಮುದಾಯದ ಪೇಟ, ಗಡ್ಡವನ್ನು ಬಲವಂತವಾಗಿ ತೆಗೆಸಿದ್ದು ಯಾರು? ಗುರುದ್ವಾರಗಳಿಗೆ ಬೀಗ ಜಡಿದು ಹೊರ ತಳ್ಳಿದ್ದು ಯಾರು? ಅದನ್ನು ರಾಹುಲ್ ಗಾಂಧಿ ಅಮೆರಿಕದಲ್ಲಿ ವಿವರಿಸಬೇಕಿತ್ತು. ನಿಮ್ಮ ತಂದೆ ಅಧಿಕಾರದಲ್ಲಿದ್ದಾಗ ನಡೆದ ಸಿಖ್ ಹತ್ಯಾಕಾಂಡದ ಮಾಹಿತಿ ನೀಡಬೇಕಿತ್ತು. ನಿಮ್ಮ ಪಕ್ಷದವರೇ ಸಾವಿರಾರು ಜನರ ಹತ್ಯೆ ಮಾಡಿದ ಸಂಗತಿಗಳನ್ನು ಬಹಿರಂಗಪಡಿಸಬೇಕಿತ್ತು,'' ಎಂದು ಬಿಜೆಪಿ ವಕ್ತಾರ ಆರ್.ಪಿ. ಸಿಂಗ್ ವಾಗ್ದಾಳಿ ನಡೆಸಿದ್ದಾರೆ. ''ವಿದೇಶಿ ನೆಲದಲ್ಲಿ ಕೂತು ಭಾರತದಲ್ಲಿನ ಧಾರ್ಮಿಕ ಸ್ವಾತಂತ್ರ್ಯ, ಸಿಖ್ ಧರ್ಮದ ಕುರಿತು ವಿವಾದಿತ ಹೇಳಿಕೆ ನೀಡಿರುವ ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಲಾಗುವುದು,'' ಎಂದೂ ಸಿಂಗ್ ತಿಳಿಸಿದ್ದಾರೆ.




• ಹಿಂದಿನ ಸಂಚಿಕೆಯಿಂದ

ಆದರೆ ಯಾರ ಪುಣ್ಯವು ಪಾಪಕ್ಕಿಂತ ಬಹಳವಾಗಿರುವುದೋ ಅವನಿಗೆ ಮೊದಲು ನರಕದ ಅನುಭವವಾಗುತ್ತದೆ. ಪಾಪಫಲವನ್ನು ಹಾಗೆ ಕಳೆದುಕೊಂಡು ಅವನು ಸ್ವರ್ಗಕ್ಕೆ ಬರುತ್ತಾನೆ. ನಿನ್ನ ಪಾಪ ತುಂಬ ಅಲ್ಪವಾಗಿತ್ತು. ನಿಜವಾಗಿ ಹೇಳಬೇಕೆಂದರೆ ಆ ಒಂದು ಸುಳ್ಳು ಮಾತ್ರವೇ ನೀನು ಮಾಡಿದ ಪಾಪವೆನ್ನಬಹುದು. ನಿನ್ನ ಸೋದರರ ವಿಚಾರವಾಗಿ, ಅವರು ಮಾಡಿದ ಪಾಪಗಳೇನೆಂಬುದನ್ನು ಬರುತ್ತ ದಾರಿಯಲ್ಲಿ ನೀನೇ ಹೇಳಿರುವೆ. ಅದಕ್ಕಾಗಿಯೇ ಅವರು ಕೆಲವು ಗಂಟೆಗಳ ಕಾಲ ನರಕದಲ್ಲಿರಬೇಕಾಯಿತು. ಈಗ ಅವರೆಲ್ಲರೂ ಸ್ವರ್ಗದಲ್ಲಿ ಇರುವರು. ಇದೆಲ್ಲವೂ ನಿನ್ನ ಅನುಭವಕ್ಕಾಗಿ ಕಲ್ಪಿಸಿದ ಭ್ರಮೆಯಾಗಿತ್ತು. ಈಗ ನಿನ್ನ ಸೋದರರು ಇಲ್ಲಿಲ್ಲ. ನನ್ನ ಜೊತೆಗೆ ಬಾ, ಅವರನ್ನು ತೋರಿಸುತ್ತೇನೆ'' ಎಂದನು. ಅಲ್ಲಿಗೆ ಬಂದಿದ್ದ ಯಮಧರ್ಮರಾಜನು ''ಇದೇ ನನ್ನ ಮೂರನೆಯ ಹಾಗೂ ಕೊನೆಯ ಪರೀಕ್ಷೆಯಾಗಿತ್ತು. ನೀನು ನನ್ನದೇ ಪ್ರತಿರೂಪವೆಂದು ತೋರಿಸಿಕೊಟ್ಟಿರುವೆ. ನಿನ್ನ ಈ ಎಲ್ಲಾ ಅನುಭವಗಳಿಗೆ ನಾನೇ ಕಾರಣನು. ಬಾ ಈಗ, ನಿನ್ನ ಸೋದರರನ್ನು ಸ್ವರ್ಗದಲ್ಲಿ ನೋಡುವೆಯಂತೆ'' ಎಂದನು. ಅವರೆಲ್ಲರೂ ಯುಧಿಷ್ಠಿರನನ್ನು ಸ್ವರ್ಗದಲ್ಲಿ ಹರಿಯುತ್ತಿದ್ದ ಗಂಗಾನದಿಗೆ ಕರೆದೊಯ್ದರು. ಅವನು ಅದರಲ್ಲಿ ಸ್ನಾನಮಾಡಿದನು. ಆಗ ಅವನಿಗೆ ತನ್ನ ಮನುಷ್ಯಸಹಜವಾದ ಭಾವನೆಗಳೆಲ್ಲವೂ ಬಿದ್ದುಹೋದವು. ಶರೀರ ದೇವಾಯತನವಾಯಿತು. ಸಂತೋಷಮನಸ್ಕನಾಗಿ ಅವನು ದೇವತೆಗಳೊಡನೆ ಸ್ವರ್ಗಕ್ಕೆ ಹೊರಟನು. ಅವರೆಲ್ಲರೂ ಇಂದ್ರಸಭೆಯನ್ನು ಪ್ರವೇಶಿಸಿದರು. ಕೃಷ್ಣನು ಅಲ್ಲಿ ದೇವತೆಗಳೆಲ್ಲರ ಮಧ್ಯೆ ಕುಳಿತಿದ್ದನು. ಅವನ ಪಕ್ಕದಲ್ಲಿದ್ದ ಅರ್ಜುನನು ಅಣ್ಣನನ್ನು ನೋಡಿ ನಕ್ಕನು. ಇಬ್ಬರೂ ಮೇಲೆದ್ದು ಬಂದು ಯುಧಿಷ್ಠಿರನನ್ನು ಕೈಹಿಡಿದು ಕರೆದೊಯ್ದರು. ಅವರೊಂದಿಗೆ ದ್ವಾದಶಸೂರ್ಯರೊಂದಿಗೆ ಶೋಭಿಸುತ್ತಿದ್ದ ರಾಧೇಯನಿದ್ದನು. ಮರುತ್ತುಗಳೊಂದಿಗೆ ಕುಳಿತಿದ್ದ ಭೀಮನೂ ಕಾಣಿಸಿದನು. ಅಶ್ವಿನೀದೇವತೆಗಳೊಂದಿಗೆ ಕುಳಿತಿದ್ದ ನಕುಲಸಹದೇವರುಗಳು ಕಾಣಿಸಿದರು. ಅವರೆಲ್ಲರೂ ಬಂದು ಇವನನ್ನು ಸ್ವಾಗತಿಸಿದರು. ತನ್ನ ಮಕ್ಕಳೊಂದಿಗೆ ಜ್ವಾಲೆಯಂತೆ ಉರಿಯುತ್ತಿದ್ದ ದ್ರೌಪದಿಯ ಶೋಭೆ ಅದ್ವಿತೀಯವಾಗಿದ್ದಿತು. ಸಾತ್ಯಕಿ ಮತ್ತು ಇತರ ವೃಷ್ಣಿವೀರರೆಲ್ಲರೂ ಅಲ್ಲಿ ಕಾಣಿಸಿದರು. ತಂಪಾಗಿ ಹೊಳೆಯುತ್ತಿದ್ದ ಚಂದ್ರನೊಂದಿಗೆ ಅಭಿಮನ್ಯು ಕುಳಿತಿದ್ದನು. ಅಗ್ನಿಯ ಜೊತೆಯಲ್ಲಿ ಧೃಷ್ಟದ್ಯುಮ್ನನು ಕಾಣಿಸಿದನು. ವಸುಗಳ ಜೊತೆಗೆ ಭೀಷ್ಮನೂ, ಬೃಹಸ್ಪತಿಯ ಜೊತೆಗೆ ದ್ರೋಣನೂ ಕಾಣಿಸಿದರು. ದುರ್ಯೋಧನನು ತನ್ನ ಪಾಪಗಳನ್ನೆಲ್ಲ ತೊಳೆದುಕೊಂಡು ಅಲ್ಲಿಗೆ ಬಂದಿದ್ದನು. ಯಮನ ಜೊತೆಯಲ್ಲಿ ವಿದುರನೂ ಇದ್ದನು. ಅವರೆಲ್ಲರೂ ಎದ್ದುಬಂದು ಹಾರ್ದಿಕವಾಗಿ ಯುಧಿಷ್ಠಿರನನ್ನು ಸ್ವಾಗತಿಸಿ ತಮ್ಮ ಜೊತೆಯಲ್ಲಿ ಕರೆದೊಯ್ದರು.

# ಶಿವಾಜಿನಗರದಲ್ಲಿ ಬೇಡದ ವಿವಾದವೇಕೆ..?

## ಶಿವಾಜಿನಗರದ ಮುಖ್ಯ ಬಸ್ ನಿಲ್ದಾಣದಿಂದ ಕೂಗಳತೆಯ ದೂರದಲ್ಲಿ ದೇವಸ್ಥಾನ, ಮಸೀದಿ, ಚರ್ಚ್

• ಉದಯವಾಹಿನಿ, ಬೆಂಗಳೂರು

ಶಿವಾಜಿನಗರ ಮೆಟ್ರೋ ನಿಲ್ದಾಣಕ್ಕೆ ನಿರ್ದಿಷ್ಟ ಸಮುದಾಯದ ದೇವರ ಹೆಸರಿಡುವ ಬಗ್ಗೆ ಪ್ರಸ್ತಾವ ಮಾಡುವ ಮೂಲಕ ಕಾಂಗ್ರೆಸ್ ಇದೀಗ ಮತ್ತೊಮ್ಮೆ ಬೇಡದ ವಿವಾದಕ್ಕೆ ಕೈಹಾಕಿದೆ. ಬೆಂಗಳೂರಿನ ಶಿವಾಜಿನಗರ ಹೇಳಿ ಕೇಳಿ ಕೋಮುಸೂಕ್ಷ್ಮ ಪ್ರದೇಶ. ಶಿವಾಜಿನಗರದ ಮುಖ್ಯ ಬಸ್ ನಿಲ್ದಾಣದಿಂದ ಕೂಗಳತೆಯ ದೂರದಲ್ಲಿ ದೇವಸ್ಥಾನ, ಮಸೀದಿ ಹಾಗೂ ಚರ್ಚ್ ಇದೆ.

ಶಿವಾಜಿನಗರ ಬಸ್‌ನಿಲ್ದಾಣ ಹಾಗೂ ಮಾರುಕಟ್ಟೆಯನ್ನು ನೋಡಿದರೆ ಸಾಕು ಇಲ್ಲಿ ಜನ ಅದೆಷ್ಟು ಸೌಹಾರ್ದತೆಯಿಂದ ಬದುಕು ಕಟ್ಟಿಕೊಂಡಿದ್ದಾರೆ ಎನ್ನುವುದು ತಿಳಿಯುತ್ತದೆ. ಸರ್ವ ಧರ್ಮ ಸಮನ್ವಯಕ್ಕೆ ಸಾಕ್ಷಿ ಎನ್ನುವಂತಿದೆ ಶಿವಾಜಿನಗರ. ಬೆಂಗಳೂರಿನ ಪ್ರಮುಖ ಪ್ರದೇಶಗಳಲ್ಲಿ ಒಂದಾಗಿರುವ ಶಿವಾಜಿನಗರದಲ್ಲಿ ಇದೀಗ ರಾಜ್ಯ ಸರ್ಕಾರವೇ ವಿವಾದವೊಂದಕ್ಕೆ ನಾಂದಿ ಹಾಡಿದ್ದು. ಅದು ಮುಂದೆ ಯಾವ ರೀತಿಯ ಚರ್ಚೆಗೆ ಕಾರಣವಾಗಲಿದೆ ಎನ್ನುವುದನ್ನು ಮರೆತಂತಿದೆ. ಶಿವಾಜಿನಗರ ವಿಧಾನಸಭಾ ಕ್ಷೇತ್ರವು ಬೆಂಗಳೂರಿನ ಹೃದಯಭಾಗದಲ್ಲಿದೆ. ಇಲ್ಲಿ ಸರ್ವ ಧರ್ಮಿಯರಷ್ಟೇ ಅಲ್ಲ. ಸರ್ವ ಭಾಷೆಯ ಜನರೂ ಸಹ ವಾಸಿಸುತ್ತಿದ್ದಾರೆ. ಇನ್ನು ಶಿವಾಜಿನಗರದಲ್ಲಿ ಮುಸ್ಲಿಂ ಜನ ಸಂಖ್ಯೆ ಹೆಚ್ಚಾಗಿದೆ. ಪ್ರಮುಖ ಸರ್ಕಾರಿ ಆಸ್ಪತ್ರೆ, ಮಾರುಕಟ್ಟೆ, ಬಸ್ ನಿಲ್ದಾಣ ಹಾಗೂ ವಾಣಿಜ್ಯ ಮಾರುಕಟ್ಟೆ ಇಲ್ಲಿದೆ. ಮಾಂಸ ಹಾಗೂ ವಾಣಿಜ್ಯ ಉತ್ಪನ್ನಗಳ ಮಾರಾಟದಿಂದ ಶಿವಾಜಿನಗರ ಪ್ರಸಿದ್ಧಿ ಗಳಿಸಿದೆ. ಇಷ್ಟೆಲ್ಲ ಪ್ರಖ್ಯಾತಿ ಇರುವ ಶಿವಾಜಿನಗರದಲ್ಲಿ ಇದೀಗ ಮೆಟ್ರೋ ಕಾಮಗಾರಿ ಜೋರಾಗಿಯೇ ಸಾಗಿದೆ. ಇದರ ನಡುವೆ ಶಿವಾಜಿನಗರ ಮೆಟ್ರೋ ನಿಲ್ದಾಣಕ್ಕೆ ಸೇಂಟ್ ಮೇರಿ ಹೆಸರಿಡುವ ಪ್ರಸ್ತಾವನೆಯ ಬಗ್ಗೆ ಮಾತನಾಡಿದ್ದಾರೆ.

ಊದುವುದನ್ನು ಕೊಟ್ಟು ಬಾರಿಸುವುದು ತೆಗೆದುಕೊಂಡರಂತೆ ರಾಜ್ಯ ಕಾಂಗ್ರೆಸ್ ಸರ್ಕಾರದ ಪರಿಸ್ಥಿತಿ ಇದಕ್ಕಿಂತ ಭಿನ್ನವಾಗಿ ಏನು ಇಲ್ಲ. ವಿವಾದವಾದರೆ ಸಾಕು ಅದನ್ನು ಯಾವ ರೀತಿ ರಾಜಕೀಯವಾಗಿ ಬಳಸಿಕೊಳ್ಳಬೇಕು ಎಂದು ವಿರೋಧ ಪಕ್ಷದಲ್ಲಿನ ಕೆಲವು ನಾಯಕರು ಕಾಯುತ್ತಿದ್ದಾರೆ. ಅವರ ಕೈಗೆ ರಾಜ್ಯ ಕಾಂಗ್ರೆಸ್ ಸರ್ಕಾರವೇ ಬಡಿಗೆ ಕೊಟ್ಟು ಬರ್ಸಿ ಎನ್ನುವಂತಿದೆ. ರಾಜ್ಯ ಸರ್ಕಾರ ಎರಡು ವರ್ಷದ ಅಧಿಕಾರದ ಅವಧಿಯನ್ನು ಪೂರೈಸುವ ಮೊದಲೇ ಹಲವು ಕಾರಣಗಳಿಂದ ನೆಗೆಟಿವ್ ಅಭಿಪ್ರಾಯಗಳಿಗೆ ಗುರಿಯಾಗಿದೆ. ಅದರಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ, ಮುಡಾ ಹಗರಣದ ಆರೋಪ ಇದೀಗ ಮುಂದಿನ ಸಿ.ಎಂ ಯಾರು ಎನ್ನುವ ಪ್ರಶ್ನೆ ಇಷ್ಟೆಲ್ಲ ಸಾಲದು ಎನ್ನುವುದಕ್ಕೆ ಆಗಾಗ್ಗೆ ಕೆಲವು ವಿಷಯಗಳನ್ನು ಪ್ರಸ್ತಾಪಿಸುವ ಪ್ರಸ್ತಾವನೆಯ ಪ್ರಯೋಗವನ್ನು ಮಾಡುತ್ತಿರುವಂತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಿವಾಜಿನಗರದ ಮೆಟ್ರೋ ನಿಲ್ದಾಣಕ್ಕೆ ಸೇಂಟ್ ಮೇರಿ ಹೆಸರಿಡುವ ಪ್ರಸ್ತಾವನೆಯ ಬಗ್ಗೆ ಮಾತನಾಡಿರುವುದಷ್ಟೇ. ಈಗ ಅದೇ ವಿಷಯ ವಿವಾದಕ್ಕೆ ಕಾರಣವಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಶಿವಾಜಿನಗರ ಮೆಟ್ರೋಗೆ ಸೇಂಟ್ ಮೇರಿ ಹೆಸರಡುವ ಬಗ್ಗೆ ಮಾತನಾಡುತ್ತಿದ್ದಂತೆಯೇ ವಿರೋಧ ಪಕ್ಷ ಇದು ಓಲೈಕೆಯ ರಾಜಕೀಯ ಎಂದು ದೂರಿವೆ. ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಯತ್ನಾಳ ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ, ಒಂದು ಸಂಸ್ಕೃತಿಯನ್ನು ಹೇಗೆ ನಾಶ ಮಾಡಬಹುದು ಎನ್ನುವುದಕ್ಕೆ ಇದು ಉದಾಹರಣೆ ಎಂದು ಹೇಳಿದ್ದಾರೆ.



**ಓಲೈಕೆ ರಾಜಕಾರಣಕ್ಕೆ, ಹೆಚ್ಚು ವೋಟು ಬೀಳುತ್ತಿರುವ ಸಮುದಾಯವನ್ನು ಸಂತುಷ್ಟಗೊಳಿಸಲು ಈ ರೀತಿ ವ್ಯರ್ಥ ಪ್ರಯತ್ನಗಳು ಬೇಕಾಗಿಲ್ಲ. ನಮ್ಮ ಸಂಸ್ಕೃತಿ, ಪರಂಪರೆ, ಧರ್ಮವನ್ನು ಹೆಸರನ್ನು ಉಳಿಸಿದವರನ್ನೆಲ್ಲ ಬಿಟ್ಟು ರಾಜಕೀಯ ಕಾರಣಕ್ಕಾಗಿ ಮೇರಿಯಮ್ಮನ ಹೆಸರು ನಾಮಕರಣ ಮಾಡುವ ಅವಶ್ಯಕತೆ ಇಲ್ಲ ಎಂದು ಅವರು ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಟ್ವೀಟ್ ಮಾಡಿದ್ದಾರೆ. ಸಿ.ಎಂ ಸಿದ್ದರಾಮಯ್ಯ ಅವರ ಪ್ರಸ್ತಾವಕ್ಕೆ ಸಾಮಾಜಿಕ ಜಾಲತಾಣ ಎಕ್ಸ್ ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣದಲ್ಲಿ ವಿರೋಧ ವ್ಯಕ್ತವಾಗಿದೆ.**

**ಹಿಂದೂಗಳ ಆರಾಧ್ಯದೈವ, ಔರಂಗಜೇಬನ ಹುಟ್ಟಡಗಿಸಿದ ಗಂಡುಗಲಿ, ಮಹಾಪರಾಕ್ರಮಿ ಶಿವಾಜಿ ಮಹಾರಾಜರು ತಮ್ಮ ಬಾಲ್ಯವನ್ನು ಕಳೆದಂತ ಶಿವಾಜಿನಗರದ ಮೆಟ್ರೋಗೆ ಸಂತ ಮೇರಿ ಹೆಸರನ್ನು ಇಡಬೇಕಂತೆ. ಇತಿಹಾಸ ಅರಿಯದ ಮೂಢರಷ್ಟೇ ಈ ರೀತಿ ಸಲಹೆ ಕೊಡಬಲ್ಲರು. 150 ವರ್ಷಗಳ ಇತಿಹಾಸವಿರುವ ಏಕಾಂಬರೇಶ್ವರ ಸ್ವಾಮಿಯ ದೇವಸ್ಥಾನ, ಮುತ್ಯಾಲಮ್ಮ ದೇವಸ್ಥಾನ, ಸೀತಾರಾಮಾಂಜನೇಯ ಸ್ವಾಮಿ ದೇವಸ್ಥಾನ, ಅಂಗಾಲ ಪರಮೇಶ್ವರಿ ಅಮ್ಮನವರ ದೇವಸ್ಥಾನಗಳು ಶಿವಾಜಿನಗರದಲ್ಲಿದೆ ಎಂದು ಯತ್ನಾಳ ಅವರು ಸಿ.ಎಂ ಸಿದ್ದರಾಮಯ್ಯ ಅವರು ಹೆಸರು ಹೇಳದೆ ಅವರನ್ನು ತಿವಿದಿದ್ದಾರೆ.**

# ಫೇಸ್ಬುಕ್ ಪೇಜ್ ಮೂಲಕ ಹಿಂದೂ ದೇವತೆಗಳ ಅಪಮಾನ

• ಉದಯವಾಹಿನಿ,ಮಂಗಳೂರು



ಉದಯವಾಹಿನಿ ಚಿತ್ರ

**ಧಾರ್ಮಿಕ ಭಾವನೆಗಳಿಗೆ ಧಕ್ಕೆ**

Fact Vid' ಹೆಸರಿನ ಫೇಸ್ಬುಕ್ ಪೇಜ್ ಒಂದರಲ್ಲಿ ಅನೇಕ ದಿನಗಳಿಂದ AI (Artificial Intelligence) ತಾಂತ್ರಿಕ ಸಹಾಯದಿಂದ ಹಿಂದೂ ದೇವತೆಗಳ ಅಪಮಾನಾತ್ಮಕ ಅಶ್ಲೀಲ ಫೋಟೋಗಳನ್ನು ನಿರಂತರವಾಗಿ ಫೇಸ್ಬುಕ್ ಜಾಲತಾಣದ ಮುಖಾಂತರ ಪ್ರಸಾರ ಮಾಡಲಾಗುತ್ತಿದೆ.

ಈ AI ಆಧಾರಿತ ಚಿತ್ರಗಳಿಂದ ಕೋಟ್ಯಂತರ ಹಿಂದೂ ಬಾಂಧವರ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗಿದೆ. ಸಂಬಂಧಿತ ಸೈಬರ್ ಕ್ರೈಮ್ ವಿಭಾಗವು ಇದರ ಬಗ್ಗೆ ಕೂಡಲೇ ಎಚ್ಚೆತ್ತುಕೊಂಡು ಪೇಜ್ ನ ಅಡ್ಮಿನ್ ಗಳನ್ನು ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕೆಂದು ಹಿಂದೂ ಜನಜಾಗೃತಿ ಸಮಿತಿಯ ದಕ್ಷಿಣ ಕನ್ನಡ ಜಿಲ್ಲಾ ಸಮನ್ವಯಕರಾದ ಶ್ರೀ. ವಿಜಯ ಕುಮಾರ ಇವರು ಆಗ್ರಹಿಸಿದ್ದಾರೆ. ಈ ಕುರಿತು 10 ಸೆಪ್ಟೆಂಬರ್ 2024 ಮಂಗಳವಾರದಂದು ಮಂಗಳೂರಿನ ಸೈಬರ್ ಕ್ರೈಮ್ ವಿಭಾಗಕ್ಕೆ ಸಮಿತಿಯ ಸಮನ್ವಯಕರು ಮತ್ತು ಧರ್ಮಪ್ರೇಮಿ ನ್ಯಾಯವಾದಿಗಳ ಒಕ್ಕೂಟವು ಸೇರಿ ದೂರು ದಾಖಲಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಗಳೂರು ಉರ್ವ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ.

ಅಭಿವ್ಯಕ್ತಿ ಸ್ವಾತಂತ್ರ್ಯ ಎಂದು ತಮ್ಮ ಬಗ್ಗೆ ಬರೆದುಕೊಂಡ 'Fact Vid' ಫೇಸ್ಬುಕ್ ಪೇಜ್ ನಲ್ಲಿ ಪ್ರತಿದಿನ 7 ರಿಂದ 8 ಹಿಂದೂ ದೇವತೆಗಳ ಅಪಮಾನಾತ್ಮಕ ಮತ್ತು ಅಶ್ಲೀಲ ಫೋಟೋಗಳು ಪ್ರಸಾರವಾಗುತ್ತಿದ್ದು, ಇದರಲ್ಲಿ ಹಿಂದೂ ಧರ್ಮದ ಶ್ರದ್ಧಾಸ್ಥಾನ ಭಗವಾನ್ ಶಿವ, ಕೃಷ್ಣ, ರಾಮ, ಗಣೇಶ ಮೊದಲಾದ ದೇವತೆಗಳು ಸ್ತ್ರೀಯೊಂದಿಗೆ ಅಶ್ಲೀಲವಾಗಿ ವರ್ತಿಸುತ್ತಿರುವಂತೆ, ಓಡಿಸುತ್ತಿರುವಂತೆ, ಕುಸ್ತಿ ಆಡುತ್ತಿರುವಂತೆ ಹೀಗೆ ವಿವಿಧ ರೀತಿಯಲ್ಲಿ ಚಿತ್ರಿಸಲಾಗಿದೆ. ಈ ಪೋಸ್ಟ್ ಗಳಿಗೆ ಅನೇಕ ಮತಾಂಧರು ಧಾರ್ಮಿಕ ಭಾವನೆಗಳನ್ನು ನೋಯಿಸುವಂತೆ ಕಮೆಂಟ್ ಗಳನ್ನೂ ಹಂಚಿಕೊಳ್ಳುತ್ತಿದ್ದಾರೆ. ಈ ಮೂಲಕ ಹಿಂದೂಗಳನ್ನು ಕೆರಳಿಸುವ ಬಹುದೊಡ್ಡ ಷಡ್ಯಂತ್ರ ಇದರಲ್ಲಿ ಅಡಗಿದೆ. ಈ ದೂರಿನಲ್ಲಿ ನ್ಯಾಯವಾದಿ ತೀರ್ಥೇಶ್ ಇವರು, ಫೇಸ್ಬುಕ್ ಪೇಜ್ Fact Vid' ನನ್ನು ನಿಯಂತ್ರಿಸುತ್ತಿರುವ ಅಡ್ಮಿನ್ ಮತ್ತು ಸದ್ರಿ ಪೇಜ್‌ನಲ್ಲಿ ಹಿಂದೂ ದೇವತೆಗಳ ಅವಹೇಳನ ಮಾಡುವ ಕಮೆಂಟ್‌ಗಳನ್ನೂ ಹಾಕುವವರ ವಿರುದ್ಧ ಭಾರತೀಯ ನ್ಯಾಯ ಸಂಹಿತೆ 299, 192, 353 ಮತ್ತು 67 IT Act ಸೆಕ್ಷನ್ ಅಡಿಯಲ್ಲಿ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕು, ಧಾರ್ಮಿಕ ಭಾವನೆಗೆ ನೋವುಂಟು ಮಾಡಲು ಎಡೆಮಾಡಿ ಕೊಡುವ AI Toolಗಳನ್ನು ನಿಯಂತ್ರಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಆಗ್ರಹಿಸಲಾಗಿದೆ. ಈ ವೇಳೆ ಧರ್ಮಾಭಿಮಾನಿ ವಕೀಲರಾದ ಈಶ್ವರ ಕೊಟ್ಟಾರಿ, ಯತೀಶ್, ವಿಜಯ ಕುಮಾರ್, ಸುಷ್ಮಾ, ಉದ್ಯಮಿಗಳಾದ ದಿನೇಶ್ ಎಂ. ಪಿ. ಚಂದ್ರಕಾಂತ್ ಕಾಮತ್, ಪ್ರಶಾಂತ್ ಕಾಂಚನ್, ಬಾಲಗಂಗಾಧರ, ನಾರಾಯಣ ಅಮೀನ್ ಇವರು ಮತ್ತು ಹಿಂದೂ ಜನಜಾಗೃತಿ ಸಮಿತಿಯ ಶ್ರೀ. ವಿಜಯಕುಮಾರ ಇವರು ಉಪಸ್ಥಿತರಿದ್ದರು. ಪೊಲೀಸ್ ನಿರೀಕ್ಷಕರಾದ ಭಾರತಿ ಇವರು ದೂರನ್ನು ಸ್ವೀಕರಿಸಿ ತಾವೆಲ್ಲರೂ ಸಮಾಜದ ಕಾಳಜಿ ವಹಿಸಿ ಇದನ್ನು ಜವಾಬ್ದಾರಿಯಿಂದ ವಿರೋಧಿಸುತ್ತಿರುವುದು ಅಭಿನಂದನಾರ್ಹವಾಗಿದೆ, ಇದರ ಬಗ್ಗೆ ಕೂಡಲೇ ಕ್ರಮಕ್ಕೆಗೊಳ್ಳುತ್ತೇವೆ ಎಂದು ಪ್ರತಿಕ್ರಿಯಿಸಿದ್ದಾರೆ.

# ಶೀರ್ಷಿಕೆ : ಕನ್ನಂಬಾಡಿ



ಕಟ್ಟೆ ಎಂ ಎಸ್ ಕೃಷ್ಣಸ್ವಾಮಿ
• ಉದಯವಾಹಿನಿ, ವಿಶೇಷ

ಅಂದದ ಚಂದದ ಕಲೆಯ ತವರೂರು
ಮಂಡ್ಯ ಜಿಲ್ಲೆಯೇ ಐಸಿರಿಯೂರು..
ಸಿಹಿ ಕಬ್ಬಿನ ಜೊಲ್ಲೆ ಭತ್ತದ ಬೆಳೆ
ಸೊಗದ ಸೊಗಡಿನ ಹಸಿರಿನ ಕಳೆ..//1//
ಕೊಡಗಿನಿಂದ ಹರಿವಳು ತಾಯಿ ಕಾವೇರಿ
ತಾಯಿ ಚಾಮುಂಡಿಯ ಹೊತ್ತ ಜಂಬೂಸವಾರಿ..
ನೆಟ್ಟಿಗರಿಗೆ ಅರಮನೆ ಹೊನ್ನಿನ ಅಂಬಾರಿ
ಜಟಕಾ ಗಾಡಿಯಲಿ ಜುಂಜೂರಿ..//2//
ಕಲಾ ಸಾಂಸ್ಕೃತಿಕ ನಗರಿ ಮೈಸೂರು
ನಮ್ಮೆಲ್ಲರ ಪಾಲಿನ ಬಂಧು ಒಡೆಯರು..
ಶ್ರೀರಂಗನ ಮಹಿಮೆ ಚೆಲುವನ ವೈಭವವು
ಅರ್ತಿ ಸ್ನೇಹ ಸಮೃದ್ಧಿಯ ಸಂಗಮವು..//3//
ಕುಣಿಕುಣಿಯುತ ನಲಿನಲಿಯುತ ಹರಿವಳು ಮಾತೆ
ಬೃಂದಾವನದಿ ಅಂಕುರಿಸಿ ನಲಿಸುವಳು ಜನ್ಮದಾತೆ..
ಕಾವೇರಿ ನಾಡಿನ ಅನ್ನದಾತನ ಬೆವರ ವರೆಸಿ
ಅನ್ನ ನೀಡುವಳು ಅನ್ನಪೂರ್ಣೇಯಾಗಿ ಮರೆಸಿ..//4//
ಮಾಂಡವ್ಯ ಋಷಿ ಮುನಿಯ ತಪಸಿನ ಫಲವಾಗಿ
ನಾಲ್ವಡಿ ಮಹಾರಾಜರ ತ್ಯಾಗದ ದೂರದೃಷ್ಠಿಯಾಗಿ ..
ದಿವಾನರ ಜ್ಞಾನಕ್ಕೆ ಅಪ್ರತಿಮ ಸಾಧನೆಯಾಗಿದೆ
ಜನತೆಗೆ ಜೀವನಾಡಿ ಕನ್ನಂಬಾಡಿ ಅಣ್ಣೆಕಟ್ಟೆಯಾಗಿದೆ..//5//

# ತಕ್ಕ ಪಾಠವ ಕಲಿಸರಣ್ಣ



ಹೆಚ್.ಎಸ್. ಪ್ರತಿಮಾ
• ಉದಯವಾಹಿನಿ, ವಿಶೇಷ

ಸೋದರಿ ಎಂದರೇ ಸಾಲದು ಕೇಳಿ
ರಕ್ಷಣೆ ನೀವು ಮಾಡಿರಣ್ಣ
ಮೃಗಗಳು ಇಂದು ಜಗದಲಿ ಇರುವರು
ತಕ್ಕ ಪಾಠವ ಕಲಿಸರಣ್ಣ ರಕ್ಷೆಯ ಹೆಣ್ಣಿಗೆ ನೀಡಿರಣ್ಣ.....
ಯಾರ ಸೋದರಿ, ಮಗಳಾದರೇನು?
ನಮಗೂ ಅವಳು ಸೋದರಿಯೇ
ರಕ್ಷೆಯ ಜವಾಬ್ದಾರಿ ಹೊತ್ತರೆ ಮಾತ್ರ
ಜಗದಲಿ ಹೆಣ್ಣಿಗೆ ಜೀವನವು.....



ಕೇಳಿರಿ ಅಣ್ಣ, ತಮ್ಮಂದಿರೇ ರಕ್ಷಾ ಬಂಧನ ದಿನದಂದು ನೆನೆಯದಿರಿ
ಎಲ್ಲಾ ದಿನದಲ್ಲೂ ರಕ್ಷಣೆ ಮಾಡುವ
ಹೊಣೆಯನು ನೀವು ಹೊತ್ತುತಿರಿ...
ಜಗದಲಿ ಎಲ್ಲೆಡೆ ಅತ್ಯಾಚಾರ, ಕಾಮುಕರೆ
ತುಂಬಿಹರು, ಪ್ರತಿ ಮನೆಯಲ್ಲಿ ಅಕ್ಕ ತಂಗಿಯರು
ಇದ್ದರೆ ಸಾಲದು ಕೇಳಿರಿ ತಮ್ಮ ಕರ್ತವ್ಯ ಅರಿತು ನೀವು
ಎಲ್ಲರಿಗೂ ರಕ್ಷಣೆ ನೀಡಿರಿ....
ಕಟುಕರ ರೀತಿ ವರ್ತಿಸುವವರಿಗೆ ತಕ್ಕ ಪಾಠವ ಕಲಿಸುತಿರಿ
ಕೇಳಿರಿ, ಹೇಳಿರಿ,ನೀವೇ ನಮಗೆ ರಕ್ಷಣೆಯು ಬದುಕಲಿ
ಹೆಣ್ಣು ಸೋದರಿ, ತಾಯಿಯಾಗಿ ಬಾಳಲು ನೀವೂ
ರಕ್ಷಿಸಿರಿ .....
ಕೆಲ ಗಂಡಸರ ವಿಕೃತ ಮನಸಿನಲಿ ಒಳ್ಳೆಯ ಭಾವನೆ
ಮೂಡಿಸುತಿರಿ ಎಲ್ಲರೂ ಒಂದುಗೂಡುತಿರಿ
ಹೆಣ್ಣಾಗಿ ಹುಟ್ಟಿದ್ದೆ ತಪ್ಪೇ ಎಂದು
ಹೇಳುವ ರೀತಿ ಮಾಡದಿರಿ....

# ಸವಾರರ ಅನುಕೂಲಕ್ಕಾಗಿ ಇವಿ ಮಿತ್ರ ಆ್ಯಪ್

• ಉದಯವಾಹಿನಿ, ಬೆಂಗಳೂರು




**ಗ್ರಾಹಕರಿಗೆ ಹೊಸ ಆ್ಯಪ್ ಲಭ್ಯ**

ಬೆಸ್ಕಾಂ ಮತ್ತಷ್ಟು ಗ್ರಾಹಕ ಸ್ನೇಹಿಯಾಗಿದೆ. ಎಲೆಕ್ಟ್ರಿಕ್ ವಾಹನ ಸವಾರರ ಅನುಕೂಲಕ್ಕಾಗಿ ಇವಿ ಮಿತ್ರ ಆ್ಯಪ್ ಬಿಡುಗಡೆ ಮಾಡಲಾಗಿದೆ. ಇದರಲ್ಲಿ ಎಲೆಕ್ಟ್ರಿಕ್ ವಾಹನ ಬಳಕೆದಾರರಿಗೆ ಚಾರ್ಜಿಂಗ್ ಕೇಂದ್ರಗಳ ಮಾಹಿತಿ, ಹಣ ಪಾವತಿ ಸೇರಿದಂತೆ ಹಲವು ಸೇವೆಗಳು ಲಭ್ಯವಾಗಲಿವೆ. ಎಲೆಕ್ಟ್ರಿಕ್ ವಾಹನ (ಇವಿ) ಬಳಕೆದಾರರಿಗೆ ಚಾರ್ಜಿಂಗ್ ಕೇಂದ್ರಗಳ ಮಾಹಿತಿ, ಹಣ ಪಾವತಿ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸುತ್ತಿರುವ ಬೆಸ್ಕಾಂನ ಇವಿ ಮಿತ್ರ ಆಯಪ್ ಈಗ ಹೊಸ ರೂಪದಲ್ಲಿ ಗ್ರಾಹಕರಿಗೆ ಲಭ್ಯವಾಗುತ್ತಿದೆ.

ಆಂಡ್ರಾಯ್ಡ್ ಮತ್ತು ಐಒಎಸ್ ಎರಡು ಅಪ್ಲಿಕೇಶನ್‌ಗಳಲ್ಲಿ ಲಭ್ಯವಿರುವ ಹೊಸ ಇವಿ ಮಿತ್ರ ಆ್ಯಪ್ , ಬಳಕೆದಾರರ ಪ್ರೊಫೈಲ್ ನಿರ್ವಹಣೆ, ಚಾರ್ಜಿಂಗ್ ಸ್ಟೇಷನ್‌ಗಳ ವೀಕ್ಷಣೆಯೊಂದಿಗೆ ಮಾಹಿತಿ, ಚಾರ್ಜಿಂಗ್ ಪ್ರಕ್ರಿಯೆ, ಬುಕ್ಕಿಂಗ್ ವಿವರ, ಚಾರ್ಜಿಂಗ್ ಸ್ಟೇಷನ್‌ಗಳಲ್ಲಿರುವ ಸೌಕರ್ಯಗಳು ಮತ್ತು ಚಾರ್ಜಿಂಗ್ ಕಾಯ್ದಿರಿಸುವ ಸೌಲಭ್ಯ ಹೊಂದಿದೆ.

ಗ್ರಾಹಕರು ಹಳೆಯ ಇವಿ ಮಿತ್ರ ಆ್ಯಪ್ ಡಿಲೀಟ್ ಮಾಡಿ https://play.google.com/store/apps/details?id=com.bes-com.evmithra... ಲಿಂಕ್ ಮೂಲಕ ಹೊಸ ಆಯಪ್ ಡೌನ್‌ಲೋಡ್ ಮಾಡಿಕೊಳ್ಳಬೇಕು. ವ್ಯಾಲೆಟ್ ನಲ್ಲಿ ಹಣ ಉಳಿದಿದ್ದರೂ ಚಿಂತಿಸಬೇಕಿಲ್ಲ. ಹೊಸ ಆಯಪ್‌ಗೆ ಆ ಹಣ ವರ್ಗಾವಣೆಯಾಗುತ್ತದೆ.

ಕನ್ನಡ, ಇಂಗ್ಲಿಷ್, ಹಿಂದಿ ಹಾಗೂ ಪ್ರಾದೇಶಿಕ ಭಾಷೆಗಳು ಸೇರಿದಂತೆ 11 ಭಾಷೆಗಳಲ್ಲಿ ಇವಿ ಚಾರ್ಜಿಂಗ್ ಮಾಹಿತಿ ಲಭ್ಯವಿದ್ದು, ಹಣ ಪಾವತಿಗೆ ಹಲವು ಆಯ್ಕೆಗಳೂ ಇವೆ. ರಿಟೇಲ್ ಬಳಕೆದಾರರ ಶುಲ್ಕದ ವಿವರ, ಬಿಲ್ಲಿಂಗ್, ಪ್ರೊಫೈಲ್ ಇರುತ್ತದೆ.

- ಆಯಪ್ ಡೌನ್ಲೋಡ್ ಮಾಡಿದ ನಂತರ ನಿಮ್ಮ ಫೋನ್ ನಂಬರ್ ನಮೂದಿಸಿ, ಲಾಗಿನ್ ಆಗಿ.- ನಿಮ್ಮ ಮೊಬೈಲ್‌ಗೆ ಬರುವ ಒಟಿಪಿ ಸಂಖ್ಯೆ ದಾಖಲಿಸಿದ ನಂತರ, ಲಾಗಿನ್ ಖಚಿತವಾಗುತ್ತದೆ.- ಖಾಸಗಿ ಹಾಗೂ ವಾಣಿಜ್ಯ ಬಳಕೆ ದಾರರು ಈ ಒಂದೇ ಆಯಪ್ ಮೂಲಕ ಚಾರ್ಜಿಂಗ್ ಸೌಲಭ್ಯ ಪಡೆಯ ಬಹುದು.- ಮ್ಯಾಪ್ ಮೂಲಕ ಚಾರ್ಜಿಂಗ್ ಕೇಂದ್ರಗಳ ಮಾಹಿತಿ ತಿಳಿದುಕೊಳ್ಳಬಹುದು.

# ರೈಲುಗಳ ಮಾರ್ಗ ಬದಲಾವಣೆ, ಸಂಚಾರ ರದ್ದು

• ಉದಯವಾಹಿನಿ, ಬೆಂಗಳೂರು

ರೈಲ್ವೆ ಪ್ರಯಾಣಿಕರಿಗೆ ಮಹತ್ವದ ಮಾಹಿತಿ ಎನ್ನುವಂತೆ ನೈರುತ್ಯ ರೈಲ್ವೆಯಿಂದ ಕೆಲ ರೈಲುಗಳ ಸಂಚಾರದಲ್ಲಿ ಬದಲಾವಣೆ ಮಾಡಲಾಗಿದ್ದರೇ, ಮತ್ತೆ ಕೆಲ ರೈಲುಗಳ ಸಂಚಾರವನ್ನು ರದ್ದುಗೊಳಿಸಿರುವುದಾಗಿ ತಿಳಿಸಿದೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆಯಲ್ಲಿ ನೈರುತ್ಯ ರೈಲ್ವೆಯ ಬೆಂಗಳೂರು ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಪ್ರಾಣೇಶ್ ಕೆ.ಎನ್ ಅವರು ಮಾಹಿತಿ ನೀಡಿದ್ದಾರೆ.

ಗುಂಟೂರು-ನಂದ್ಯಾಲ ವಿಭಾಗದಲ್ಲಿ ಗಿದ್ದಲೂರು-ದಿಗುವಮೆಟ್ಟ ಜೋಡಿಮಾರ್ಗ ಕಾಮಗಾರಿ ನಡೆಯುವ ಕಾರಣ ದಕ್ಷಿಣ ಮಧ್ಯ ರೈಲ್ವೆಯು ಈ ಕೆಳಗಿನ ರೈಲುಗಳ ಮಾರ್ಗ ಬದಲಾವಣೆ /ಭಾಗಶಃ ರದ್ದತಿಗೆ ಸೂಚನೆ ನೀಡಿದೆ: ದಿನಾಂಕ 18.09.2024 ರಂದು ಹೊರಡುವ ರೈಲು ಸಂಖ್ಯೆ 22831 ಹೌರಾ ಶ್ರೀ ಸತ್ಯ ಸಾಯಿ ಪ್ರಶಾಂತಿ ನಿಲಯಂ ರೈಲು ಸೇವೆಯನ್ನು ಧರ್ಮಾವರಂ ಶ್ರೀ ಸತ್ಯ ಸಾಯಿ ಪ್ರಶಾಂತಿ ನಿಲಯಂ ನಡುವೆ ಭಾಗಶಃ ರದ್ದುಗೊಳಿಸಲಾಗಿದ್ದು, ಈ ರೈಲು ಕೃಷ್ಣ ಕೆನಾಲ್, ಗೂಡೂರ್, ರೇಣಿಗುಂಟ, ತಿರುಪತಿ, ಪಾಕಾಲ ಮತ್ತು ಧರ್ಮಾವರಂ ಮಾರ್ಗದ ಮೂಲಕ ಸಂಚರಿಸಲಿರುವುದರಿಂದ ಗುಂಟೂರು, ನರಸರಾವ್ ಪೇಟ, ಮಾರ್ಕಾಪೂರ್ ರೋಡ್, ಗಿದ್ದಲೂರ್, ನಂದ್ಯಾಲ, ಡೋನ್, ಗುತ್ತಿ, ಅನಂತಪುರ್, ಶ್ರೀ ಸತ್ಯ ಸಾಯಿ ಪ್ರಶಾಂತಿ ನಿಲಯಂ ನಿಲ್ದಾಣಗಳಲ್ಲಿ ನಿಲುಗಡೆ ಇರುವುದಿಲ್ಲ. ದಿನಾಂಕ 09.2024 ರಂದು ಹೊರಡುವ ರೈಲು ಸಂಖ್ಯೆ 22832 ಶ್ರೀ ಸತ್ಯ ಸಾಯಿ ಪ್ರಶಾಂತಿ ನಿಲಯಂ- ಹೌರಾ ರೈಲು ಸೇವೆಯನ್ನು ಶ್ರೀ ಸತ್ಯ ಸಾಯಿ ಪ್ರಶಾಂತಿ ನಿಲಯಂ ಮತ್ತು ಧರ್ಮಾವರಂ ನಡುವೆ ಭಾಗಶಃ ರದ್ದುಗೊಳಿಸಲಾಗಿದ್ದು, ಧರ್ಮಾವರಂ, ಪಾಕಾಲ, ತಿರುಪತಿ, ರೇಣಿಗುಂಟಾ, ಗುಡೂರು ಮತ್ತು ಕೃಷ್ಣಾ ಕೆನಾಲ್ ಮಾರ್ಗದ ಮೂಲಕ ಸಂಚರಿಸಲಿರುವುದರಿಂದ ಶ್ರೀ ಸತ್ಯ ಸಾಯಿ ಪ್ರಶಾಂತಿ ನಿಲಯಂ, ಅನಂತಪುರ್, ಗುತ್ತಿ, ಡೋನ್, ಗಿದ್ದಲೂರ್, ಮಾರ್ಕಾಪೂರ್ ರೋಡ್, ನರಸರಾವ್ ಪೇಟ ಮತ್ತು ಗುಂಟೂರು ನಿಲ್ದಾಣಗಳಲ್ಲಿ ನಿಲುಗಡೆ ಇರುವುದಿಲ್ಲ.



# ನಗರದಲ್ಲಿ ರಸ್ತೆ ಗುಂಡಿ ಮುಚ್ಚಲು ಜೆಟ್ ಪ್ಯಾಚರ್ ಯಂತ್ರ

• ಉದಯವಾಹಿನಿ, ಬೆಂಗಳೂರು

ರಾಜರಾಜೇಶ್ವರಿ ನಗರ ವಲಯ ವ್ಯಾಪ್ತಿಯಲ್ಲಿ ಪ್ರಾಯೋಗಿಕವಾಗಿ ಜೆಟ್ ಪ್ಯಾಚರ್ ಯಂತ್ರದ ಮೂಲಕ ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ ಎಂದು ವಲಯ ಜಂಟಿ ಆಯುಕ್ತರಾದ ಅಜಯ್ ರವರು ತಿಳಿಸಿದರು.

ನಗರದ ಆರ್.ಆರ್ ನಗರ ವಲಯ ಪಂತರಪಾಳ್ಯ - ನಾಯಂಡಹಳ್ಳಿ ಮೆಟ್ರೋ ನಿಲ್ದಾಣದ ಬಳಿ ರಸ್ತೆ ಗುಂಡಿ ಪರಿಶೀಲನೆಯ ಬಳಿಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಬಿಎಂಪಿ ವ್ಯಾಪ್ತಿಯ ಆರ್.ಆರ್ ನಗರ ವಲಯ ವ್ಯಾಪ್ತಿಯಲ್ಲಿ ಜೆಟ್ ಪ್ಯಾಚರ್ ಯಂತ್ರದ ಮೂಲಕ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ನಡೆಯುತ್ತಿದೆ. ಇದರಿಂದ ತ್ವರಿತಗತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಬಹುದಾಗಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

**ರಾಜರಾಜೇಶ್ವರಿ ನಗರ ವಲಯ ಪ್ರಮುಖ ಅಂಶಗಳು**

- ವಿಧಾನಸಭಾ ಕ್ಷೇತ್ರಗಳ ಸಂಖ್ಯೆ: 02
- ವಾರ್ಡ್ ಗಳ ಸಂಖ್ಯೆ: 20
- ರಾಜರಾಜೇಶ್ವರಿ ನಗರ ವಲಯದ ಒಟ್ಟು ವಿಸ್ತೀರ್ಣ: 112.01 ಚ.ಕಿ.ಮೀಟರ್
- ವಾರ್ಡ್ ರಸ್ತೆಗಳ ಸಂಖ್ಯೆ: 11367
- ವಾರ್ಡ್ ರಸ್ತೆಗಳ ಉದ್ದ: 1829.44 ಕಿ.ಮೀ
- ಪ್ರಮುಖ ರಸ್ತೆಗಳ ಸಂಖ್ಯೆ: 44
- ಪ್ರಮುಖ ರಸ್ತೆಗಳ ಉದ್ದ: 216.45
- ವಲಯ ವ್ಯಾಪ್ತಿಯ ರಸ್ತೆಗಳ ಒಟ್ಟು ಉದ್ದ: 2045.89 ಕಿ.ಮೀ

ಜೆಟ್ ಪ್ಯಾಚರ್ ಯಂತ್ರದ ಮೂಲಕ ಪ್ರಮುಖ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಶೀಘ್ರಗತಿಯಲ್ಲಿ ಮುಚ್ಚಬಹುದಾಗಿದೆ. ಈ ಯಂತ್ರದಲ್ಲಿ ಒಂದು ಬಾರಿಗೆ 150 ರಿಂದ 180 ಚ.ಮೀ ಅಗಲದ ರಸ್ತೆ ಗುಂಡಿಗಳನ್ನು ಮುಚ್ಚಬಹುದಾಗಿದ್ದು, ರಸ್ತೆ ಗುಂಡಿ ಮುಚ್ಚಿದ ಕೂಡಲೆ ವಾಹನಗಳು ಅದರ ಮೇಲೆ ಸರಾಗವಾಗಿ ಸಂಚಾರ ಮಾಡಬಹುದಾಗಿರುತ್ತದೆ ಎಂದು ತಿಳಿಸಿದರು. ಆರ್.ಆರ್ ನಗರ ವಲಯದಲ್ಲಿ ಸಂಪೂರ್ಣ ರಸ್ತೆ ಹಾಳಾಗಿರುವುದನ್ನು ಹೊರತುಪಡಿಸಿ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ತ್ವರಿತವಾಗಿ ಮುಚ್ಚಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಹಗಲು-ರಾತ್ರಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿದ್ದು, ಕಾಲಮಿತಿಯೊಳಗಾಗಿ ಗುಂಡಿಗಳನ್ನು ಮುಚ್ಚಲಾಗುವುದೆಂದು ತಿಳಿಸಿದರು. ವಲಯ ವ್ಯಾಪ್ತಿಯಲ್ಲಿ ಬರುವ 20 ವಾರ್ಡ್‌ಗಳಲ್ಲಿ ಅಭಿಯಂತರರು 20ನೇ ಮೇ 2024 ರಿಂದ ಇದುವರೆಗೆ 2443 ರಸ್ತೆಗುಂಡಿಗಳನ್ನು ಗುರುತಿಸಿದ್ದು, ಅದರಲ್ಲಿ 2408 ರಸ್ತೆಗುಂಡಿಗಳನ್ನು ಈಗಾಗಲೇ ಮುಚ್ಚಲಾಗಿದ್ದು, 35 ರಸ್ತೆಗುಂಡಿಗಳನ್ನು ಮುಚ್ಚುವ ಕಾರ್ಯ ಪ್ರಗತಿಯಲ್ಲಿದೆ ಎಂದು ಹೇಳಿದರು. ಇನ್ನು ರಸ್ತೆ ಗುಂಡಿ ಗಮನ ತಂತ್ರಾಂಶದಲ್ಲಿ ಸಾರ್ವಜನಿಕರಿಂದ 461 ದೂರುಗಳು ದಾಖಲಾಗಿದ್ದು, ಅದರಲ್ಲಿ 86 ರಸ್ತೆ ಗುಂಡಿಗಳನ್ನು ಮುಚ್ಚಲಾಗಿದ್ದು, 302 ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯವನ್ನು ಶೀಘ್ರ ಮುಗಿಸಲಾಗುವುದೆಂದು ತಿಳಿಸಿದರು. ಸ್ಥಳದಲ್ಲಿ ಮುಖ್ಯ ಅಭಿಯಂತರರಾದ ಸ್ವಯಂಪ್ರಭಾ, ಕಾರ್ಯಪಾಲಕ ಅಭಿಯಂತರಾದ ಪಾಪರೆಡ್ಡಿ, ಆರಿಫ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಭಾರತ ವಿರೋಧಿ ಅಮೆರಿಕ ಸಂಸದೆ ಜೊತೆ ರಾಹುಲ್ ಗ್ರೂಪ್ ಫೋಟೋ

## ಭಾರತದ ವಿರುದ್ಧ ಹೇಳಿಕೆ ನೀಡಿರುವ ಇಲ್ಹಾನ್ ಒಮರ್, ರಾಜತಾಂತ್ರಿಕ ಸಮರ ಏರ್ಪಟ್ಟ ಸಂದರ್ಭದಲ್ಲೂ ಭಾರತ ವಿರೋಧಿ ಹೇಳಿಕೆ



ಯಾರೀಕೆ ಇಲ್ಹಾನ್ ಒಮರ್?

**ಅಮೆರಿಕ:** ತಮ್ಮ ಭಾರತ ವಿರೋಧಿ ನಿಲುವಿನಿಂದಲೇ ಕುಖ್ಯಾತರಾಗಿರುವ ಅಮೆರಿಕ ಸಂಸದೆ ಇಲ್ಹಾನ್ ಒಮರ್ ಅವರನ್ನ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಭೇಟಿ ಮಾಡಿರೋದು ಭಾರೀ ಚರ್ಚೆಗೆ ಗ್ರಾಸವಾಗಿದೆ. ಭಾರತದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ವಿರುದ್ಧ ಟೀಕಾಪ್ರಕಾರ ನಡೆಸುವ ಸಂಸದೆ ಜೊತೆ ರಾಹುಲ್ ಗಾಂಧಿ ಇರುವ ಫೋಟೋ ಕುರಿತಾಗಿ ಪರ – ವಿರೋಧ ಚರ್ಚೆಗಳು ನಡೆಯುತ್ತಿವೆ.

ಅಮೆರಿಕ ಪ್ರವಾಸದಲ್ಲಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಅಮೆರಿಕದ ಸಂಸದರಾದ ಬ್ರಾಡ್ಲಿ ಜೇಮ್ಸ್ ಶೆರ್ಮನ್, ಜೊನಾಥನ್ ಜಾಕ್ಸನ್, ರೋ ಖನ್ನಾ, ರಾಜಾ ಕೃಷ್ಣಮೂರ್ತಿ, ಬಾರ್ಬರಾ ಲೀ, ತಾನೆದಾರ್, ಜೆಸಸ್ ಜಿಚುಯ್ ಗಾರ್ಸಿಯಾ, ಹ್ಯಾಂಕ್ ಜಾನ್ಸನ್ ಹಾಗೂ ಜಾನ್ ಶಾಕೋವ್ಸ್ಕಿ ಅವರನ್ನು ಭೇಟಿ ಮಾಡಿದ್ದರು. ಇವರ ಜೊತೆಗೆ ಇಲ್ಹಾನ್ ಒಮರ್ ಅವರೂ ಇದ್ದರು. ಈ ಗ್ರೂಪ್ ಫೋಟೋವನ್ನು ಕಾಂಗ್ರೆಸ್ ಪಕ್ಷ ತನ್ನ ಪರಿಶೀಲಿಸಿದ ಎಕ್ಸ್ ಖಾತೆಯಲ್ಲಿ ಹಾಕಿಕೊಂಡಿದೆ.

ಮಾತ್ರವಲ್ಲ, ಮಿನ್ನೆಸೋಟಾ ಪ್ರಾಂತ್ಯವನ್ನು ಪ್ರತಿನಿಧಿಸುತ್ತಿರುವ ಮೊದಲ ಕಪ್ಪು ವರ್ಣೀಯ ಮಹಿಳೆ, ಅಮೆರಿಕ ಕಾಂಗ್ರೆಸ್‌ಗೆ ಆಯ್ಕೆಯಾದ ಮೊದಲ ಮುಸ್ಲಿಂ – ಅಮೆರಿಕನ್ ಮಹಿಳೆ ಎಂಬ ಹೆಗ್ಗಳಿಕೆ ಯೂ ಇಲ್ಹಾನ್ ಒಮರ್ ಅವರಿಗೆ ಇದೆ. ಆಫ್ರಿಕಾದ ಸೋಮಾಲಿಯಾ ದೇಶದಲ್ಲಿ ಜನಿಸಿದ ಇಲ್ಹಾನ್ ಒಮರ್ ಅವರ ಕುಟುಂಬಸ್ಥರು, ಅಲ್ಲಿ ಅಂತರ್ಯುದ್ಧ ಆರಂಭವಾದ ಹಿನ್ನೆಲೆಯಲ್ಲಿ ದೇಶ ತೊರೆದು ಅಮೆರಿಕಗೆ ನಿರಾಶ್ರಿತರಾಗಿ ಆಶ್ರಯ ಕೋರಿ ವಲಸೆ ಬಂದಿದ್ದರು. ಆಕೆಯ ಕುಟುಂಬ ಅಮೆರಿಕಗೆ ಬಂದಾಗ ಇಲ್ಹಾನ್ ಒಮರ್ ಅವರಿಗೆ ಕೇವಲ 8 ವರ್ಷ ವಯಸ್ಸಾಗಿತ್ತು. ಅಮೆರಿಕಗೆ ಬರುವ ಮುನ್ನ ಕೀನ್ಯಾ ದೇಶದ ನಿರಾಶ್ರಿತರ ಶಿಬಿರಗಳಲ್ಲಿ ಸುಮಾರು 4 ವರ್ಗಳ ಕಾಲ ಇಲ್ಹಾನ್ ಒಮರ್ ಅವರ ಕುಟುಂಬ ಆಶ್ರಯ ಪಡೆದಿತ್ತು. 1990ರ ದಶಕದಲ್ಲಿ ಇಲ್ಹಾನ್ ಒಮರ್ ಕುಟುಂಬ ಅಮೆರಿಕಗೆ ವಲಸೆ ಬಂದಿತ್ತು. 1997ರಲ್ಲಿ ಮಿನ್ನಿಯಾಪೋಲಿಸ್ ನಗರದಲ್ಲಿ ಇವರ ಕುಟುಂಬ ನೆಲೆ ನಿಂತಿತು.

**ಇಲ್ಹಾನ್ ಒಮರ್ ಭಾರತ ವಿರೋಧಿ ನಿಲುವು:** ಭಾರತದ ವಿರುದ್ಧ ಹಲವು ಬಾರಿ ಇಲ್ಹಾನ್ ಒಮರ್ ಹೇಳಿಕೆಗಳನ್ನ ನೀಡಿದ್ದಾರೆ. ಭಾರತ – ಕೆನಡಾ ದೇಶಗಳ ನಡುವೆ ರಾಜತಾಂತ್ರಿಕ ಸಮರ ಏರ್ಪಟ್ಟ ಸಂದರ್ಭದಲ್ಲೂ ಇಲ್ಹಾನ್ ಒಮರ್ ಭಾರತ ವಿರೋಧಿ ಹೇಳಿಕೆ ನೀಡಿದ್ದರು. ಖಲಿಸ್ತಾನ್ ನಾಯಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆ ಪ್ರಕರಣದಲ್ಲಿ ಭಾರತದ ವಿರುದ್ಧ ತನಿಖೆ ನಡೆಸಲು ಅಮೆರಿಕ ದೇಶವು ಕೆನಡಾ ದೇಶಕ್ಕೆ ಸಂಪೂರ್ಣ ಬೆಂಬಲ ನೀಡಬೇಕು ಅನ್ನೋದು ಆಕೆಯ ಆಗ್ರಹ.

2022ರ ಜೂನ್‌ನಲ್ಲಿ ಭಾರತದ ವಿರುದ್ಧ ಅಮೆರಿಕ ಸಂಸತ್‌ನಲ್ಲಿ ಮಾತನಾಡಿದ್ದ ಇಲ್ಹಾನ್ ಒಮರ್, ಭಾರತದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ ಆಗುತ್ತಿದೆ ಎಂದು ದೂಷಿಸಿದ್ದರು. ಅದರಲ್ಲೂ ಮುಸ್ಲಿಮರನ್ನೇ ಗುರಿಯಾಗಿಸಿ ಭಾರತದಲ್ಲಿ ದಾಳಿ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿ ಭಾರತವನ್ನು 'ಕಳವಳ ವ್ಯಕ್ತಪಡಿಸಬೇಕಾದ ದೇಶ' ಎಂಬ ಪಟ್ಟಿಯಲ್ಲಿ ಸೇರಿಸುವಂತೆ ಆಗ್ರಹಿಸಿದ್ದರು.


### ಯಾರಿದು ಇಲ್ಹಾನ್ ಒಮರ್? ಭಾರತದ ನಂಟೇನು?

**ಅಮೆರಿಕದ ಸಂಸತ್ ಸದಸ್ಯೆ ಆಗಿರುವ ಇಲ್ಹಾನ್ ಒಮರ್, ಅಮೆರಿಕದ ಮಿನ್ನೆಸೋಟಾ ರಾಜ್ಯದ 5ನೇ ಕಾಂಗ್ರೆಷನಲ್ ಜಿಲ್ಲೆಯನ್ನು ಪ್ರತಿನಿಧಿಸುತ್ತಾರೆ. ಮಿನ್ನಿಯಾಪೋಲಿಸ್ ಹಾಗೂ ಇನ್ನಿತರ ವಲಯಗಳು ಇವರ ಕ್ಷೇತ್ರದ ವ್ಯಾಪ್ತಿಗೆ ಬರುತ್ತವೆ. 2019ರ ಜನವರಿಯಲ್ಲಿ ಈಕೆ ಆಯ್ಕೆಯಾದರು. ಅಮೆರಿಕಗೆ ಆಫ್ರಿಕಾಗೆ ವಲಸೆ ಬಂದ ನಿರಾಶ್ರಿತರ ಪೈಕಿ ಸಂಸದೆಯಾಗಿ ಆಯ್ಕೆಯಾದ ಮೊದಲ ಮಹಿಳೆ ಎಂಬ ಹೆಗ್ಗಳಿಕೆಗೂ ಇವರು ಪಾತ್ರರಾಗಿದ್ದಾರೆ.**

### ಭಾರೀ ಚರ್ಚೆ ಗ್ರಾಸ

**ಇಲ್ಹಾನ್ ಒಮರ್.. ಆಫ್ರಿಕಾ ರಾಷ್ಟ್ರಗಳಿಂದ ನಿರಾಶ್ರಿತರಾಗಿ ಬಂದು ಅಮೆರಿಕದಲ್ಲಿ ರಾಜಕೀಯವಾಗಿ ಬೆಳೆದ ಈಕೆ, ತನ್ನ ಭಾರತ ವಿರೋಧಿ ನಿಲುವುಗಳಿಂದಲೇ ಕುಖ್ಯಾತಿ ಗಳಿಸಿದ್ದಾರೆ. ಖಲಿಸ್ತಾನಿ ಉಗ್ರ ನಿಜ್ಜರ್ ಹತ್ಯೆ ಪ್ರಕರಣ ಸೇರಿದಂತೆ ಹಲವು ವಿಚಾರಗಳಲ್ಲಿ ಭಾರತದ ವಿರುದ್ಧ ವಾಗ್ದಾಳಿ ನಡೆಸಿದ್ದ ಈಕೆಯನ್ನು ರಾಹುಲ್ ಗಾಂಧಿ ಅವರು ತಮ್ಮ ಅಮೆರಿಕ ಪ್ರವಾಸದ ವೇಳೆ ಭೇಟಿ ಮಾಡಿರೋದು ಇದೀಗ ಭಾರೀ ಚರ್ಚೆ ಗ್ರಾಸವಾಗಿದೆ.**

# ಜರ್ಮನ್ ಅಧಿಕಾರಿಗಳೊಂದಿಗೆ ಜೈಶಂಕರ್ ಮಾತುಕತೆ



**ಬರ್ಲಿನ್:** ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಅವರು ಜರ್ಮನ್ ಸಂಸತ್ತಿನ ವಿದೇಶಾಂಗ ವ್ಯವಹಾರಗಳ ಸಮಿತಿಯ ಅಧ್ಯಕ್ಷ ಮೈಕೆಲ್ ರಾತ್ ಅವರನ್ನು ಭೇಟಿ ಮಾಡಿದ್ದಾರೆ, ಪ್ರಸ್ತುತ ಜಾಗತಿಕ ಸವಾಲುಗಳು ಮತ್ತು ಹೊಸ ದ್ವಿಪಕ್ಷೀಯ ಸಹಯೋಗದ ಸಾಧ್ಯತೆಗಳ ಬಗ್ಗೆ ಚರ್ಚಿಸಿದ್ದಾರೆ.

ಜೈಶಂಕರ್ ಅವರು ತಮ ಮೂರು ರಾಷ್ಟ್ರಗಳ ಪ್ರವಾಸದ ಎರಡನೇ ಹಂತದಲ್ಲಿ ಜರ್ಮನಿಯಲ್ಲಿದ್ದಾರೆ. ಅವರು ಸೌದಿ ಅರೇಬಿಯಾದಿಂದ ಇಲ್ಲಿಗೆ ಬಂದರು, ಮೊದಲ ಭಾರತ-ಗಲ್ಫ್ ಸಹಕಾರ ಮಂಡಳಿಯ ಕಾರ್ಯತಂತ್ರದ ಮಾತುಕತೆಗಾಗಿ ಸಚಿವರ ಸಭೆಯಲ್ಲಿ ಭಾಗವಹಿಸಿದರು.

ಬರ್ಲಿನ್‌ನಲ್ಲಿ ಮ್ಯೂನಿಚ್ ಭದ್ರತಾ ಸಮ್ಮೇಳನ ಆಯೋಜಿಸಿದ್ದ ವಿದೇಶಾಂಗ ವ್ಯವಹಾರಗಳು, ಭದ್ರತಾ ನೀತಿ ತಜ್ಞರೊಂದಿಗೆ ಉತ್ಸಾಹಭರಿತ ಸಂವಾದ ನಡೆಸಿದರು. ಬದಲಾಗುತ್ತಿರುವ ಜಾಗತಿಕ ಕ್ರಮ, ಬಹುಧ್ರುವೀಯತೆ, ಭದ್ರತಾ ಸವಾಲುಗಳು ಮತ್ತು ಭಾರತ ಮತ್ತು ಜರ್ಮನಿ ನಡುವಿನ ಕಾರ್ಯತಂತ್ರದ ಒಮುಖಗಳ ಕುರಿತು ದಷ್ಟಿಕೋನಗಳನ್ನು ವಿನಿಮಯ ಮಾಡಿಕೊಳ್ಳಲಾಗಿದೆ ಎಂದು ಜೈಶಂಕರ್ ಹೇಳಿದರು. ಜೈಶಂಕರ್ ಅವರು ಬುಂಡೆಸ್ಟಾಗ್ ಎಂದು ಕರೆಯಲ್ಪಡುವ ಜರ್ಮನ್ ಸಂಸತ್ತಿನ ಸದಸ್ಯರೊಂದಿಗೆ ಸಂವಾದ ನಡೆಸಿದರು. ಸಮಕಾಲೀನ ಜಾಗತಿಕ ಸಮಸ್ಯೆಗಳ ಕುರಿತು ಅವರ ಒಳನೋಟಗಳನ್ನು ಶ್ಲಾಘಿಸಿದರು.

ಬಲವಾದ ಭಾರತ–ಜರ್ಮನಿ ಸಂಬಂಧಗಳಿಗೆ ಅವರ ಬೆಂಬಲವನ್ನು ಗೌರವಿಸಿ ಎಂದು ಅವರು ಹೇಳಿದರು. ಹಿಂದಿನ ದಿನ, ಜೈಶಂಕರ್ ಅವರು ತಮ ಜರ್ಮನಿಯ ಸಹವರ್ತಿ ಅನ್ನಾಲೆನಾ ಬೇರ್‌ಬಾಕ್ ಅವರೊಂದಿಗೆ ವ್ಯಾಪಕವಾದ ಚರ್ಚೆಗಳನ್ನು ನಡೆಸಿದರು ಮತ್ತು ವ್ಯಾಪಾರ, ರಕ್ಷಣೆ ಮತ್ತು ಭದ್ರತೆಯಂತಹ ಕ್ಷೇತ್ರಗಳನ್ನು ಒಳಗೊಂಡ ಭಾರತ-ಜರ್ಮನಿ ಕಾರ್ಯತಂತ್ರದ ಸಹಭಾಗಿತ್ವವನ್ನು ಪರಿಶೀಲಿಸಿದರು.

**ವಿದೇಶಾಂಗ ವ್ಯವಹಾರಗಳ ಬುಂಡೆಸ್ಟಾಗ್ ಸಮಿತಿಯ ಸಂಸದ, ಅಧ್ಯಕ್ಷರಾದ ಮೈಕೆಲ್ ರಾತ್ ಅವರನ್ನು ಭೇಟಿಯಾಗಲು ಸಂತೋಷವಾಗಿದೆ. ಪ್ರಸ್ತುತ ಜಾಗತಿಕ ಸವಾಲುಗಳು, ಭಾರತ ಮತ್ತು ಜರ್ಮನಿ ನಡುವಿನ ಹೊಸ ಸಹಯೋಗದ ಸಾಧ್ಯತೆಗಳ ಕುರಿತು ಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ ಎಂದು ಜೈಶಂಕರ್ ಸಭೆಯ ನಂತರ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.**

# ಇಬ್ಬರು ನೃತ್ಯಗಾರ್ತಿಯರ ಮೇಲೆ ಸಾಮೂಹಿಕ ಅತ್ಯಾಚಾರ



**ಲಖನೌ:** ನೃತ್ಯಗಾರ್ತಿಯರ ಮೇಲೆ ಅತ್ಯಾಚಾರವೆಸಗಿದವರನ್ನ ಉತ್ತರ ಪ್ರದೇಶ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಹುಟ್ಟುಹಬ್ಬದ ಪಾರ್ಟಿಯಲ್ಲಿ ನೃತ್ಯ ಮಾಡಲು ನಿರಾಕರಿಸಿದ ಇಬ್ಬರು ನೃತ್ಯಗಾರ್ತಿಯರ ಮೇಲೆ 8 ಮಂದಿ ಸಾಮೂಹಿಕ ಅತ್ಯಾಚಾರವೆಸಗಿರುವ ಘಟನೆ ಉತ್ತರ ಪ್ರದೇಶದ ಖುಷಿ ನಗರದಲ್ಲಿ ನಡೆದಿದೆ. ಆರೋಪಿಗಳು ಆರ್ಕೆಸ್ಟ್ರಾ ನಡೆಯುತ್ತಿದ್ದ ಸಂದರ್ಭದಲ್ಲಿ ಇಬ್ಬರು ನೃತ್ಯಗಾರ್ತಿಯರನ್ನು ಹಣೆಗೆ ಬಂದೂಕಿಟ್ಟು ಅಪಹರಿಸಿ 10 ಕಿ.ಮೀ ದೂರಕ್ಕೆ ಕರೆದೊಯ್ದಿದ್ದಾರೆ.

ಆರೋಪಿಗಳಲ್ಲಿ ಒಬ್ಬನು ಮನೆಗೆ ಕರೆದೊಯ್ದಿದ್ದಾರೆ, ಬರ್ತ್ ಡೇ ಪಾರ್ಟಿಯಲ್ಲಿ ನೃತ್ಯ ಮಾಡುವಂತೆ ಆ ಇಬ್ಬರು ಯುವತಿಯರ ಬಳಿ ಕೇಳಿದ್ದಾರೆ. ಆದರೆ ಅವರು ನಿರಾಕರಿಸಿದ್ದಕ್ಕೆ ಕುಡಿದ ಮತ್ತಿನಲ್ಲಿ ಇಬ್ಬರ ಮೇಲೆ 8 ಮಂದಿ ಅತ್ಯಾಚಾರವೆಸಗಿದ್ದಾರೆ. ಇದೀಗ ಪೊಲೀಸರು ಅಪರಾಧಕ್ಕೆ ಬಳಸಿದ್ದ ಎರಡು ಎಸ್ಯುವಿ ಕಾರುಗಳನ್ನು ವಶಪಡಿಸಿಕೊಂಡಿದ್ದಾರೆ.

ಎಲ್ಲಾ ಎಂಟು ಆರೋಪಿಗಳ ವಯಸ್ಸು 30 ವರ್ಷಕ್ಕಿಂತ ಕಡಿಮೆ. ಆರೋಪಿಗಳನ್ನು ಖುಷಿನಗರ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಯುವತಿಯರ ವೈದ್ಯಕೀಯ ಪರೀಕ್ಷೆ ನಡೆಸಲಾಗಿದೆ.ಸೆ. 8ರ ರಾತ್ರಿ ಘಟನೆ ಕುರಿತು ಪೊಲೀಸರಿಗೆ ದೂರು ಬಂದಿತ್ತು. ರೋಪಿಗಳನ್ನು ನಾಗೇಂದ್ರ ಯಾದವ್, ಅಸನ್ ಸಿಂಗ್, ಕ್ರಿಶ್ ತಿವಾರಿ, ಅರ್ಥಕ್ ಸಿಂಗ್, ಅಜಿತ್ ಸಿಂಗ್, ವಿವೇಕ್ ಸೇಠ್ ಎಂದು ಗುರುತಿಸಲಾಗಿದೆ.

ಇತರ ಇಬ್ಬರು ಆರೋಪಿಗಳು ನಿಸಾರ್ ಅನ್ಸಾರಿ ಮತ್ತು ಆದಿತ್ಯ ಸಾಹ್ನಿ, ಸೆಪ್ಟೆಂಬರ್ 10 ರಂದು ಪೊಲೀಸರು ನಡೆಸಿದ ಎನ್ಕೌಂಟರ್‌ನಲ್ಲಿ ಸಿಕ್ಕಿಬಿದ್ದಿದ್ದರು. ಇಬ್ಬರ ಕಾಲಿಗೆ ಗುಂಡು ತಗುಲಿದ್ದು, ಪ್ರಥಮ ಚಿಕಿತ್ಸೆ ಬಳಿಕ ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ. ವಿಚಾರಣೆ ವೇಳೆ ಆರೋಪಿಗಳು ತಮ್ಮ ಎಲ್ಲಾ ಮಾಹಿತಿಯನ್ನು ಬಹಿರಂಗಪಡಿಸಿದ್ದಾರೆ.

# ವೈದ್ಯರ ಪ್ರತಿಭಟನೆ: ರೋಗಿಗಳ ಪರದಾಟ




**ಕೋಲ್ಕತ್ತಾ:** ಪಶ್ಚಿಮ ಬಂಗಾಳದಲ್ಲಿ ಕಿರಿಯ ವೈದ್ಯೆಯ ಮೇಲಿನ ಅತ್ಯಾಚಾರ, ಹತ್ಯೆ ವಿರೋಧಿಸಿ ವೈದ್ಯರು ಪ್ರತಿಭಟನೆ ನಡೆಸುತ್ತಿರುವ ಹಿನ್ನೆಲೆಯಲ್ಲಿ ಆಸ್ಪತ್ರೆಗಳಲ್ಲಿ ಕಿರಿಯ ವೈದ್ಯರ ಅನುಪಸ್ಥಿತಿಯಿಂದ ಆರೋಗ್ಯ ಸೇವೆಗಳ ಮೇಲೆ ಪರಿಣಾಮ ಬೀರಿದೆ. ಇದರಿಂದ ಸೂಕ್ತ ಸಮುದಲ್ಲಿ ಚಿಕಿತ್ಸೆ ದೊರೆಯದೆ ರಾಜ್ಯಾದ್ಯಂತ ಹಲವು ಮಂದಿ ಸಾವನ್ನಪ್ಪಿರುವ ಘಟನೆ ನಡೆದಿದೆ. ಈ ನಡುವೆ. ವೈದ್ಯೆಯ ಹತ್ಯೆಗೆ ನ್ಯಾಯ ಸಿಗುವ ತನಕ ಹೋರಾಟ ನಡೆಯಲಿದೆ ಎಂದು ವೈದ್ಯರು ಪಟ್ಟು ಹಿಡಿದಿದ್ದಾರೆ.

ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಸೇರಿದಂತೆ ಅನೇಕ ಸರ್ಕಾರಿ ಆಸ್ಪತ್ರೆಗಳಿಂದ 11 ದಿನಗಳ ನಂತರ ಖಾಸಗಿ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ ವರದಿಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿವೆ. ಕೋಲ್ಕತ್ತಾ, ವೈದ್ಯಾಧಿಕಾರಿಗಳ ನಡೆಯುತ್ತಿರುವ ಪ್ರತಿಭಟನೆಯಿಂದಾಗಿ. ಅಪಘಾತಕ್ಕೀಡಾದ ಹೂಗ್ಲಿ ನಿವಾಸಿ ಸದಾನಂದ ಪಾಲ್ (63) ಅವರು ಬರಾ ಸತ್‌ನ ಖಾಸಗಿ ಆಸ್ಪತ್ರೆಯಲ್ಲಿ ನರಶಸ್ತ್ರಚಿಕಿತ್ಸೆಗೆ ಒಳಗಾದ ಕೆಲವು ದಿನಗಳ ನಂತರ ಆಗಸ್ಟ್ 29 ರಂದು ನಿಧನರಾಗಿದ್ದಾರೆ. ವೈದ್ಯರ ಪ್ರತಿಭಟನೆಯಿಂದ ದಿನದಿಂದ ದಿನಕ್ಕೆ ಸಾವುಗಳ ಸಂಖ್ಯೆ ಹೆಚ್ಚಾಗುತ್ತಿದೆ. ಇದು ನೋವಿನ ಸಂಗತಿ. ಹರಿಪಾಲ್‌ನ ವ್ಯಕ್ತಿಯೊಬ್ಬರು ಚಿಕಿತ್ಸೆ ನಿರಾಕರಿಸಿದ ನಂತರ ಪ್ರಾಣ ಕಳೆದುಕೊಂಡಿದ್ದಾರೆ ಎಂದು ತೃಣಮೂಲ ಕಾಂಗ್ರೆಸ್ ಹೇಳಿದೆ. ಕಿರಿಯ ವೈದ್ಯರ ಗೈರುಹಾಜರಿಯಿಂದ ಹಿರಿಯ ವೈದ್ಯರ ಮೇಲೆ ಒತ್ತಡ ಉಂಟುಮಾಡುತ್ತದೆ, ಎಲ್ಲರಿಗೂ ಉತ್ತಮ ಸೇವೆ ನೀಡಲು ಸಾಧ್ಯವಾಗುತ್ತಿಲ್ಲ. ಆರಂಭದಲ್ಲಿ ರೋಗಿಗಳ ಸಂಖ್ಯೆ ಇಳಿಮುಖವಾಗಿದ್ದರೂ, ಪ್ರಸ್ತುತ ಸಂಖ್ಯೆ ಸಾಮಾನ್ಯವಾಗಿದೆ. ರೋಗಿಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ರೋಗಿಗಳು ಸಾರ್ವಕಾಲಿಕ ಸೇವೆಗಳನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಪ್ರತಿ ವಿಭಾಗದಲ್ಲಿ ಹಿರಿಯ ವೈದ್ಯರ ರೋಸ್ಟರ್‌ಗಳನ್ನು ಮರುರೂಪಿಸಲಾಗಿದೆ.

# ಮೋದಿ ವಿದೇಶಾಂಗ ನೀತಿಗೆ ರಾಹುಲ್ ಬೆಂಬಲ



**ವಾಷಿಂಗ್ಟನ್:** ಅಮೆರಿಕದೊಂದಿಗಿನ ಸಂಬಂಧ, ಹರಿವಿನ ಹೊರತು ಪಾಕಿಸ್ತಾನದ ಜತೆ ಮಾತುಕತೆಯಂತಹ ಪ್ರಮುಖ ವಿದೇಶಾಂಗ ನೀತಿ ವಿಷಯಗಳಲ್ಲಿ ಕಾಂಗ್ರೆಸ್ ಪಕ್ಷವು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಆಡಳಿತಾರೂಢ ಬಿಜೆಪಿಯೊಂದಿಗೆ ಹೊಂದಾಣಿಕೆ ಮಾಡಿಕೊಂಡಿದೆ ಎಂದು ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಭಯೋತ್ಪಾದನೆಯನ್ನು ನಿಲ್ಲಿಸಲಾಗಿದೆ, ಬಾಂಗ್ಲಾದೇಶ ಮತ್ತು ಇಸ್ರೇಲ್‌ನಲ್ಲಿ ಉಗ್ರಗಾಮಿ ಅಂಶಗಳ ಬಗ್ಗೆ ಕಾಳಜಿ ಇದೆ ಎಂದಿರುವ ಅವರು, ಚೀನಾದ ಕುರಿತ ಮೋದಿಯವರ ನೀತಿಗಳೊಂದಿಗೆ ಹೊಂದಿಕೆಯಾಗಲಿಲ್ಲ, ಏಕೆಂದರೆ ದೆಹಲಿ ಗಾತ್ರದ ಲಡಾಖ್‌ನಲ್ಲಿರುವ ಭಾರತೀಯ ಭೂಪ್ರದೇಶವನ್ನು ಚೀನಾದ ಪಡೆಗಳು ನಿಯಂತ್ರಣಕ್ಕೆ ತೆಗೆದು ಕೊಂಡಿವೆ ಎಂದು ಆರೋಪಿಸಿದರು. ಇಲ್ಲಿನ ಪ್ರತಿಷ್ಠಿತ ನ್ಯಾಷನಲ್ ಪ್ರೆಸ್ ಕ್ಲಬ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಪಾಕಿಸ್ತಾನ ಕುರಿತ ಮೋದಿ ನೀತಿಗಳನ್ನು ಬೆಂಬಲಿಸಿದರು.

ಕಾಶೀರ ಸಮಸ್ಯೆಯು ದಕ್ಷಿಣ ಏಷ್ಯಾದ ಎರಡು ರಾಷ್ಟ್ರಗಳನ್ನು ಮಾತುಕತೆಯಿಂದ ದೂರವಿಡುತ್ತಿದೆಯೇ ಎಂದು ಕೇಳಿದಾಗ ಅವರು ಇಲ್ಲ ಎಂದು ಹೇಳಿದರು.ಭಾರತ–ಅಮೆರಿಕ ಸಂಬಂಧದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಗಾಂಧಿ, ಎರಡೂ ದೇಶಗಳಲ್ಲಿ ಉಭಯಪಕ್ಷೀಯ ಬೆಂಬಲವಿದೆ ಎಂದು ಗಮನಿಸಿದರು. ನಾನು ದೊಡ್ಡ ತಿರುವು ಕಾಣುತ್ತಿಲ್ಲ. ಮೋದಿಯವರು ಅಮೆರಿಕದೊಂದಿಗಿನ ನಮ ವರ್ತನೆಯಿಂದ ಹೆಚ್ಚು ದೂರ ಸರಿಯುತ್ತಿರುವುದನ್ನು ನಾನು ನೋಡುತ್ತಿಲ್ಲ. ಅವರು ಮಾಡುತ್ತಿರುವ ಕೆಲಸದಿಂದ ನಾವೇ ದಿಕ್ಕನ್ನು ಬದಲಾಯಿಸುವುದನ್ನು ನಾನು ನೋಡುತ್ತಿಲ್ಲ. ಹಾಗಾಗಿ ಅಲ್ಲಿ ನಾನು ನಿರಂತರತೆಯನ್ನು ನೋಡುತ್ತೇನೆ ಎಂದರು. ಭಾರತ– ಅಮೆರಿಕ ಸಂಬಂಧವು ಎರಡೂ ದೇಶಗಳಿಗೆ ಪ್ರಮುಖವಾಗಿದೆ ಎಂಬ ಅಂಶವನ್ನು ಎಲ್ಲರೂ ಒಪ್ಪಿಕೊಳ್ಳುತ್ತಾರೆ ಅದನ್ನು ನಾನು ಒಪ್ಪುತ್ತೇನೆ ಎಂದು ಅವರು ಹೇಳಿದರು.

**ನಮ ದೇಶದಲ್ಲಿ ಪಾಕಿಸ್ತಾನದ ಭಯೋತ್ಪಾದನೆಯ ಪ್ರಚೋದನೆಯು ಎರಡು ದೇಶಗಳನ್ನು ಹಿಡಿದಿಟ್ಟುಕೊಳ್ಳುತ್ತಿದೆ. ನಮ ದೇಶದಲ್ಲಿ ಪಾಕಿಸ್ತಾನವು ಭಯೋತ್ಪಾದಕ ಕೃತ್ಯಗಳನ್ನು ನಡೆಸುವುದನ್ನು ನಾವು ಒಪ್ಪುವುದಿಲ್ಲ. ನಾವು ಅದನ್ನು ಒಪ್ಪಿಕೊಳ್ಳಲೂ ಹೋಗುವುದಿಲ್ಲ. ಮತ್ತು ಅವರು ಅದನ್ನು ಮುಂದುವರಿಸುವವರೆಗೆ, ನಮ ನಡುವೆ ಸಮಸ್ಯೆಗಳಿರುತ್ತವೆ ಎಂದರು.**


# ಮೋದಿ ಟೀಕಿಸಿದ್ದ ಸಚಿವರ ರಾಜೀನಾಮೆ

**ಕೊಲಂಬೋ:** ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿ ವರ್ಷದ ಆರಂಭದಲ್ಲಿ ಅಮಾನತುಗೊಂಡಿದ್ದ ಮಾಲ್ಡೀವ್ ಸರ್ಕಾರದ ಇಬ್ಬರು ಕಿರಿಯ ಸಚಿವರು, ಅಧ್ಯಕ್ಷ ಮೊಹಮ್ಮದ್ ಮಾಯಿ ಅವರ ಭಾರತ ಭೇಟಿಗೆ ಮುಂಚಿತವಾಗಿ ರಾಜೀನಾಮೆ ನೀಡಿದ್ದಾರೆ. ಮಲ್ಶಾ ಶರೀಫ್ ಮತ್ತು ಮರಿಯಮ್ ಶಿಯುನಾ ಅವರು ತಮ್ಮ ಸ್ಥಾನಕ್ಕೆ



ರಾಜೀನಾಮೆ ನೀಡಿದ್ದಾರೆ ಎಂದು ಸರ್ಕಾರಿ ಅಧಿಕಾರಿಯೊಬ್ಬರು ಖಚಿತ ಪಡಿಸಿದ್ದಾರೆ. ಆದರೆ, ಹೆಚ್ಚಿನ ವಿವರಗಳನ್ನು ನೀಡಲು ನಿರಾಕರಿಸಿದ್ದಾರೆ. ಶೀಘ್ರದಲ್ಲೇ ಅಧ್ಯಕ್ಷ ಮುಯಿಝು ಅವರು ನವದೆಹಲಿಗೆ ಭೇಟಿ ನೀಡಲಿದ್ದಾರೆ ಎಂಬ ಸರ್ಕಾರದ ವಕ್ತಾರರೊಬ್ಬರ ಹೇಳಿಕೆ ಉಲ್ಲೇಖಿಸಿ ಮಂಗಳವಾರ ಸ್ಥಳೀಯ ಮಾಧ್ಯಮಗಳು ವರದಿ ಮಾಡಿದ್ದವು. ಇದೇ ವರ್ಷ ಜನವರಿಯಲ್ಲಿ ಲಕ್ಷದ್ವೀಪಕ್ಕೆ ಭೇಟಿ ನೀಡಿದ್ದ ಪ್ರಧಾನಿ ಮೋದಿ ಅವರು ಅಲ್ಲಿ ಕಳೆದ ಕ್ಷಣಗಳ ವಿಡಿಯೊ ಮತ್ತು ಫೋಟೊಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದರು. ಈ ಭೇಟಿಯ ಕುರಿತಂತೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದ ಮಾಲೀವ್ ಸಚಿವರಾದ ಮಲ್ಶಾ ಶರೀಫ್, ಮರಿಯಮ್ ಶಿಯುನಾ, ಮಹಜೂಮ್ ಮಜೀದ್ ಅವರು ಪ್ರಧಾನಿ ಮೋದಿ ಮತ್ತು ಭಾರತವನ್ನು ಕಟುವಾದ ಶಬ್ದಗಳಿಂದ ಟೀಕಿಸಿದ್ದರು. ಹೇಳಿಕೆ ಕುರಿತು ಆಕ್ರೋಶ ಭುಗಿಲೆದ್ದ ಬೆನ್ನಲ್ಲೇ ಮಾಲ್ಡೀವ್ಸ್ ಸರ್ಕಾರ ಮೂವರು ಸಚಿವರನ್ನು ಅಮಾನತುಗೊಳಿಸಿತ್ತು.

# ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಭೇಟಿಯಾದ ಪವನ್; 1 ಕೋಟಿ ಮೊತ್ತದ ಚೆಕ್ ಹಸ್ತಾಂತರ



**ಹೈದರಾಬಾದ್:** ಆಂಧ್ರಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಅವರನ್ನು ಭೇಟಿಯಾಗಿ 1 ಕೋಟಿ ಮೊತ್ತದ ಪರಿಹಾರದ ಚೆಕ್ ಅನ್ನು ಹಸ್ತಾಂತರಿಸಿದ್ದಾರೆ. ಕಳೆದ ಕೆಲವು ದಿನಗಳಿಂದ ಸುರಿದ ಭಾರಿ ಮಳೆಯಿಂದಾಗಿ ಆಂಧ್ರಪ್ರದೇಶ, ತೆಲಂಗಾಣ ತತ್ತರಿಸಿದೆ. ಹಲವೆಡೆ ಪ್ರವಾಹ ಪರಿಸ್ಥಿತಿ ಎದುರಾಗಿದ್ದು, ಅಪಾರ ಪ್ರಮಾಣದ ಆಸ್ತಿ–ಪಾಸ್ತಿ ನಷ್ಟವಾಗಿದೆ.

ಜನರು ಸಾಕಷ್ಟು ತೊಂದರೆಗೆ ಒಳಗಾಗಿದ್ದು, ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ತಂಡಗಳು ಕಾರ್ಯಾಚರಣೆಯಲ್ಲಿ ತೊಡಗಿವೆ. ಅದರಲ್ಲೂ, ಆಂಧ್ರಪ್ರದೇಶದ ವಿಜಯವಾಡ ನಗರ ಹೆಚ್ಚು ಬಾಧಿತವಾಗಿದ್ದು, ಬಹುತೇಕ ನಗರ ಜಲಾವೃತವಾಗಿದ್ದು ಜನರು ಪರಿತಪಿಸುವಂತಾಗಿದೆ. ವಿದ್ಯುತ್ ಪೂರೈಕೆ ಸ್ಥಗಿತಗೊಂಡಿದ್ದರೆ, ಜನರಿಗೆ ಆಹಾರ, ನೀರು, ಔಷಧಿಗಳನ್ನು ಪೂರೈಸುವುದಕ್ಕಾಗಿ ಹೆಲಿಕಾಪ್ಟರ್ ಮತ್ತು ಡ್ರೋನ್‌ಗಳನ್ನು ನಿಯೋಜನೆ ಮಾಡಲಾಗಿದೆ. ತೆಲುಗು ನಟರು ಹಾಗೂ ಇತರರು ಪರಿಹಾರ ನಿಧಿಗೆ ದೇಣಿಗೆ ನೀಡುತ್ತಿದ್ದಾರೆ.

ನಟರಾದ ಚಿರಂಜೀವಿ, ಜೂನಿಯರ್ ಎನ್‌ಟಿಆರ್, ಅಲ್ಲು ಅರ್ಜುನ್, ಮಹೇಶ್‌ಬಾಬು ಅವರು ಆಂಧ್ರಪ್ರದೇಶ ಮತ್ತು ತೆಲಂಗಾಣ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ತಲಾ 50 ಲಕ್ಷ ದೇಣಿಗೆ ನೀಡಿದ್ದಾರೆ.

ಇತ್ತ ಪವನ್ ಕಲ್ಯಾಣ್ ಅವರು ಆಂಧ್ರಪ್ರದೇಶ ಮತ್ತು ತೆಲಂಗಾಣ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ವೈಯಕ್ತಿಕವಾಗಿ 1 ಕೋಟಿ ದೇಣಿಗೆ ನೀಡುವುದಾಗಿ ಘೋಷಿಸಿದ್ದರು. ಜತೆಗೆ ಆಂಧ್ರಪ್ರದೇಶದ 400 ಗ್ರಾಮ ಪಂಚಾಯಿತಿಗಳಿಗೆ ತಲಾ 1 ಲಕ್ಷ ಪರಿಹಾರ ನೀಡುವುದಾಗಿ ಘೋಷಿಸಿದ್ದರು. ಅದರಂತೆ ಪರಿಹಾರದ ಚೆಕ್‌ಗಳನ್ನು ಹಸ್ತಾಂತರಿಸಿದ್ದಾರೆ.

# ನೀರವ್ ಮೋದಿಗೆ ಸೇರಿದ 29.75 ಕೋಟಿ ರೂ. ಸೊತ್ತು ಜಪ್ತಿ ಮಾಡಿದ ಇಡಿ

**ನವದೆಹಲಿ:** ಪಂಜಾಬ್ ನ್ಯಾಷನಲ್ ಬ್ಯಾಂಕ್‌ಗೆ ಕೋಟ್ಯಂತರ ರೂಪಾಯಿ ವಂಚನೆ ಮಾಡಿ ಪಲಾಯನಗೈದು ಸದ್ಯ ಲಂಡನ್ ಜೈಲಿನಲ್ಲಿರುವ ವಾಣಿಜ್ಯೋದ್ಯಮಿ ನೀರವ್ ಮೋದಿಗೆ ಸೇರಿಗೆ 29.75 ಕೋಟಿ ಮೌಲ್ಯದ ಸೊತ್ತುಗಳನ್ನು ಹಣ ಅಕ್ರಮ ವರ್ಗಾವಣೆ ಕಾಯ್ದೆಯಡಿ ಜಾರಿ ನಿರ್ದೇಶನಾಲಯ ಜಪ್ತಿ ಮಾಡಿದೆ. ಬ್ಯಾಂಕ್



ಠೇವಣಿ ಹಾಗೂ ಕಟ್ಟಡ ರೂಪದಲ್ಲಿರುವ ಆಸ್ತಿಗಳನ್ನು ಮುಟ್ಟುಗೋಲು ಹಾಕಲು ಹಣ ಅಕ್ರಮ ವರ್ಗಾವಣೆ ಕಾಯ್ದೆಯಡಿ ತಾತ್ಕಾಲಿಕ ಆದೇಶ ಹೊರಡಿಸಲಾಗಿತ್ತು. ಈಗಾಗಲೇ ದೇಶ ಹಾಗೂ ವಿದೇಶಗಳ ಸೇರಿ ಒಟ್ಟು 2,596 ಕೋಟಿ ಮೌಲ್ಯದ ಸೊತ್ತುಗಳನ್ನು ಇ.ಡಿ ಮುಟ್ಟುಗೋಲು ಹಾಕಿಕೊಂಡಿದೆ. 53 ವರ್ಷದ ನೀರವ್ ಮೋದಿ ಸದ್ಯ ಲಂಡನ್ ಜೈಲಿನಲ್ಲಿದ್ದು, ಆತನನ್ನು ಭಾರತಕ್ಕೆ ಗಡಿಪಾರು ಮಾಡುವ ಅರ್ಜಿಯು ವಿಚಾರಣೆ ಹಂತದಲ್ಲಿದೆ.

ಪಂಜಾಬ್ ನ್ಯಾಷನಲ್ ಬ್ಯಾಂಕ್‌ಗೆ 16 ಸಾವಿರ ಕೋಟಿ ವಂಚಿಸಿ, ವಿದೇಶಕ್ಕೆ ಪರಾರಿಯಾಗಿರುವ ಈತನನ್ನು, 2019ರಲ್ಲಿ ಮುಂಬೈನ ಹಣ ಅಕ್ರಮ ವರ್ಗಾವಣೆ ತಡೆ ನ್ಯಾಯಾಲಯವು 2019ರಲ್ಲಿ 'ತಲೆಮರೆಸಿಕೊಂಡ ಆರೋಪಿ' ಎಂದು ಘೋಷಿಸಿತ್ತು. ಅದೇ ವರ್ಷ ಲಂಡನ್‌ನಲ್ಲಿ ಆತನ ಬಂಧನವೂ ಆಗಿತ್ತು. ಆತನ ಮೇಲಿರುವ ಮೊಕದ್ದಮೆಗಳನ್ನು ಇ.ಡಿ ಹಾಗೂ ಸಿ.ಬಿ.ಐ ಕಳೆದ ಐದು ವರ್ಷಗಳಿಂದ ತನಿಖೆ ನಡೆಸುತ್ತಿವೆ.

# ಸುನೀತಾ ವಿಲಿಯಮ್ಸ್ ಇಲ್ಲದೆ ಖಾಲಿ ಭೂಮಿಗೆ ಮರಳಿದ ಸ್ಟಾರ್‌ಲೈನರ್

## ಗಗನಯಾತ್ರಿಕರನ್ನು ಬಾಹ್ಯಾಕಾಶಕ್ಕೆ ಕರೆದೊಯ್ದು, ಅವರಿಲ್ಲದೆ ಖಾಲಿ ಮರಳಿದ ಮೊದಲ ಬಾಹ್ಯಾಕಾಶ ನೌಕೆ



ಬಾಹ್ಯಾಕಾಶ ರಂಗದಲ್ಲಿಯೇ ಮೊದಲ ಘಟನೆ

**ವಾಷಿಂಗ್ಟನ್:** ಬಾಹ್ಯಾಕಾಶ ಜಗತ್ತಿನ ಇತಿಹಾಸದಲ್ಲಿಯೇ ಮೊದಲ ಬಾರಿಗೆ, ಗಗನಯಾತ್ರಿಕರನ್ನು ತನ್ನೊಂದಿಗೆ ಕರೆದೊಯ್ದ ನೌಕೆಯೊಂದು ಖಾಲಿ ಭೂಮಿಗೆ ಮರಳಿದೆ. ಇಂತಹ ಘಟನೆ ಹಿಂದೆಂದೂ ನಡೆಯದಿರಲಿಲ್ಲ. ಈ ರೀತಿಯ ಸವಾಲನ್ನು ನಾಸಾ ಕೂಡ ಈ ಹಿಂದೆ ಎದುರಿಸಿರಲಿಲ್ಲ. ಗಗನಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರನ್ನು ಬಾಹ್ಯಾಕಾಶ ನಿಲ್ದಾಣಕ್ಕೆ ಕರೆದೊಯ್ದಿದ್ದ ಬೋಯಿಂಗ್ ಸ್ಟಾರ್ ಲೈನರ್ ಬಾಹ್ಯಾಕಾಶ ನೌಕೆಯು ಶನಿವಾರ ಮರಳಿ ಭೂಮಿಗೆ ತಲುಪಿದೆ. ಈ ವಿಚಿತ್ರ ಸನ್ನಿವೇಶವು ಬಾಹ್ಯಾಕಾಶ ಅನ್ವೇಷಣೆಯಲ್ಲಿ ಮಹತ್ವದ ಸಂದರ್ಭ ಎನಿಸಿದ್ದು, ಹೊಸ ಬಾಹ್ಯಾಕಾಶ ನೌಕಾ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವಾಗಿನ ಸವಾಲುಗಳನ್ನು ಎತ್ತಿ ತೋರಿಸಿದೆ.

ನಾಸಾದ ವಾಣಿಜ್ಯಾತ್ಮಕ ಸಿಬ್ಬಂದಿ ಯೋಜನೆಯ ಭಾಗವಾಗಿ ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯನ್ನು ಹಲವು ವರ್ಷಗಳ ವಿಳಂಬದ ಬಳಿಕ ಜೂನ್ 5ರಂದು ಉಡಾವಣೆ ಮಾಡಲಾಗಿತ್ತು. ನಾಸಾ ಗಗನ ಯಾತ್ರಿಕರಾದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರನ್ನು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ (ಐಎಸ್‌ಎಸ್) ನೌಕೆಯು ಕರೆದೊಯ್ದಿತ್ತು. ಈ ಯೋಜನೆಯು ನಿರ್ಣಾಯಕ ಪರೀಕ್ಷಾರ್ಥ ಹಾರಾಟದ ಉದ್ದೇಶದ ಜತೆಗೆ, ಕಕ್ಷಾ ಪ್ರಯೋಗಾಲಯಕ್ಕೆ ಮತ್ತು ಅಲ್ಲಿಂದ ಗಗನಯಾನಿಗಳನ್ನು ಸುರಕ್ಷಿತವಾಗಿ ಕರೆದೊಯ್ಯುವ ಕ್ಯಾಪ್ಸೂಲ್‌ನ ಸಾಮರ್ಥ್ಯವನ್ನು ಬಿಂಬಿಸುವ ಗುರಿ ಹೊಂದಿತ್ತು. ಆದರೆ ಐಎಸ್‌ಎಸ್ ತಲುಪಿದ ಕೆಲವೇ ಸಮಯದಲ್ಲಿ ಸ್ಟಾರ್‌ಲೈನರ್‌ನಲ್ಲಿ ಹೀಲಿಯಂ ಸೋರಿಕೆ ಹಾಗೂ ರಿಯಾಕ್ಷನ್ ಕಂಟ್ರೋಲ್ ಥ್ರಸ್ಟರ್‌ಗಳಲ್ಲಿನ ಸಮಸ್ಯೆಗಳು ಸೇರಿದಂತೆ ಅನೇಕ ತಾಂತ್ರಿಕ ಸಮಸ್ಯೆಗಳನ್ನು ಎಂಜಿನಿಯರ್‌ಗಳು ಪತ್ತೆ ಮಾಡಿದ್ದರು.

**ಫೆಬ್ರವರಿವರೆಗೂ ಕಾಯಬೇಕು:** ಈ ಅನಿರೀಕ್ಷಿತ ಸನ್ನಿವೇಶ ನಾಸಾಕ್ಕೆ ಇಕ್ಕಟ್ಟು ಉಂಟುಮಾಡಿತ್ತು. ಕೆಲವೇ ದಿನಗಳ ಮಟ್ಟಿಗಾಗಿ ಈ ಗಗನಯಾತ್ರಿಗಳು ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿದ್ದರೂ, ಅವರ ಸುರಕ್ಷಿತ ವಾಪಸಾತಿ ನಾಸಾಕ್ಕೆ ತಲೆನೋವು ಉಂಟುಮಾಡಿತ್ತು. ಸ್ಟಾರ್‌ಲೈನರ್‌ನಲ್ಲಿಯೇ ಅವರು ಭೂಮಿಗೆ ವಾಪಸಾಗುವುದು ಸುರಕ್ಷಿತವಲ್ಲ ಎಂಬ ಆತಂಕ ಉಂಟಾಗಿತ್ತು. ಹೀಗಾಗಿ ಸುನೀತಾ ಮತ್ತು ವಿಲ್ಮೋರ್ ಅವರನ್ನು ಭೂಮಿಗೆ ವಾಪಸ್ ಕರೆತರಲು ಪ್ರತಿಸ್ಪರ್ಧಿ ಸ್ಪೇಸ್ ಎಕ್ಸ್ ನೆರವು ಪಡೆಯುವುದು ಅನಿವಾರ್ಯವಾಯಿತು. ಸ್ಪೇಸ್ ಎಕ್ಸ್‌ನ ಕ್ರ್ಯೂ ಡ್ರ್ಯಾಗನ್ ನೌಕೆಯು ಇಬ್ಬರು ಗಗನಯಾನಿಗಳನ್ನು ಮರಳಿ ಕರೆತರಲಿದೆ. ಆದರೆ ಅದಕ್ಕಾಗಿ 2025ರ ಫೆಬ್ರವರಿಯವರೆಗೂ ಕಾಯಬೇಕಿದೆ.

ಅಂಟಿನ ಉಂಡೆಯ ಆಕಾರದ ಈ ನೌಕೆಯು ಸ್ಥಳೀಯ ಕಾಲಮಾನ ಬೆಳಿಗ್ಗೆ 9.30ರ ಸುಮಾರಿಗೆ ನ್ಯೂ ಮೆಕ್ಸಿಕೋದ ವೈಟ್ ಸ್ಯಾಂಡ್ಸ್ ಸ್ಪೇಸ್ ಹಾರ್ಬರ್‌ಗೆ ಸುಗಮವಾಗಿ ಬಂದು ಇಳಿದಿದೆ. ಐಎಸ್‌ಎಸ್‌ನಿಂದ ಆರು ಗಂಟೆಗಳ ಮುಂಚೆ ಹೊರಟ ನೌಕೆಯು ಪ್ಯಾರಾಚೂಟ್‌ಗಳು, ಏರ್‌ಬ್ಯಾಗ್‌ಗಳ ಕುಷನ್ ನೆರವಿನಿಂದ ನಿಧಾನವಾಗಿ ಭೂಸ್ಪರ್ಶ ಮಾಡಿತು.

**ಸೀಟುಗಳನ್ನು ಕಳಚಿದ ಗಗನಯಾನಿಗಳು:** ಇದಕ್ಕೂ ಮುನ್ನ ಬಾಹ್ಯಾಕಾಶ ನಿಲ್ದಾಣದಲ್ಲಿರುವ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರು ಮಾನವರಹಿತವಾಗಿ ಸ್ಟಾರ್‌ಲೈನರ್ ಭೂಮಿಗೆ ವಾಪಸಾಗಲು ಬೇಕಿದ್ದ ಅಂತಿಮ ಸಿದ್ಧತೆಗಳನ್ನು ಪೂರ್ಣಗೊಳಿಸಿದ್ದರು. ಗುರುವಾರ ತಡರಾತ್ರಿ ಸ್ಟಾರ್‌ಲೈನರ್‌ನ ದ್ವಾರವನ್ನು ಮುಚ್ಚಿದ ಅವರು, ನೌಕೆಗೆ ಗುಡ್‌ಬೈ ಹೇಳಿದ್ದರು. ಸರಕುಗಳ ಸಂಗ್ರಹಕ್ಕಾಗಿ ಅವರು ಜಾಗರೂಕತೆಯಿಂದ ಸಿಬ್ಬಂದಿ ಸೀಟುಗಳನ್ನು ಕಳಚಿದ್ದರು. ಇದರಿಂದ ಬಾಹ್ಯಾಕಾಶ ನಿಲ್ದಾಣದಿಂದ ನೌಕೆಯಲ್ಲಿ ಸಾಕಷ್ಟು ಸಾಮಗ್ರಿಗಳನ್ನು ಭೂಮಿಗೆ ಕಳುಹಿಸಲು ಸಾಧ್ಯವಾಗಿದೆ.

- **ನ್ಯೂ ಮೆಕ್ಸಿಕೋದ ಸ್ಯಾಂಡ್ಸ್ ಸ್ಪೇಸ್ ಹಾರ್ಬರ್‌ಗೆ ಸುರಕ್ಷಿತವಾಗಿ ಭೂಸ್ಪರ್ಶ ಮಾಡಿದ ಸ್ಟಾರ್‌ಲೈನರ್**
- **ಅಪಾಯವಿಲ್ಲದೆ ಗಗನಯಾತ್ರಿಕರನ್ನು ಮರಳಿ ಕರೆತರಲಿದೆ ಎಂಬ ಬೋಯಿಂಗ್ ಭರವಸೆ ನಂಬದ ನಾಸಾ**

### ಬಾಹ್ಯಾಕಾಶ ಇತಿಹಾಸದಲ್ಲಿ ಇದೇ ಮೊದಲು

**ನಾಸಾದ ಬಾಹ್ಯಾಕಾಶ ಸಂಶೋಧನೆಯ ಭಾಗವಾಗಿ ಗಗನಯಾತ್ರಿಕರಾದ ಸುನೀತಾ ವಿಲಿಯಮ್ಸ್, ಬುಚ್ ವಿಲ್ಮೋರ್ ಅವರನ್ನು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಕರೆದೊಯ್ದಿದ್ದ ಬೋಯಿಂಗ್‌ನ ಸ್ಟಾರ್‌ಲೈನರ್ ನೌಕೆಯು ಸುರಕ್ಷಿತವಾಗಿ ಭೂಮಿಗೆ ವಾಪಸಾಗಿದೆ. ಗಗನಯಾತ್ರಿಕರನ್ನು ಕರೆದೊಯ್ದ ನೌಕೆಯೊಂದು ಖಾಲಿ ಮರಳಿರುವುದು ಬಾಹ್ಯಾಕಾಶ ಇತಿಹಾಸದಲ್ಲಿ ಇದೇ ಮೊದಲು.**

## ಮಿನಿ ನ್ಯೂಸ್

### ಚಂಡಮಾರುತಕ್ಕೆ 141 ಮಂದಿ ಬಲಿ

**ಹನೋಯಿ:** ಉತ್ತರ ವಿಯೆಟ್ನಾಂನಲ್ಲಿ ಹಠಾತ್ ಪ್ರವಾಹವು ಇಡೀ ಗ್ರಾಮವನ್ನು ಮುಳುಗಿಸಿದೆ, 16 ಜನರು ಸಾವನ್ನಪ್ಪಿದ್ದಾರೆ ಮತ್ತು ಡಜನ್‌ಗಟ್ಟಲೆ ಜನರು ನಾಪತ್ತೆಯಾಗಿದ್ದಾರೆ, ಟೈಫೂನ್ ಸಂಬಂಧಿತ ಪ್ರವಾಹದಿಂದ ಸಾವನ್ನಪ್ಪಿದವರ ಸಂಖ್ಯೆ 141 ಕ್ಕೆ ಏರಿಕೆಯಾಗಿದೆ. ಲಾವೊ ಕೈ ಪ್ರಾಂತ್ಯದ ಪರ್ವತದಿಂದ ಹರಿಯುವ ಪ್ರವಾಹವು 35 ಕುಟುಂಬಗಳೊಂದಿಗೆ ಲ್ಯಾಂಗ್ ನು ಕುಗ್ರಾಮವನ್ನು ಮಣ್ಣು ಮತ್ತು ಅವಶೇಷಗಳಲ್ಲಿ ಹೂತುಹಾಕಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

35 ಮಂದಿಯಲ್ಲಿ ಸುಮಾರು ಒಂದು ಡಜನ್ ಜನರು ಬದುಕುಳಿದರು. ರಕ್ಷಣಾ ಸಿಬ್ಬಂದಿ 16 ಮತದೇಹಗಳನ್ನು ಹೊರತೆಗೆದಿದ್ದು, ಸುಮಾರು 40 ಮಂದಿಗಾಗಿ ಶೋಧ ಕಾರ್ಯ ಮುಂದುವರೆಸಿದ್ದಾರೆ. ಯಾಗಿ ಚಂಡಮಾರುತ ಮತ್ತು ಪ್ರವಾಹ ಮತ್ತು ಭೂಕುಸಿತವನ್ನು ಉಂಟುಮಾಡಿದ ಅದರ ನಂತರದ ಮಳೆಯಿಂದ ಸತ್ತವರ ಸಂಖ್ಯೆ 141 ಕ್ಕೆ ಏರಿದೆ, 69 ಇತರರು ನಾಪತ್ತೆಯಾಗಿದ್ದಾರೆ ಮತ್ತು ನೂರಾರು ಜನರು ಗಾಯಗೊಂಡಿದ್ದಾರೆ ಎಂದು ವಿಟಿವಿ ಹೇಳಿದೆ.

ಯಾಗಿ ಆಗ್ನೇಯ ಏಷ್ಯಾದ ದೇಶವನ್ನು ದಶಕಗಳಲ್ಲಿ ಅಪ್ಪಳಿಸಿದ ಪ್ರಬಲ ಚಂಡ ಮಾರುತವಾಗಿದೆ. ಇದು 149 ಕಿ.ಮೀ ವೇಗದ ಗಾಳಿಯೊಂದಿಗೆ ಭೂಕುಸಿತವನ್ನು ಮಾಡಿತು, ದುರ್ಬಲಗೊಂಡಿದ್ದರೂ ಸಹ, ಮಳೆಯು ಮುಂದುವರಿದಿದೆ ಮತ್ತು ನದಿಗಳು ಅಪಾಯಕಾರಿಯಾಗಿ ಹೊರ ಹೊಮಿವೆ.

### ಓಣಂ ಪ್ರಯುಕ್ತ ಶಬರಿಮಲೆಯಲ್ಲಿ ಅಯ್ಯಪ್ಪನ ದರ್ಶನಕ್ಕೆ ಅವಕಾಶ

**ತಿರುವನಂತಪುರಂ:** ಓಣಂ ಹಬ್ಬದ ಪ್ರಯುಕ್ತ ವಿಶ್ವಪ್ರಸಿದ್ಧ ಭಾರತದ ಕೇರಳ ರಾಜ್ಯದ ಶ್ರೀ ಶಬರಿಮಲೆ ಅಯ್ಯಪ್ಪ ದೇವಾಲಯವು ತೆರೆಯಲಿದ್ದು, ಸ್ವಾಮಿಯ ದರ್ಶನ ಮಾಡುವವರಿಗೆ ಇದೊಂದು ಸುವರ್ಣ ಅವಕಾಶವಾಗಿದೆ. ಶಬರಿಮಲೆ ಅಯ್ಯಪ್ಪನ ದೇವಸ್ಥಾನದಲ್ಲಿ ಓಣಂ ಆಚರಿಸಲು ಪ್ರತಿ ವರ್ಷ ಶಬರಿಮಲೆ ದೇವಸ್ಥಾನವನ್ನು ತೆರೆಯಲಾಗುತ್ತದೆ. ಅದರಂತೆ ಈ ಬಾರಿಯು ದೇವಾಯಲದಲ್ಲಿ ವಿಶೇಷ ಪೂಜೆಗಳು ನಡೆಯಲಿವೆ. ಕೇರಳ ರಾಜ್ಯದಲ್ಲಿ ಈ ವರ್ಷ ಸೆ.15ರಂದು ತಿರುವೋಣಂ ಹಬ್ಬವಿದೆ. ಈ ಸಂದರ್ಭದಲ್ಲಿ 13ರಂದು ಸಂಜೆ 5 ಗಂಟೆಗೆ ಪಾದಯಾತ್ರೆ ಗೆ ಚಾಲನೆ ನೀಡಲಾಗುತ್ತದೆ. ಓಣಂ ಹಬ್ಬದ ಪ್ರಯುಕ್ತ ಶಬರಿಮಲೆಗೆ ಬರುವ ಎಲ್ಲಾ ಅಯ್ಯಪ್ಪ ಭಕ್ತರಿಗೆ ಸೆ.15 ಮತ್ತು 16ರಂದು ಭೋಜನ ವ್ಯವಸ್ಥೆ ಮಾಡಲಾಗಿದೆ. ಜೊತೆಗೆ ಅಯ್ಯಪ್ಪ ದೇವರ ದರ್ಶನ ಭಾಗ್ಯವೂ ಸಿಗಲಿದೆ. ಪುರತಾಸಿ ಮಾಸ ಪೂಜೆಯ ಸಂದರ್ಭದಲ್ಲಿ ದೇವಸ್ಥಾನವು 21ರವರೆಗೆ ತೆರೆದಿರುತ್ತದೆ.ಈ ಸಂದರ್ಭದಲ್ಲಿ ಎಂದಿನಂತೆ ಆನ್‌ಲೈನ್ ಮೂಲಕ ದರ್ಶನದ ಕಾಯ್ದಿರಿಸುವಿಕೆಯ ಆಧಾರದ ಮೇಲೆ ಭಕ್ತರಿಗೆ ದರ್ಶನಕ್ಕೆ ಅವಕಾಶ ನೀಡಲಾಗುವುದು ಎಂದು ದೇವಸ್ಥಾನದ ಆಡಳಿತ ಮಂಡಳಿ ತಿಳಿಸಿದೆ.

### ಕಾಂಗ್ರೆಸ್ ಸೇರಲ್ಲ : ಖ್ಯಾತ ಗಾಯಕ ಕನ್ನಯ್ಯಾ ಮಿತ್ತಲ್

**ಹರಿದ್ವಾರ:** ದೇಶದ ಖ್ಯಾತ ಭಕ್ತಿ ಗಾಯಕ ಕನ್ನಯ್ಯಾ ಮಿತ್ತಲ್ ಅವರು ಕಾಂಗ್ರೆಸ್ ಸೇರುವ ತಮ ನಿರ್ಧಾರದಿಂದ ಹಿಂದೆ ಸರಿದಿದ್ದಾರೆ. ಸಂತರು, ಮಹಾಂತರು ಮತ್ತು ರಾಜಕಾರಣಿಗಳ ಪ್ರತಿಕ್ರಿಯೆಯನ್ನು ಸ್ವೀಕರಿಸಿದ ನಂತರ ಕಾಂಗ್ರೆಸ್ ಸೇರುವ ನಿರ್ಧಾರವನ್ನು ಬದಲಾಯಿಸಿದ್ದೇನೆ ಎಂದು ಖ್ಯಾತ ಭಕ್ತಿ ಗಾಯಕ ಕನ್ಹಯ್ಯ ಮಿತ್ತಲ್ ಹೇಳಿದ್ದಾರೆ.

ಮಿತ್ತಲ್ ಅವರ ಜೋ ರಾಮ್ ಕೋ ಲಾಯೆ ಹೈ ಹಮ್ ಉಂಕೋ ಲಾಯೇಂಗೆ ಹಾಡಿನ ಮೂಲಕ ದೇಶದ ಪ್ರಸಿದ್ಧ ಗಾಯಕರಾಗಿ ಹೊರಹೊಮ್ಮಿದ್ದಾರೆ.ಹರಿಯಾಣ ವಿಧಾನಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ಸೇರುವ ಇಚ್ಛೆ ವ್ಯಕ್ತಪಡಿಸಿದ್ದರು. ನಾನು (ಕಾಂಗ್ರೆಸ್) ಸೇರುವ ಇಚ್ಛೆಯನ್ನು ವ್ಯಕ್ತಪಡಿಸ್ದೆ ಆದರೆ ಜನರು ನಾನು ಸೇರಬಾರದು ಎಂದು ನನಗೆ ಪ್ರತಿಕ್ರಿಯೆ ನೀಡಿದರು. ಸಂತರು, ಮಹಾಂತರು, ರಾಜಕಾರಣಿಗಳು ಹೀಗಾಗಬಾರದು ಎಂದರು. ಬಿಜೆಪಿಯ ಹಿರಿಯ ನಾಯಕತ್ವವು ಮಧ್ಯಪ್ರವೇಶಿಸಿದಾಗ ಮತ್ತು ನಾನು ಅವರೊಂದಿಗೆ ಮಾತನಾಡಿದಾಗ, ಈ ಹೆಜ್ಜೆ ತಪ್ಪು ಎಂದು ನಾನು ಭಾವಿಸಿದೆ, ಎಂದು ಮಿತ್ತಲ್ ಪಿಟಿಐಗೆತಿಳಿಸಿದರು. ಸೆಪ್ಟೆಂಬರ್ 8 ರಂದು ಮಿತ್ತಲ್ ಅವರು ಆದಷ್ಟು ಬೇಗ ಕಾಂಗ್ರೆಸ್ ಸೇರುವುದಾಗಿ ಹೇಳಿದ್ದರು.

### ರಾಹುಲ್ ವಿರುದ್ಧ ಅಮಿತ್ ಶಾ ಆಕ್ರೋಶ


**ನವದೆಹಲಿ:** ದೇಶವನ್ನು ವಿಭಜಿಸುವ ಷಡ್ಯಂತ್ರ ರೂಪಿಸುವ ಶಕ್ತಿಗಳೊಂದಿಗೆ ನಿಂತು ದೇಶ ವಿರೋಧಿ ಹೇಳಿಕೆ ನೀಡುವುದು ರಾಹುಲ್ ಗಾಂಧಿ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಅಭ್ಯಾಸವಾಗಿ ಹೋಗಿದೆ ಎಂದು ಕೇಂದ್ರ ಗೃಹಸಚಿವ ಅಮಿತ್ ಟೀಕಾ ಪ್ರಹಾರ ನಡೆಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಜಮ್ಮು ಕಾಶ್ಮೀರ, ಜೆಕೆಎನ್ಸಿಯ ರಾಷ್ಟ್ರ ವಿರೋಧಿ ಮತ್ತು ಮೀಸಲಾತಿ ವಿರೋಧಿ ಅಜೆಂಡಾವನ್ನು ಬೆಂಬಲಿಸುತ್ತಿರಲಿ. ವಿದೇಶಿ ವೇದಿಕೆಗಳಲ್ಲಿ ಭಾರತ ವಿರೋಧಿ ಹೇಳಿಕೆಗಳನ್ನು ನೀಡುತ್ತಿರಲಿ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ. ರಾಹುಲ್ ಗಾಂಧಿ ಯಾವಾಗಲೂ ರಾಷ್ಟ್ರದ ಭದ್ರತೆಗೆ ಬೆದರಿಕೆ, ಭಾವನೆಗಳನ್ನು ಘಾಸಿಗೊಳಿಸಿದ್ದಾರೆ. ಅವರ ಹೇಳಿಕೆಯು ಪ್ರಾದೇಶಿಕತೆ, ಧರ್ಮ, ಭಾಷಿಕ ಭಿನ್ನಾಭಿಪ್ರಾಯದ ರೀತಿಯಲ್ಲಿ ಬಿರುಕುಗಳನ್ನು ಉಂಟುಮಾಡುವ ಕಾಂಗ್ರೆಸ್‌ನ ರಾಜಕೀಯವನ್ನು ಬಯಲಿಗೆಳೆಯುತ್ತದೆ ಎಂದು ಆರೋಪಿಸಿದ್ದಾರೆ. ದೇಶದಲ್ಲಿ ಮೀಸಲಾತಿ ರದ್ದುಪಡಿಸುವ ಬಗ್ಗೆ ಮಾತನಾಡುವ ಮೂಲಕ ರಾಹುಲ್ ಗಾಂಧಿ ಮತ್ತೊಮೆ ಕಾಂಗ್ರೆಸ್‌ನ ಮೀಸಲಾತಿ ವಿರೋಧಿ ಮುಖವನ್ನು ಮುನ್ನೆಲೆಗೆ ತಂದಿದ್ದಾರೆ. ಅವನ ಮನಸ್ಸಿನಲ್ಲಿದ್ದ ಆಲೋಚನೆಗಳು ಅಂತಿಮವಾಗಿ ಪದಗಳಾಗಿ ಹೊರಹೊಮಿವೆ ಎಂದು ಟೀಕಿಸಿದ್ದಾರೆ.

### ಲಾರಿ ಉರುಳಿ 7 ಮಂದಿ ಸಾವು

**ಪೂರ್ವ ಗೋದಾವರಿ:** ವೇಗವಾಗಿ ಹೋಗುತ್ತಿದ್ದ ಲಾರಿ ಉರುಳಿಬಿದ್ದು, ಸ್ಥಳದಲ್ಲೇ 7 ಕೂಲಿ ಕಾರ್ಮಿಕರು ಮೃತಪಟ್ಟಿರುವ ದಾರುಣ ಘಟನೆ ಜಿಲ್ಲೆಯ ದೇವರಪಲ್ಲಿ ತಾಲ್ಲೂಕಿನ ಚಿಲಕವಾರಿಪಾಕಲ ಬಳಿ ನಿನ್ನೆ ರಾತ್ರಿ ಸಂಭವಿಸಿದೆ. ನೀಡದವೋಲು ಮಂಡಲದ ತಾಡಿಮಲ್ಲ ಗ್ರಾಮದ ತಮ್ಮಿ ರೆಡ್ಡಿ ಸತ್ಯನಾರಾಯಣ (45), ದೇಶಭಟ್ಟುಲ ವೆಂಕಟರಾವ್ (40), ಬೊಕ್ಕ ಪ್ರಸಾದ್ (32), ಪೆನುಗುರ್ತಿ ಚಿನ್ನ ಮುಸಲಯ್ಯ (35), ಕತ್ತಿವ ಕೃಷ್ಣ (40), ಕತ್ತಿವ ಸತ್ತಿಪಂಡು (40), ತಾಡಿ ಕೃಷ್ಣ (45) ಮೃತಪಟ್ಟವರು. ಘಟನೆಯಲ್ಲಿ ಮೂವರಿಗೆ ಗಾಯಗಳಾಗಿದ್ದು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಗೋಡಂಬಿ ಲೋಡ್ ತುಂಬಿಕೊಂಡು ತೆರಳುತ್ತಿದ್ದ ಲಾರಿ, ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿ ದುರಂತ ಸಂಭವಿಸಿದೆ.

ಆಂಧ್ರಪ್ರದೇಶದ ನರಸಾಪುರಂ ಮಂಡಲದ ಬೊರ್ರಂಪಾಲೆಂನಿಂದ ನಿಡದವೋಲು ಮಂಡಲದ ತಾಡಿಮಲ್ಲ ಕಡೆಗೆ ಲಾರಿ ಹೋಗುತ್ತಿದ್ದಾಗ ಚಿನ್ನಾಯಗುಡೆಂ ಉಪನಗರದಲ್ಲಿ ನಿಯಂತ್ರಣ ತಪ್ಪಿ ಕಾಲುವೆಗೆ ಉರುಳಿದೆ. ಅಪಘಾತವಾದ ಲಾರಿಯಲ್ಲಿ 10 ಮಂದಿ ಪ್ರಯಾಣಿಸುತ್ತಿದ್ದು, ಏಳು ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.



# ಹೊಸ ಫೋಟೋಶೂಟ್‌ನಲ್ಲಿ ಅಪ್ಸರೆಯಂತೆ ಕಂಗೊಳಿಸಿದ ಶ್ರೀಲೀಲಾ

**ನಟಿಯ ಲುಕ್‌ಗೆ ಫ್ಯಾನ್ಸ್ ಫಿದಾ**

'ಕಿಸ್' ಬೆಡಗಿ ಶ್ರೀಲೀಲಾ ಸದ್ಯ ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಸ್ಟಾರ್ ನಟರಿಗೆ ನಾಯಕಿಯಾಗುವ ಮೂಲಕ ಸದ್ದು ಮಾಡುತ್ತಿರುವ ಶ್ರೀಲೀಲಾ ಹೊಸ ಫೋಟೋಶೂಟ್‌ನಿಂದ ಸದ್ದು ಮಾಡುತ್ತಿದ್ದಾರೆ. ಲೈಟ್ ಬಣ್ಣದ ಡ್ರೆಸ್‌ನಲ್ಲಿ ನಟಿ ಅಪ್ಸರೆಯಂತೆ ಕಂಗೊಳಿಸಿದ್ದಾರೆ. ವಿವಿಧ ಭಂಗಿಯಲ್ಲಿ ಕ್ಯಾಮೆರಾಗೆ ನಟಿ ಪೋಸ್ ನೀಡಿದ್ದಾರೆ. ನಟಿಯ ಲುಕ್‌ಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಅಪ್ಸರೆಯಂತೆ ಮಿಂಚಿರುವ ಶ್ರೀಲೀಲಾರನ್ನು ನೆಟ್ಟಿಗರು ಹಾಡಿಹೊಗಳುತ್ತಿದ್ದಾರೆ.

ತೆಲುಗಿನಲ್ಲಿ 'ಪೆಳ್ಳಿ ಸಂದಡಿ' ಸಿನಿಮಾದ ಮೂಲಕ ನಟಿ ಎಂಟ್ರಿ ಕೊಟ್ಟರು. ಬಳಿಕ 'ಧಮಾಕ' ಚಿತ್ರದಿಂದ ಅವರಿಗೆ ಯಶಸ್ಸು ಸಿಕ್ಕಿತ್ತು. ಅಲ್ಲಿಂದ ಸ್ಟಾರ್ ನಟರ ಜೊತೆ ನಟಿಸುವ ಅವಕಾಶ ಸಿಕ್ಕಿದ್ರು ಹೇಳಿಕೊಳ್ಳುವಂತ ಬ್ರೇಕ್ ಸಿಗಲಿಲ್ಲ. ಹಾಗಂತ ಅವರಿಗೆ ಬೇಡಿಕೆಯೇನು ಕಮ್ಮಿಯಾಗಲಿಲ್ಲ. ಕಳೆದ ವರ್ಷ ತೆರೆಕಂಡ 'ಭಗವಂತ ಕೇಸರಿ', ಗುಂಟೂರು ಖಾರಂ ಚಿತ್ರದ ಅಭಿನಯ ಮತ್ತು ಶ್ರೀಲೀಲಾ ಡ್ಯಾನ್ಸ್‌ಗೆ ಉತ್ತಮ ರೆಸ್ಪಾನ್ಸ್ ಸಿಕ್ಕಿತ್ತು. ಇನ್ನೂ ಪವನ್ ಕಲ್ಯಾಣ್ ಜೊತೆಗಿನ ಸಿನಿಮಾ, ನಿತಿನ್ ಜೊತೆ ರಾಬಿನ್ ಹುಡ್, ಮಾಸ್ ಮಹಾರಾಜ್ ರವಿತೇಜ ಜೊತೆಗೆ ಹೊಸ ಚಿತ್ರ ಸೇರಿದಂತೆ ಹಲವು ಸಿನಿಮಾಗಳನ್ನು ನಟಿ ಒಪ್ಪಿಕೊಂಡಿದ್ದಾರೆ.

ತೆಲುಗು ಮಾತ್ರವಲ್ಲ, ಇದೀಗ ಬಾಲಿವುಡ್‌ಗೂ ಕೂಡ ಪಾದಾರ್ಪಣೆ ಮಾಡೋಕೆ ರೆಡಿಯಾಗಿದ್ದಾರೆ. ಸಿದ್ಧಾರ್ಥ್ ಮಲ್ಹೋತ್ರಾಗೆ ನಾಯಕಿಯಾಗಿ ನಟಿಸಲು ಶ್ರೀಲೀಲಾಗೆ ಅವಕಾಶ ಸಿಕ್ಕಿದೆ.

ಅಂದಹಾಗೆ, ಬೆಂಗಳೂರಿನ ಬೆಡಗಿ ಶ್ರೀಲೀಲಾ ಕನ್ನಡದ 'ಕಿಸ್' ಚಿತ್ರದ ಮೂಲಕ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟರು. ಭರಾಟೆ, ಬೈಟು ಲವ್ ಸೇರಿದಂತೆ ಹಲವು ಸಿನಿಮಾಗಳಲ್ಲಿ ನಟಿಸಿದರು.



# ರಕ್ತದಿಂದ ಸಮುದ್ರವೇ ಕೆಂಪಾದ ಕಥೆ ಹೇಳೋಕೆ ಬರುತ್ತಿದ್ದಾರೆ ಜೂ.ಎನ್‌ಟಿಆರ್


ಜೂ.ಎನ್‌ಟಿಆರ್ , ಜಾನ್ವಿ ಕಪೂರ್ ನಟನೆಯ ಬಹುನಿರೀಕ್ಷಿತ 'ದೇವರ' ಸಿನಿಮಾದ ಟ್ರೈಲರ್ ಕನ್ನಡ ಸೇರಿ ಬಹುಭಾಷೆಗಳಲ್ಲಿ ರಿಲೀಸ್ ಆಗಿದೆ. ರಕ್ತದಿಂದ ಸಮುದ್ರವೇ ಕೆಂಪಾದ ಕಥೆಯನ್ನು ಹೇಳೋಕೆ ತಾರಕ್ ಮತ್ತು ಜಾನ್ವಿ ಬರುತ್ತಿದ್ದಾರೆ. ಜಾತಿ, ಧರ್ಮ, ಭಯ ಎಲ್ಲಿಲ್ಲ ಎಂದು ಶುರವಾಗುವ ಡೈಲಾಗ್‌ಗೆ ಧೈರ್ಯ ಬಿಟ್ಟು ಬೇರೇನೂ ಗೊತ್ತಿಲ್ಲದ ಕಣ್ಣುಗಳಲ್ಲಿ ಭಯದ ಪೊರೆ ಆವರಿಸಿಕೊಂಡು ಎಂದು ಹೇಳುವಾಗ ತಾರಕ್‌ಗೆ ನೀಡಿದ ಲುಕ್ ಮಸ್ತ್ ಆಗಿದೆ. ಮನುಷ್ಯನಿಗೆ ಬದುಕುವಷ್ಟು ಧೈರ್ಯವಿದೆ ಕೊಲ್ಲಲು ಆ ಧೈರ್ಯ ಸಾಕಾಗುವುದಿಲ್ಲ ಎಂಬಂತಹ ಡೈಲಾಗ್ ಕೇಳಿ ಫ್ಯಾನ್ಸ್ ಫಿದಾ ಆಗಿದ್ದಾರೆ.

ದ್ವಿಪಾತ್ರಗಳಲ್ಲಿ ಜ್ಯೂ.ಎನ್‌ಟಿಆರ್ ಕಾಣಿಸಿಕೊಂಡಿರೋದು ಟ್ರೈಲರ್‌ನಿಂದ ಸ್ಪಷ್ಟವಾಗಿದೆ. ಹೇಡಿ ಮಗ ಇನ್ನೊಂದು ಕಡೆ ಹಿಂಸಾತ್ಮಕ ತಂದೆಯಾಗಿ ಬದಲಾಗಿದ್ದರ ಬಗ್ಗೆ ಟ್ರೈಲರ್‌ನಿಂದ ಚಿತ್ರದ ಕಥೆಯ ಸುಳಿವು ನೀಡಿದ್ದಾರೆ. ಜ್ಯೂ. ಎನ್‌ಟಿಆರ್ ಎದುರು ಸೈಫ್ ಅಲಿ ಖಾನ್ ನಟನೆ ನೋಡುಗರಿಗೆ ಕಿಕ್ ಕೊಟ್ಟಿದೆ. ತಾರಕ್ ಮತ್ತು ಜಾನ್ವಿ ಕಾಂಬಿನೇಷನ್ ಝಲಕ್ ಸೊಗಸಾಗಿದೆ. ಒಟ್ನಲ್ಲಿ ರಿಲೀಸ್ ಆಗಿರುವ 'ದೇವರ' ಚಿತ್ರದ ಟ್ರೈಲರ್ ಇದೀಗ ಸೋಶಿಯಲ್ ಮೀಡಿಯಾದಲ್ಲಿ ಭರ್ಜರಿ ವಿವ್ಸ್ ಪಡೆಯುತ್ತಿದೆ. ಅಂದಹಾಗೆ, ಬಹುಭಾಷೆಗಳಲ್ಲಿ 'ದೇವರ' ಸಿನಿಮಾ ಸೆ.27ಕ್ಕೆ ರಿಲೀಸ್ ಆಗುತ್ತಿದೆ. ಡಬಲ್ ರೋಲ್‌ನಲ್ಲಿ ನಟಿಸಿರುವ ಜ್ಯೂ.ಎನ್‌ಟಿಆರ್ ಅವರನ್ನು ನೋಡಲು ಫ್ಯಾನ್ಸ್ ಕಾಯುತ್ತಿದ್ದಾರೆ. ಇನ್ನೂ ಚಿತ್ರದಲ್ಲಿ ತಾರಕ್ ಮತ್ತು ಜಾನ್ವಿ ಕಪೂರ್ ಜೊತೆ ಸೈಫ್ ಅಲಿ ಖಾನ್, ಪ್ರಕಾಶ್ ರಾಜ್ ಅನೇಕರು ನಟಿಸಿದ್ದಾರೆ. ಕೊರಟಾಲ ಶಿವ ಆಯಕ್ಷನ್ ಕಟ್ ಹೇಳಿದ್ದಾರೆ.



# ಸಿಂಗರ್ ಜೊತೆ ಎಂಗೇಜ್ ಆದ ಪ್ರಮೋದ್ ಮರವಂತೆ

'ಕಾಂತಾರ' ಸಿನಿಮಾದಲ್ಲಿನ 'ಸಿಂಗಾರ ಸಿರಿಯೇ' ಖ್ಯಾತಿಯ ಲಿರಿಕ್ಸ್ ರೈಟರ್ ಪ್ರಮೋದ್ ಮರವಂತೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. 'ಕೆಜಿಎಫ್ 2' ಚಿತ್ರದ ಸಿಂಗರ್ ಸುಚೇತ ಜೊತೆ ಪ್ರಮೋದ್ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ನಿಶ್ಚಿತಾರ್ಥದ ಸಂಭ್ರಮದ ಫೋಟೋಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿ, 'ರಾಗಕ್ಕೆ ಪದ ಸೇರಿದೆ ಬದುಕೊಂದು ಹಾಡಾಗಿದೆ' ಎಂದು ಸಾಲುಗಳನ್ನು ಬರೆದು ಭಾವಿ ಪತ್ನಿ ಜೊತೆಗಿನ ಫೋಟೋ ಹಂಚಿಕೊಂಡಿದ್ದಾರೆ. ಪ್ರಮೋದ್ ಭಾವಿ ಪತ್ನಿಯ ಹೆಸರು ಸುಚೇತ ಬಸ್ರೂರು, ಕೆಜಿಎಫ್ 2 ಚಿತ್ರದಲ್ಲಿ 'ಗಗನ ನೀ ಭುವನ ನೀ' ಎಂಬ ಹಾಡನ್ನು ಸೊಗಸಾಗಿ ಹಾಡುವ ಮೂಲಕ ಸದ್ದು ಮಾಡಿದ್ದರು. ಇವರು ಖ್ಯಾತ ಸಂಗೀತ ನಿರ್ದೇಶಕ ರವಿ ಬಸ್ರೂರು ಅವರ ಸೊಸೆಯಾಗಿದ್ದಾರೆ. ಅವರ ಅಕ್ಕನ ಮಗಳು ಸುಚೇತ ಜೊತೆ ಪ್ರಮೋದ್ ಉಂಗುರದ ಮುದ್ರೆ ಒತ್ತಿದ್ದಾರೆ. ಸದ್ಯದಲ್ಲೇ ಮದುವೆ ಕುರಿತು ಅಪ್‌ಡೇಟ್ ಹಂಚಿಕೊಳ್ಳಲಿದ್ದಾರೆ.



**ವೆಟ್ಟೈಯಾನ್ ಚಿತ್ರದ ಸಾಂಗ್ ರಿಲೀಸ್**

# ಕೊನೆಗೂ ಮದುವೆ ಬಗ್ಗೆ ಸ್ಪಷ್ಟನೆ ಕೊಟ್ಟ ರಮ್ಯಾ !

ಕೊನೆಗೂ ಮೋಹಕ ತಾರೆ ರಮ್ಯಾ ಮದುವೆ ವಿಚಾರದ ಬಗ್ಗೆ ಸ್ಪಷ್ಟನೆ ಕೊಟ್ಟಿದ್ದಾರೆ. ಹಲವಾರು ಬಾರಿ ರಮ್ಯಾ ಮದುವೆ ವಿಚಾರ ಹಾಟ್ ಟಾಪಿಕ್ ಕೂಡ ಆಗಿತ್ತು. ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾ ಯಾವುದೇ ಕಾರ್ಯಕ್ರಮಕ್ಕೆ ಹೋಗಲಿ ಅಲ್ಲಿ ಮದುವೆ ವಿಷಯ ಪ್ರಸ್ತಾಪ ಆಗಿಯೇ ಆಗುತ್ತಿತ್ತು. ಈ ವೀಕೆಂಡ್ ನಲ್ಲೂ ರಮ್ಯಾ ಮದುವೆ ವಿಷ್ಯ ಬ್ರೇಕಿಂಗ್ ಆಗಿತ್ತು. ಟೆಕ್ಸ್‌ಟೈಲ್ ಉದ್ಯಮಿ ಜೊತೆ ರಮ್ಯಾ ನಿಶ್ಚಿತಾರ್ಥ ಆಗಿದೆ ಅನ್ನೋ ವಿಚಾರ ಗಾಂಧಿನಗರದ ಗಲ್ಲಿಗಲ್ಲಿಗಳಲ್ಲಿ ಕೇಳಿ ಬಂದಿತ್ತು. ಆಪ್ತರು ಹೇಳುವಂತೆ ಅಕ್ಟೋಬರ್ ನಲ್ಲಿ ಎಂಗೇಜ್‌ಮೆಂಟ್ ಆಗಲಿದ್ದಾರಂತೆ. ನವೆಂಬರ್‌ನಲ್ಲಿ ಬೆಂಗಳೂರಿನ ಅರಮನೆಯಲ್ಲಿ ಮದುವೆ ನಡೆಯಲಿದೆ ಎಂದು ಹೇಲಾಗಿತ್ತು. ಆದ್ರೆ ನಟಿ ಪೋಸ್ಟ್‌ವೊಂದನ್ನು ಹಂಚಿಕೊಳ್ಳುವ ಮೂಲಕ ಮದುವೆ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ದಯವಿಟ್ಟು ವದಂತಿ ಮತ್ತು ಸುಳ್ಳು ಸುದ್ದಿಗಳನ್ನ ಹಾಕಬೇಡಿ. ಮುಂದೆ ನಾನು ಮದುವೆ ಆಗೋವಾಗ ನಿಮಗೆ ಹೇಳುತ್ತೀನಿ ಎಂದು ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್‌ವೊಂದನ್ನ ಹಂಚಿಕೊಂಡಿದ್ದಾರೆ.

# ಡಿಸೆಂಬರ್‌ನಲ್ಲಿ ರಾವಣನಾಗಿ ಘರ್ಜಿಸಲಿದ್ದಾರೆ

ನ್ಯಾಷನಲ್ ಸ್ಟಾರ್ ಯಶ್ ಪ್ರಸ್ತುತ 'ಟಾಕ್ಸಿಕ್' ಸಿನಿಮಾ ಶೂಟಿಂಗ್‌ನಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಅವರು ಒಪ್ಪಿಕೊಂಡಿರುವ 'ರಾಮಾಯಣ' ಸಿನಿಮಾದ ಬಗ್ಗೆ ಬಿಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಡಿಸೆಂಬರ್‌ನಲ್ಲಿ ಯಶ್ 'ರಾಮಾಯಣ' ಚಿತ್ರತಂಡವನ್ನು ಸೇರಿಕೊಳ್ಳಲಿದ್ದಾರೆ. ಆ.8ಕ್ಕೆ ಟಾಕ್ಸಿಕ್ ಸಿನಿಮಾಗೆ ಚಿತ್ರಕ್ಕೆ ನೀಡಲಾಗಿತ್ತು. ಅಂದಿನಿಂದ ಈ ಪ್ರಾಜೆಕ್ಟ್‌ನಲ್ಲಿ ಯಶ್ ಬ್ಯುಸಿಯಾಗಿದ್ದಾರೆ. ಇನ್ನೂ ಹಲವು ಹಂತದಲ್ಲಿ ಶೂಟಿಂಗ್ ನಡೆಯಲಿದೆ. ಆದರೆ ರಣ್‌ಬೀರ್ ಕಪೂರ್ 'ರಾಮಾಯಣ' ಚಿತ್ರದಲ್ಲಿ ಯಶ್ 'ರಾವಣ'ನಾಗಿ ಬರೋಕೆ ಮುಹೂರ್ತ ಫಿಕ್ಸ್ ಆಗಿದೆ. 'ಟಾಕ್ಸಿಕ್' ಸಿನಿಮಾ ಜೊತೆಗೆಯೇ ಈ ಚಿತ್ರಕ್ಕೂ ಅವರು ಸಾಥ್ ನೀಡಲಿದ್ದಾರೆ.

ರಣ್‌ಬೀರ್ ರಾಮನ ಪಾತ್ರ, ಸಾಯಿ ಪಲ್ಲವಿ ಸೀತೆ ಪಾತ್ರಕ್ಕೆ ಜೀವತುಂಬುತ್ತಿದ್ದಾರೆ. ಇವರ ಭಾಗದ ಶೂಟಿಂಗ್ ಮುಂಬೈನಲ್ಲಿ ನಡೆಯುತ್ತಿದೆ. ಡಿಸೆಂಬರ್‌ನಲ್ಲಿ ಚಿತ್ರದ ಸೆಟ್‌ಗೆ ಯಶ್ ಎಂಟ್ರಿ ಕೊಡಲಿದ್ದಾರೆ. ರಾವಣನಾಗಿ ಘರ್ಜಿಸೋಕೆ ಸಕಲ ತಯಾರಿ ಮಾಡಿಕೊಂಡಿದ್ದಾರೆ. ಇನ್ನೂ ಸನ್ನಿ ಡಿಯೋಲ್ ಅವರು ಹನುಮಂತನ ಪಾತ್ರದಲ್ಲಿ ಕಾಣಿಸಿಕೊಳ್ತಿದ್ದಾರೆ.

ಇನ್ನೂ 'ರಾಮಾಯಣ' ಸಿನಿಮಾದಲ್ಲಿ ನಟಿಸುವುದರ ಜೊತೆಗೆ ಸಹ ನಿರ್ಮಾಪಕನಾಗಿಯೂ ಕನ್ನಡದ ನಟ ಯಶ್ ಕೈಜೋಡಿಸಿದ್ದಾರೆ. ಹಾಗಾಗಿ ಈ ಸಿನಿಮಾದ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.



**ಕೈ ಜೋಡಿಸಿದ ಕನ್ನಡದ ನಟ ಯಶ್**

# ಸ್ಫೋಟಕ ಹಾಫ್‌ಸೆಂಚುರಿ ಸಿಡಿಸಿದ ಪೊಲಾರ್ಡ್

ಕೆರಿಬಿಯನ್ ಪ್ರೀಮಿಯರ್ ಲೀಗ್‌ನ 12ನೇ ಪಂದ್ಯದಲ್ಲಿ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡದ ನಾಯಕ ಕೀರನ್ ಪೊಲಾರ್ಡ್ 7 ಸಿಕ್ಸ್ ಸಿಡಿಸಿ ಅಬ್ಬರಿಸಿದ್ದಾರೆ. ವಿಶೇಷ ಎಂದರೆ ಈ ಪಂದ್ಯದಲ್ಲಿ ಏಳು ಸಿಕ್ಸ್ ಬಾರಿಸಿದರೂ ಪೊಲಾರ್ಡ್ ಬ್ಯಾಟ್‌ನಿಂದ ಒಂದೇ ಒಂದು ಫೋರ್ ಮೂಡಿಬಂದಿರಲಿಲ್ಲ. ಅಲ್ಲದೆ ಅಜೇಯ ಅರ್ಧಶತಕ ಬಾರಿಸಿದ್ದಾರೆ.

ಕೆರಿಬಿಯನ್ ಪ್ರೀಮಿಯರ್ ಲೀಗ್‌ನ 12ನೇ ಪಂದ್ಯದಲ್ಲಿ ಕೀರನ್ ಪೊಲಾರ್ಸ್ ಸ್ಫೋಟಕ ಅರ್ಧಶತಕ ಸಿಡಿಸಿ ಮಿಂಚಿದ್ದಾರೆ. ಈ ಅರ್ಧತಕದೊಂದಿಗೆ ರಣರೋಚಕ ಪಂದ್ಯದಲ್ಲಿ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡವು ಜಯಭೇರಿ ಬಾರಿಸಿದೆ. ಸಸೇಂಟ್ ಲೂಸಿಯಾದ ಡೇರೆನ್ ಸ್ಯಾಮಿ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಟಿಕೆಆರ್ ತಂಡವು ಬೌಲಿಂಗ್ ಆಯ್ದುಕೊಂಡಿದ್ದರು.

ಅದರಂತೆ ಮೊದಲು ಬ್ಯಾಟ್ ಮಾಡಿದ ಸೇಂಟ್ ಲೂಸಿಯಾ ಕಿಂಗ್ಸ್ ತಂಡವು 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 187 ರನ್ ಕಲೆಹಾಕಿತು. ಈ ಕಠಿಣ ಗುರಿಯನ್ನು ಟ್ರಿನ್‌ಬಾಗೊ ನೈಟ್ ರೈಡರ್ಸ್ ಪರ ಶಕ್ಕೆರೆ ಪ್ಯಾರಿಸ್ 33 ಎಸೆತಗಳಲ್ಲಿ 57 ರನ್ ಬಾರಿಸಿದರು. ಆದರೆ ಮಧ್ಯಮ ಕ್ರಮಾಂಕದ ಬ್ಯಾಟರ್‌ಗಳ ಪೆವಿಲಿಯನ್ ಪರೇಡ್‌ನಿಂದ ಟಿಕೆಆರ್ ತಂಡವು ಸಂಕಷ್ಟಕ್ಕೆ ಸಿಲುಕಿತು. ಈ ಹಂತದಲ್ಲಿ ಕಣಕ್ಕಿಳಿದ ನಾಯಕ ಕೀರನ್ ಪೊಲಾರ್ಡ್ ಭರ್ಜರಿ ಇನಿಂಗ್ಸ್ ಆಡಿದರು. ಅಂತಿಮ ಓವರ್‌ಗಳಲ್ಲಿ ಅಬ್ಬರಿಸಿದ ಪೊಲಾರ್ಡ್ ತಂಡಕ್ಕೆ ಗೆಲುವಿನ ಆಸೆ ಚಿಗುರಿಸಿದರು. ಇದಾಗ್ಯೂ ಕೊನೆಯ ಎರಡು ಓವರ್‌ಗಳಲ್ಲಿ 27 ರನ್‌ಗಳ ಅವಶ್ಯಕತೆಯಿತ್ತು. ಮ್ಯಾಥ್ಯೂ ಫೋರ್ಡ್ ಎಸೆದ 19ನೇ ಓವರ್‌ನಲ್ಲಿ 4 ಭರ್ಜರಿ ಸಿಕ್ಸ್ ಸಿಡಿಸುವ ಮೂಲಕ ಕೀರನ್ ಪೊಲಾರ್ಡ್ ಇಡೀ ಪಂದ್ಯದ ಚಿತ್ರಣ ಬದಲಿಸಿದರು. ಅಲ್ಲದೆ ಕೇವಲ 19 ಎಸೆತಗಳಲ್ಲಿ 7 ಸಿಕ್ಸರ್‌ನೊಂದಿಗೆ 52 ರನ್ ಸಿಡಿಸಿ ಕೀರನ್ ಪೊಲಾರ್ಡ್ 19.1 ಓವರ್‌ಗಳಲ್ಲಿ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡವನ್ನು ಗೆಲುವಿನ ದಡ ಸೇರಿಸಿದರು.



# ಮತ್ತೆ 5 ವಿಕೆಟ್ ಕಬಳಿಸಿ ಮಿಂಚಿದ ಚಹಲ್

ಇಂಗ್ಲೆಂಡ್‌ನಲ್ಲಿ ನಡೆದ ಒನ್ ಡೇ ಕಪ್ ಟೂರ್ನಿಯಲ್ಲಿ ನಾರ್ಥಾಂಪ್ಟನ್ ಶೈರ್ ತಂಡದ ಪರ ಕಣಕ್ಕಿಳಿದಿದ್ದ ಯುಜ್ವೇಂದ್ರ ಚಹಲ್ ಚೊಚ್ಚಲ ಪಂದ್ಯದಲ್ಲೇ ಐದು ವಿಕೆಟ್ ಉರುಳಿಸಿದ್ದರು. ಇದೀಗ ಕೌಂಟಿ ಚಾಂಪಿಯನ್‌ಶಿಪ್ ಪಂದ್ಯದಲ್ಲೂ ಚಹಲ್ ಸ್ಪಿನ್ ಮೋಡಿ ಮಾಡಿ ಐದು ವಿಕೆಟ್ ಕಬಳಿಸಿದ್ದಾರೆ. ಇಂಗ್ಲೆಂಡ್‌ನ ನಾರ್ಥಾಂಪ್ಟನ್‌ನ ಕೌಂಟಿ ಮೈದಾನದಲ್ಲಿ ನಡೆಯುತ್ತಿರುವ ಕೌಂಟಿ ಚಾಂಪಿಯನ್‌ಶಿಪ್‌ನ 47ನೇ ಪಂದ್ಯದಲ್ಲಿ ಯುಜ್ವೇಂದ್ರ ಚಹಲ್ 5 ವಿಕೆಟ್ ಕಬಳಿಸಿ ಮಿಂಚಿದ್ದಾರೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ನಾರ್ಥಾಂಪ್ಟನ್ ಶೈರ್ ತಂಡವು ಮೊದಲು ಬ್ಯಾಟಿಂಗ್ ಮಾಡಿತು.



ಪ್ರಥಮ ಇನಿಂಗ್ಸ್‌ನಲ್ಲಿ ನಾರ್ಥಾಂಪ್ಟನ್ ಶೈರ್ ತಂಡವನ್ನು ಡರ್ಬಿಶೈರ್ ಬೌಲರ್‌ಗಳು ಕೇವಲ 219 ರನ್‌ಗಳಿಗೆ ಆಲೌಟ್ ಮಾಡಿದ್ದರು. ಇದರ ಬೆನ್ನಲ್ಲೇ ಇನಿಂಗ್ಸ್ ಆರಂಭಿಸಿದ ಡರ್ಬಿಶೈರ್ ಪಡೆಗೆ ಯುಜ್ವೇಂದ್ರ ಚಹಲ್ ಆಘಾತದ ಮೇಲೆ ಆಘಾತ ನೀಡಿದರು. ಅತ್ಯುತ್ತಮ ಸ್ಪಿನ್ ಮೋಡಿ ಮಾಡಿದ ಯುಜ್ವೇಂದ್ರ ಚಹಲ್ 16.3 ಓವರ್‌ಗಳಲ್ಲಿ 45 ರನ್ ನೀಡಿ 5 ವಿಕೆಟ್ ಉರುಳಿಸಿದರು. ಈ ಮೂಲಕ ಡರ್ಬಿಶೈರ್ ತಂಡವನ್ನು ಕೇವಲ 165 ರನ್‌ಗಳಿಗೆ ಆಲೌಟ್ ಮಾಡುವಲ್ಲಿ ಚಹಲ್ ಪ್ರಮುಖ ಪಾತ್ರವಹಿಸಿದರು. ಈ ಐದು ವಿಕೆಟ್‌ಗಳೊಂದಿಗೆ ಯುಜ್ವೇಂದ್ರ ಚಹಲ್ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 100 ವಿಕೆಟ್‌ಗಳ ಸಾಧನೆ ಮಾಡಿದ್ದಾರೆ. ಈವರೆಗೆ 38 ಫಸ್ಟ್ ಕ್ಲಾಸ್ ಪಂದ್ಯಗಳನ್ನಾಡಿರುವ ಚಹಲ್ ಒಟ್ಟು 102 ವಿಕೆಟ್ ಕಬಳಿಸಿದ್ದಾರೆ. ಇದೇ ವೇಳೆ 3 ಬಾರಿ 5 ವಿಕೆಟ್‌ಗಳನ್ನು ಉರುಳಿಸಿದ್ದಾರೆ.

ಇದಕ್ಕೂ ಮುನ್ನ ಯುಜ್ವೇಂದ್ರ ಚಹಲ್ ಕೌಂಟಿ ಕ್ರಿಕೆಟ್‌ನಲ್ಲಿ ಒನ್ ಡೇ ಕಪ್ ಟೂರ್ನಿ ಆಡಿದ್ದರು. ನಾರ್ಥಾಂಪ್ಟನ್ ಶೈರ್ ತಂಡದ ಪರ ಕಣಕ್ಕಿಳಿದಿದ್ದ ಚಹಲ್ ಚೊಚ್ಚಲ ಪಂದ್ಯದಲ್ಲೇ ಐದು ವಿಕೆಟ್ ಉರುಳಿಸಿದ್ದರು. ಕೆಂಟ್ ತಂಡದ ವಿರುದ್ಧದ ಈ ಪಂದ್ಯದಲ್ಲಿ 10 ಓವರ್ ಎಸೆತಗಳನ್ನು ಎಸೆದಿದ್ದ ಚಹಲ್ 5 ಮೇಡನ್ ಓವರ್‌ಗಳೊಂದಿಗೆ ಕೇವಲ 14 ರನ್ ನೀಡಿ 5 ವಿಕೆಟ್ ಪಡೆದು ಮಿಂಚಿದ್ದರು. ಇದೀಗ ಕೌಂಟಿ ಚಾಂಪಿಯನ್‌ಶಿಪ್‌ನಲ್ಲೂ ಐದು ವಿಕೆಟ್‌ಗಳ ಸಾಧನೆ ಮಾಡಿದ್ದಾರೆ. ಇನ್ನು ಯುಜ್ವೇಂದ್ರ ಚಹಲ್ ಅವರ ಸ್ಪಿನ್ ಮೋಡಿಯಿಂದಾಗಿ ಮೊದಲ ಇನಿಂಗ್ಸ್‌ನಲ್ಲಿ 54 ರನ್‌ಗಳ ಮುನ್ನಡೆ ಪಡೆದಿರುವ ನಾರ್ಥಾಂಪ್ಟನ್ ಶೈರ್ ಇನಿಂಗ್ಸ್ ಆರಂಭಿಸಿದೆ. 46 ಓವರ್‌ಗಳ ಮುಕ್ತಾಯದ ವೇಳೆಗೆ 5 ವಿಕೆಟ್ ಕಳೆದುಕೊಂಡು 178 ರನ್ ಕಲೆಹಾಕಿ, 232 ರನ್‌ಗಳ ಮುನ್ನಡೆ ಪಡೆದುಕೊಂಡಿದೆ.



# ಯಾರಾಗ್ತಾರೆ ಕೆಕೆಆರ್ ತಂಡದ ಮೆಂಟರ್

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18 ರ ಆರಂಭಕ್ಕೂ ಮುನ್ನ ತಂಡಕ್ಕೆ ಹೊಸ ಮೆಂಟರ್ ಅನ್ನು ನೇಮಕ ಮಾಡಲು ಕೊಲ್ಕತ್ತಾ ನೈಟ್ ರೈಡರ್ಸ್ ಫ್ರಾಂಚೈಸಿ ಮುಂದಾಗಿದೆ. ಕಳೆದ ಸೀಸನ್‌ನಲ್ಲಿ ಕೆಕೆಆರ್ ತಂಡದ ಮೆಂಟರ್ ಆಗಿದ್ದ ಗೌತಮ್ ಗಂಭೀರ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಇದೀಗ ಟೀಮ್ ಇಂಡಿಯಾ ಕೋಚ್ ಆಗಿದ್ದಾರೆ. ಹೀಗಾಗಿ ಕೊಲ್ಕತ್ತಾ ನೈಟ್ ರೈಡರ್ಸ್ ಫ್ರಾಂಚೈಸಿಯು ಹೊಸ ಮೆಂಟರ್ ಆಯ್ಕೆಗೆ ಮುಂದಾಗಿದೆ.

ಅದರಲ್ಲೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಮಾಜಿ ಆಟಗಾರನಾಗಿ ಜಾಕ್ಸ್ ಕಾಲಿಸ್ ಈ ಪಟ್ಟಿಯಲ್ಲಿ ಮುಂಚೂಣಿಯಲ್ಲಿದ್ದಾರೆ. 2012 ಮತ್ತು 2014 ರಲ್ಲಿ ಕೆಕೆಆರ್ ತಂಡವು ಚಾಂಪಿಯನ್ ಪಟ್ಟಕ್ಕೇರುವಲ್ಲಿ ಕಾಲಿಸ್ ಪ್ರಮುಖ ಪಾತ್ರವಹಿಸಿದ್ದರು. ಅಲ್ಲದೆ ಕೆಲ ಪಂದ್ಯಗಳಲ್ಲಿ ಕೆಕೆಆರ್ ತಂಡವನ್ನು ಮುನ್ನಡೆಸಿದ್ದಾರೆ. ಹೀಗಾಗಿಯೇ ಜಾಕ್ಸ್ ಕಾಲಿಸ್ ಅವರನ್ನು ಮೆಂಟರ್ ಸ್ಥಾನದಲ್ಲಿ ಕೂರಿಸಲು ಕೊಲ್ಕತ್ತಾ ನೈಟ್ ರೈಡರ್ಸ್ ಆಸಕ್ತಿ ತೋರಿಸಿದೆ. ಮತ್ತೊಂದೆಡೆ ಆಸ್ಟ್ರೇಲಿಯಾ ಕ್ರಿಕೆಟಿಗ ರಿಕಿ ಪಾಂಟಿಂಗ್ ಕೂಡ ಕೆಕೆಆರ್ ತಂಡದ ಮಾಜಿ ಆಟಗಾರ. 2008 ರಲ್ಲಿ ಕೆಕೆಆರ್ ಪರ ಕಣಕ್ಕಿಳಿಯುವ ಮೂಲಕ ಅವರು ಐಪಿಎಲ್ ಕೆರಿಯರ್ ಆರಂಭಿಸಿದ್ದರು. ಅಲ್ಲದೆ ಕಳೆದ ಸೀಸನ್‌ವರೆಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಕೋಚ್ ಆಗಿಯೂ ಕಾರ್ಯ ನಿರ್ವಹಿಸಿದ್ದಾರೆ. ಹೀಗಾಗಿ ರಿಕಿ ಪಾಟಿಂಗ್ ಅವರೊಂದಿಗೂ ಕೆಕೆಆರ್ ಫ್ರಾಂಚೈಸಿ ಮಾತುಕತೆ ನಡೆಸಿದೆ ಎಂದು ವರದಿಯಾಗಿದೆ.

ಹೀಗಾಗಿ ಐಪಿಎಲ್ 2025 ರಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಮೆಂಟರ್ ಸ್ಥಾನದಲ್ಲಿ ಜಾಕ್ಸ್ ಕಾಲಿಸ್ ಅಥವಾ ರಿಕಿ ಪಾಂಟಿಂಗ್ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿದೆ. ಅತ್ತ ಹಾಲಿ ಚಾಂಪಿಯನ್ ಪಟ್ಟದೊಂದಿಗೆ ಮುಂದಿನ ಸೀಸನ್‌ನಲ್ಲಿ ಕಣಕ್ಕಿಳಿಯಲಿರುವ ಕೆಕೆಆರ್ ತಂಡವು ಹೊಸ ಮೆಂಟರ್ ಅಧೀನದಲ್ಲಿ ಹೇಗೆ ಪ್ರದರ್ಶನ ನೀಡಲಿದೆ ಎಂಬುದನ್ನು ಕಾದು ನೋಡಬೇಕಿದೆ.

# 16 ವರ್ಷಗಳ ಬಳಿಕ ಟೆಸ್ಟ್‌ನಲ್ಲಿ ಮೂರು ದಿನದಾಟಗಳು ರದ್ದು..!

## ನೋಯ್ಡಾದಲ್ಲಿ ನಡೆಯಬೇಕಿರುವ ಪಂದ್ಯಕ್ಕೆ ಮಳೆ ಅಡಚಣೆ, 5 ದಿನಗಳ ಈ ಪಂದ್ಯದ ಮೊದಲ ಮೂರು ದಿನದಾಟಗಳು ರದ್ದು

ಅಫ್ಘಾನಿಸ್ತಾನ್ ಹಾಗೂ ನ್ಯೂಝಿಲೆಂಡ್ ನಡುವಣ ಏಕೈಕ ಟೆಸ್ಟ್ ಪಂದ್ಯವು ಮೂರು ದಿನ ಕಳೆದರೂ ಶುರುವಾಗಿಲ್ಲ. ನೋಯ್ಡಾದಲ್ಲಿ ನಡೆಯಬೇಕಿರುವ ಈ ಪಂದ್ಯಕ್ಕೆ ಮಳೆ ಅಡಚಣೆಯನ್ನುಂಟು ಮಾಡುತ್ತಿದೆ. ಹೀಗಾಗಿ 5 ದಿನಗಳ ಈ ಪಂದ್ಯದ ಮೊದಲ ಮೂರು ದಿನದಾಟಗಳು ರದ್ದಾಗಿವೆ. ಅಫ್ಘಾನಿಸ್ತಾನ್ ಮತ್ತು ನ್ಯೂಝಿಲೆಂಡ್ ನಡುವಣ ಟೆಸ್ಟ್ ಪಂದ್ಯದ ಮೂರು ದಿನದಾಟಗಳು ಸಂಪೂರ್ಣ ರದ್ದಾಗಿದೆ. ಭಾರತದ ಗ್ರೇಟರ್ ನೋಯ್ಡಾದ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಮೈದಾನದಲ್ಲಿ ನಡೆಯಬೇಕಿದ್ದ ಮೊದಲ ದಿನದಾಟವು ಮಳೆಯ ಕಾರಣ ಸಂಪೂರ್ಣ ರದ್ದಾಗಿತ್ತು. ಇನ್ನು ಮೈದಾನವು ಸಂಪೂರ್ಣ ಒದ್ದೆಯಾಗಿದ್ದ ಕಾರಣ ದ್ವಿತೀಯ ದಿನದಾಟದಲ್ಲಿ ಪಂದ್ಯ ನಡೆದಿರಲಿಲ್ಲ. ಇನ್ನು ಮೂರನೇ ದಿನದಾಟದಲ್ಲಿ ಪಂದ್ಯ ಶುರುವಾಗುವ ನಿರೀಕ್ಷೆಯಿತ್ತು. ಆದರೆ ಮಂಗಳವಾರ ರಾತ್ರಿ ಸುರಿದ ಭಾರೀ ವರ್ಷಧಾರೆಯಿಂದಾಗಿ ಮೂರನೇ ದಿನದಾಟವು ಮಳೆಗೆ ಅಹುತಿಯಾಗಿದೆ.

ವಿಶೇಷ ಎಂದರೆ ಟೆಸ್ಟ್ ಕ್ರಿಕೆಟ್‌ನಲ್ಲಿ ಹೀಗೆ ಮೂರು ದಿನದಾಟಗಳು ರದ್ದಾಗಿರುವುದು ತುಂಬಾ ವಿರಳ. ಅದರಲ್ಲೂ ಇಂತಹದೊಂದು ರದ್ದತಿ ನೋಡಿ 16 ವರ್ಷಗಳ ಕಳೆದಿದ್ದವು. ಅಂದರೆ ಕೊನೆಯ ಬಾರಿ ಟೆಸ್ಟ್ ಪಂದ್ಯದ ಮೂರು ದಿನದಾಟಗಳು ಸಂಪೂರ್ಣ ರದ್ದಾಗಿರುವುದು 2008 ರಲ್ಲಿ. ಕಾಕತಾಳೀಯ ಎಂಬಂತೆ ಅಂದು ಸಹ ನ್ಯೂಝಿಲೆಂಡ್ ತಂಡ ಕಣದಲ್ಲಿತ್ತು. 2008 ರಲ್ಲಿ ಮೀರ್‌ಪುರ್‌ನಲ್ಲಿ ನಡೆದಿದ್ದ ಬಾಂಗ್ಲಾದೇಶ್ ಮತ್ತು ನ್ಯೂಝಿಲೆಂಡ್ ನಡುವಣ ಟೆಸ್ಟ್ ಪಂದ್ಯದ ಮೂರು ದಿನದಾಟಗಳು ಮಳೆಗೆ ಅಹುತಿಯಾಗಿತ್ತು. ಇದೀಗ 16 ವರ್ಷಗಳ ಬಳಿಕ ನ್ಯೂಝಿಲೆಂಡ್ ಹಾಗೂ ಅಫ್ಘಾನಿಸ್ತಾನ್ ನಡುವಣ ಟೆಸ್ಟ್ ಪಂದ್ಯದ ಮೂರು ದಿನದಾಟಗಳು ರದ್ದಾಗಿದೆ.

**ನಡೆಯದ ಟಾಸ್ ಪ್ರಕ್ರಿಯೆ:** ಕುತೂಹಲಕಾರಿ ವಿಷಯ ಎಂದರೆ ಅಫ್ಘಾನಿಸ್ತಾನ್ ಹಾಗೂ ನ್ಯೂಝಿಲೆಂಡ್ ನಡುವಣ ಟೆಸ್ಟ್ ಪಂದ್ಯದ ಮೂರು ದಿನದಾಟಗಳು ರದ್ದಾದರೂ, ಇನ್ನೂ ಸಹ ಟಾಸ್ ಪ್ರಕ್ರಿಯೆ ನಡೆದಿಲ್ಲ. ಅಂದರೆ ಉಭಯ ತಂಡಗಳ ನಾಯಕರುಗಳು ಮೈದಾನಕ್ಕಿಳಿದು ಟಾಸ್ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಅವಕಾಶವೇ ಸಿಕ್ಕಿಲ್ಲ.



**ಪಂದ್ಯ ಡ್ರಾ ಸಾಧ್ಯತೆ**

**ಅಫ್ಘಾನಿಸ್ತಾನ್ ಮತ್ತು ನ್ಯೂಝಿಲೆಂಡ್ ನಡುವಣ ಟೆಸ್ಟ್ ಪಂದ್ಯಕ್ಕೆ ಇನ್ನು ಕೇವಲ 2 ದಿನದಾಟಗಳು ಮಾತ್ರ ಬಾಕಿಯಿದೆ. ಗುರುವಾರ ಪಂದ್ಯವನ್ನು ಆಯೋಜಿಸಲು ಸಾಧ್ಯವಾದರೂ 4 ಇನಿಂಗ್ಸ್‌ಗಳನ್ನಾಡಲು ಅವಕಾಶ ಸಿಗುವ ಸಾಧ್ಯತೆಯಿಲ್ಲ. ಹೀಗಾಗಿ ಈ ಪಂದ್ಯವು ಡ್ರಾನಲ್ಲಿ ಅಂತ್ಯಗೊಳ್ಳುವ ಸಾಧ್ಯತೆ ಹೆಚ್ಚಿದೆ.**

ಹೀಗಾಗಿ ನಾಲ್ಕನೇ ದಿನದಾಟದಲ್ಲಿ ಟಾಸ್ ಪ್ರಕ್ರಿಯೆ ನಡೆಯುವ ನಿರೀಕ್ಷೆಯಿದೆ.

**ಅಫ್ಘಾನಿಸ್ತಾನ್ ಟೆಸ್ಟ್ ತಂಡ:** ಹಶ್ಮತುಲ್ಲಾ ಶಾಹಿದಿ (ನಾಯಕ), ಇಕ್ರಮ್ ಅಲಿಖಿಲ್ (ವಿಕೆಟ್ ಕೀಪರ್) , ಇಬ್ರಾಹಿಂ ಝುದ್ರಾನ್ , ರಹಮತ್ ಷಾ , ರಿಯಾಝ್ ಹಸನ್ , ಬಹಿರ್ ಶಾ , ಶಾಹಿದುಲ್ಲಾ ಕಮಾಲ್ , ಅಜ್ಮತುಲ್ಲಾ ಒಮರ್ಜಾಯ್ , ಖೈಸ್ ಅಹ್ಮದ್ , ಜಹೀರ್ ಖಾನ್ , ಖಲೀಲ್ ಅಹ್ಮದ್ , ಜಿಯಾ ಉರ್ ರೆಹಮಾನ್, ಅಫ್ಸರ್ ಝುಝೈ, ನಿಜಾತ್ ಮಸೂದ್, , ಅಬ್ದುಲ್ ಮಲಿಕ್.

**ನ್ಯೂಝಿಲೆಂಡ್ ಟೆಸ್ಟ್ ತಂಡ:** ಟಾಮ್ ಲ್ಯಾಥಮ್ (ವಿಕೆಟ್ ಕೀಪರ್) , ಟಿಮ್ ಸೌಥಿ (ನಾಯಕ) , ಡೆವೊನ್ ಕಾನ್ವೆ , ಕೇನ್ ವಿಲಿಯಮ್ಸನ್ , ಡೇರಿಲ್ ಮಿಚೆಲ್ , ವಿಲ್ ಯಂಗ್ , ಗ್ಲೆನ್ ಫಿಲಿಪ್ಸ್ , ಮೈಕೆಲ್ ಬ್ರೇಸ್‌ವೆಲ್ , ಮಿಚೆಲ್ ಸ್ಯಾಂಟ್ನರ್ , ಅಜಾಜ್ ಪಟೇಲ್ , ಮ್ಯಾಟ್ ಹೆನ್ರಿ , ಟಾಮ್ ಬ್ಲುಂಡೆಲ್ , ರಚಿನ್ ರವೀಂದ್ರ, ಬೆನ್ ಸೀರ್ಸ್.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966